☞ ಹಾವೇರಿ
☞ ಗದಗ
☞ ಧಾರವಾಡ
☞ ದಾವಣಗೆರೆ
☞ ಚಿತ್ರದುರ್ಗ
☞ ವಿಜಯನಗರ
☞ ಶಿವಮೊಗ್ಗ
☞ ಬಳ್ಳಾರಿ

ಸುದ್ದಿ, ಫೋಟೋ ಹಾಗೂ ಜಾಹೀರಾತುಗಳಿಗೆ ಸಂಪರ್ಕಿಸಿ : 9480410207

ಪಾಂಡವ

PANDAVA Regional Kannada News Paper ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಪತ್ರಿಕೆ, ಜಾಹೀರಾತು ಇಸ್ತಿಯಾರನಾಮೆಗಳಿಗಾಗಿ ಸಂಪರ್ಕಿಸಿ :
ಮೊಬೈಲ್ ನಂ. :
9742789207
7411679202

* Volume : XVII * Issue : 080 * WEDNESDAY 18, NOVEMBER 2026 * Editor : S.T. VEDAMURTHY * Page : 6 * Rs : 2.50 * RNI No. KARKAN/2011/39005 * PMG/KA/NK/HVR-028/2026-28 * pandavarnr@gmail.com * Mob No.: 9742789207

ಪ್ರಮುಖ ಸಂಕ್ಷಿಪ್ತ ಸುದ್ದಿ

ಬಳ್ಳಾರಿಯ ಸರ್ಕಾರಿ ಕಾಲೇಜಿಗೆ ಸ್ಥಳ ನಿಯುಕ್ತಿ



ಪಾಂಡವ ನ್ಯೂಸ್, ಹೊಸಪೇಟೆ : ನಗರದ ಶ್ರೀ ಶಂಕರ್ ಆನಂದ್ ಸಿಂಗ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊ. ವೀರಭದ್ರಪ್ಪ ತಂಬ್ರಳ್ಳಿ ಅವರಿಗೆ ಗ್ರೇಡ್–1 ಪ್ರಾಂಶುಪಾಲರಾಗಿ ಪದೋನ್ನತಿ ದೊರೆತಿದೆ. ಬಳ್ಳಾರಿಯ ಶ್ರೀ ಗಾಲಿ ರುಕ್ಮಿಣಮ್ಮ ಚೆನ್ನಾರೆಡ್ಡಿ ಮೆಮೋರಿಯಲ್ ಕಾಮರ್ಸ್ ಅಂಡ್ ಮ್ಯಾನೇಜ್‌ಮೆಂಟ್ ಕಾಲೇಜಿಗೆ ಸ್ಥಳ ನಿಯುಕ್ತಿಗೊಳಿಸಿ ಕಾಲೇಜು ಶಿಕ್ಷಣ ಇಲಾಖೆ ಆದೇಶ ಹೊರಡಿಸಿದೆ.

ಕಾಲೇಜು ಶಿಕ್ಷಣ ಇಲಾಖೆಯ ಆಯುಕ್ತರು ಕೌನ್ಸೆಲಿಂಗ್ ಮೂಲಕ 222 ಅಭ್ಯರ್ಥಿಗಳಿಗೆ ಗ್ರೇಡ್–1 ಪ್ರಾಂಶುಪಾಲರ ನೇಮಕಾತಿ ಹಾಗೂ ಸ್ಥಳ ನಿಯುಕ್ತಿ ಆದೇಶ ಹೊರಡಿಸಿದ್ದಾರೆ. ಅದರಂತೆ ಪ್ರೊ. ತಂಬ್ರಳ್ಳಿ ಅವರನ್ನು ಬಳ್ಳಾರಿ ನಗರದ ಕಾಲೇಜಿಗೆ ನಿಯುಕ್ತಿಗೊಳಿಸಲಾಗಿದೆ.

ಮೇ 2022ರಿಂದ ಹೊಸಪೇಟೆಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾಗಿ ಸೇವೆ ಸಲ್ಲಿಸುತ್ತಿರುವ ಇವರು, ಹಂಪಿ ಕನ್ನಡ ವಿಶ್ವವಿದ್ಯಾಲಯದ ಅಭಿವೃದ್ಧಿ ಅಧ್ಯಯನ ವಿಭಾಗದ ಮೂಲಕ ಸಂಶೋಧನಾ ವಿದ್ಯಾರ್ಥಿಗಳಿಗೆ ಮಾರ್ಗದರ್ಶಕರಾಗಿಯೂ ಕಾರ್ಯನಿರ್ವಹಿಸುತ್ತಿದ್ದಾರೆ. ಈಗಾಗಲೇ ಇಬ್ಬರು ಸಂಶೋಧನಾ ವಿದ್ಯಾರ್ಥಿಗಳು ಇವರ ಮಾರ್ಗದರ್ಶನದಲ್ಲಿ ಪಿಎಚ್.ಡಿ. ಪದವಿ ಪಡೆದಿದ್ದಾರೆ.

ಮಾ. 23, 2026ರಿಂದ ಕಾಲೇಜಿನ ಪ್ರಭಾರಿ ಪ್ರಾಂಶುಪಾಲರಾಗಿ ಜವಾಬ್ದಾರಿ ವಹಿಸಿಕೊಂಡಿದ್ದ ಇವರು, ಅಲ್ಪಾವಧಿಯಲ್ಲೇ ಕಾಲೇಜಿನ ಶೈಕ್ಷಣಿಕ ಹಾಗೂ ಪಠ್ಯೇತರ ಚಟುವಟಿಕೆಗಳಿಗೆ ಹೊಸ ಚೈತನ್ಯ ನೀಡಿದ್ದರು. ಕಾಲೇಜಿನ ವಿವಿಧ ವಿಭಾಗಗಳು ಹಾಗೂ ಆಂತರಿಕ ಗುಣಮಟ್ಟ ಭರವಸೆ ಕೋಶದ (ಐಕ್ಯೂಎಸಿ) ಸಹಯೋಗದಲ್ಲಿ ಸಾಂಸ್ಕೃತಿಕ ಹಬ್ಬ, ಕ್ರೀಡಾಕೂಟ ಹಾಗೂ ವಿವಿಧ ಸ್ಪರ್ಧೆಗಳನ್ನು ಆಯೋಜಿಸಿ ವಿದ್ಯಾರ್ಥಿಗಳಲ್ಲಿ ಶಿಸ್ತು, ನಾಯಕತ್ವ ಗುಣ, ಸ್ಪರ್ಧಾತ್ಮಕ ಮನೋಭಾವ ಮತ್ತು ಸೃಜನಶೀಲತೆ ಬೆಳೆಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದರು.

ಪ್ರೊ. ವೀರಭದ್ರಪ್ಪ ತಂಬ್ರಳ್ಳಿ ಅವರ ಪದೋನ್ನತಿಗೆ ಸಹಪಾಠಿಗಳು, ಸ್ನೇಹಿತರು ಹಾಗೂ ಶ್ರೇಯೋಭಿಲಾಷಿಗಳು ಹರ್ಷ ವ್ಯಕ್ತಪಡಿಸಿ ಅಭಿನಂದಿಸಿದ್ದಾರೆ.

ವಿಶ್ವ ವಿಕಲಚೇತನರ ದಿನಾಚರಣೆ: ಪೂರ್ವಭಾವಿ ಸಭೆ

ಪಾಂಡವ ನ್ಯೂಸ್, ಹಾವೇರಿ : ವಿಶ್ವ ವಿಕಲಚೇತನರ ದಿನಾಚರಣೆ ಕುರಿತು ಪೂರ್ವಭಾವಿ ಸಭೆ ಅಪರ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸೋಮವಾರ ಜಿಲ್ಲಾಧಿಕಾರಿಗಳ ಕೋರ್ಟಹಾಲ್‌ನಲ್ಲಿ ಜರುಗಿತು.

ವಿಕಲಚೇತನರಿಗೆ ಕ್ರೀಡಾ ಹಾಗೂ ಸಾಂಸ್ಕೃತಿಕ ಸ್ಪರ್ಧೆ ಆಯೋಜನೆ, ಆಮಂತ್ರಣ ಪತ್ರಿಕೆ, ಗಣ್ಯರ ಆಹ್ವಾನ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಸಭೆಯಲ್ಲಿ ಜಿಲ್ಲಾ ವಿಕಲಚೇತನರ ಸಂಘದ ಅಧ್ಯಕ್ಷರು, ಉಪಾಧ್ಯಕ್ಷರು, ತಾಲೂಕು ಸಂಘದ ಪದಾಧಿಕಾರಿಗಳು, ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರೆಂದು ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿ ಶೀಘ್ರದಲ್ಲಿ ಜಾರಿ: ಲೋಕಸಭಾಧ್ಯಕ್ಷ ಸ್ಪೀಕರ್ ಬಿರ್ಲಾ



ಪಾಂಡವ ನ್ಯೂಸ್, ಬೆಂಗಳೂರು: ಮಹಿಳೆಯರು ಇಂದು ಎಲ್ಲ ರಂಗಗಳಲ್ಲಿ ಮುಂಚೂಣಿಯಲ್ಲಿದ್ದಾರೆ. ಹೀಗಾಗಿ ಸಂಸತ್‌ನಲ್ಲಿ ಶೇ.33ರಷ್ಟು ಮೀಸಲಾತಿ ಶೀಘ್ರದಲ್ಲಿ ಜಾರಿಯಾಗಲಿದೆ. ಈ ಮೂಲಕ ಪಂಚಾಯಿತಿಯಿಂದ ಲೋಕಸಭೆವರೆಗೂ ಮಹಿಳೆಯರಿಗೆ ಮೀಸಲಾತಿ ಸಿಕ್ಕಂತಾಗಲಿದೆ ಎಂದು ಲೋಕಸಭಾ ಸ್ಪೀಕರ್ ಓಂ ಬಿರ್ಲಾ ತಿಳಿಸಿದರು.

ವಿಧಾನಸೌಧದಲ್ಲಿ ಮಂಗಳವಾರ ಆಯೋಜಿಸಲಾಗಿದ್ದ ಕಾಮನ್ ವೆಲ್ತ್ ಮಹಿಳಾ ಸಂಸದೀಯರ ಭಾರತ ಪ್ರಾದೇಶಿಕ ಸಮ್ಮೇಳನದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಆಧುನಿಕ ಭಾರತದಲ್ಲಿ ಮಹಿಳೆಯರು ಸೇನೆ, ಅಂತರಿಕ್ಷ ಸೇರಿ ಎಲ್ಲ ಕ್ಷೇತ್ರಗಳಲ್ಲೂ ಸಾಧನೆ ಮಾಡಿದ್ದಾರೆ. ದೇಶದ ಗಡಿಗಳಲ್ಲೂ ದೇಶಕಾಯುವ ಕೆಲಸ ಮಾಡುತ್ತಿದ್ದಾರೆ. ಸಮಾಜದ ಕಟ್ಟಕಡೆಯ ಮಹಿಳೆಗೂ ಸರ್ಕಾರದ ಸೌಲಭ್ಯಗಳು ದೊರಕಬೇಕು. ಅತೀ ಶೀಘ್ರದಲ್ಲಿ ವಿಧಾನಸಭಾ, ಲೋಕಸಭೆಯಲ್ಲಿ ಶೇ.33 ಮಹಿಳಾ ಮೀಸಲಾತಿ ಜಾರಿಯಾಗಲಿದೆ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಮಹಿಳಾ ಸಮಾನತೆ ಬಗ್ಗೆ 12 ಶತಮಾನದಲ್ಲಿಯೇ ಚರ್ಚೆ ನಡೆಸಲಾಗಿತ್ತು. ಅನುಭವ ಮಂಟಪದಲ್ಲಿ ಮಹಿಳೆಯರಿಗೂ ಅವಕಾಶ ಸಿಕ್ಕಿತ್ತು. ಮಹಿಳೆಯರ ಪಾಲ್ಗೊಳ್ಳುವಿಕೆಯಿಂದ ದೇಶದ ಪ್ರಜಾಪ್ರಭುತ್ವ ಮತ್ತಷ್ಟು ಬಲಗೊಳ್ಳಲಿದೆ. ಸ್ವತಂತ್ರ ಹೋರಾಟದಲ್ಲಿ ಝಾನ್ಸಿ ರಾಣಿ ಲಕ್ಷ್ಮೀಬಾಯಿ ಸೇರಿದಂತೆ ಹಲವು ಮಹಿಳೆಯರು ಭಾಗಿಯಾಗಿದ್ದಾರೆ. ರಾಜಕೀಯದಲ್ಲಿ ಮಹಿಳೆಯರ ಸಹಭಾಗಿತ್ವ ಮುಖ್ಯವಾಗಿದ್ದು, ಪಂಚಾಯ್ತಿಯಿಂದ ಪಾರ್ಲಿಮೆಂಟ್‌ವರೆಗೂ ಮೀಸಲಾತಿ ಸಿಕ್ಕಂತಾಗಲಿದೆ. ಮಹಿಳೆಯರಿಗೆ ಪ್ರಾತಿನಿಧ್ಯ ಸಿಕ್ಕರೆ ಮಾತ್ರ ಪ್ರಜಾಪ್ರಭುತ್ವ ಯಶಸ್ವಿಯಾಗಲಿದೆ. ಪಂಚಾಯ್ತಿಗಳಲ್ಲಿಯೂ ಎಐ ತಂತ್ರಜ್ಞಾನ ಬಳಕೆಯಾಗಬೇಕು ಮತ್ತು ಮಹಿಳಾ ಪ್ರತಿನಿಧಿಗಳು ಡಿಜಿಟಲ್ ಸಶಕ್ತರಾಗಬೇಕು ಎಂದು ಅವರು ಆಶಿಸಿದರು.

ದೇಶದ ಪ್ರತಿಯೊಂದು ಪಂಚಾಯಿತಿ, ನಗರಸಭೆ, ವಿಧಾನಸಭೆಯಿಂದ ಹಿಡಿದು ಲೋಕಸಭೆಯವರೆಗಿನ ಜನಪ್ರತಿನಿಧಿಗಳ ಸಾಮರ್ಥ್ಯವನ್ನು ಕೃತಕ ಬುದ್ಧಿಮತ್ತೆ (ಎಐ) ಮತ್ತು ಡಿಜಿಟಲ್ ವೇದಿಕೆಗಳ ಮೂಲಕ ಹೆಚ್ಚಿಸಲು ಬಲವಾದ ಸಾಂಸ್ಥಿಕ ವ್ಯವಸ್ಥೆ ರೂಪಿಸಬೇಕು. ತಂತ್ರಜ್ಞಾನದ ಬಳಕೆಯಿಂದ ಆಡಳಿತದಲ್ಲಿ ಪಾರದರ್ಶಕತೆ ಮೂಡಲಿದ್ದು, ಜವಾಬ್ದಾರಿಯುತ ಮೇಲ್ವಿಚಾರಣೆ ವ್ಯವಸ್ಥೆ ಬಲಗೊಳ್ಳಲಿದೆ ಎಂದರು.

ದೇಶದ ಇತಿಹಾಸ ಮತ್ತು ಪರಂಪರೆಯಲ್ಲಿ ಮಹಿಳೆಯರಿಗೆ ಪ್ರಮುಖ ಸ್ಥಾನವಿದೆ. ಮಹಿಳೆಯರ ಸ್ವಾತಂತ್ರ್ಯ, ಉದ್ಯಮಶೀಲತೆ ಹಾಗೂ ನಾಯಕತ್ವದ ಸಾಮರ್ಥ್ಯ ಅಪಾರವಾಗಿದೆ. ಡಿಜಿಟಲ್ ತಂತ್ರಜ್ಞಾನದಲ್ಲಿ ಮಹಿಳೆಯರನ್ನು ಸಬಲಗೊಳಿಸುವುದರ ಜೊತೆಗೆ, ಪ್ರಜಾಪ್ರಭುತ್ವದ ಆಡಳಿತದಲ್ಲಿ ಅವರ ಪಾಲ್ಗೊಳ್ಳುವಿಕೆಯನ್ನು ಗಣನೀಯವಾಗಿ ಹೆಚ್ಚಿಸಬೇಕಿದೆ. ಮಹಿಳಾ ನಾಯಕತ್ವವು ರಾಷ್ಟ್ರದ ಸಮಗ್ರ, ಸಮತೋಲಿತ ಮತ್ತು ಒಳಗೊಳ್ಳುವಿಕೆಯ ಅಭಿವೃದ್ಧಿಗೆ ಹೊಸ ದೃಷ್ಟಿಕೋನ ನೀಡಲಿದೆ ಎಂದು ಅಭಿಪ್ರಾಯಪಟ್ಟರು.

ಭಿನ್ನಾಭಿಪ್ರಾಯಗಳೇ ಪ್ರಜಾಪ್ರಭುತ್ವದ ಶಕ್ತಿ: ಜನಪ್ರತಿನಿಧಿಗಳು ಕೇವಲ ವ್ಯಕ್ತಿಗಳಲ್ಲ, ಅವರು ಒಂದು ಸಂಸ್ಥೆಯ ಪ್ರತಿನಿಧಿಗಳು. ವಿಭಿನ್ನ ಆಲೋಚನೆಗಳು, ಅಭಿಪ್ರಾಯಗಳು ಮತ್ತು ದೃಷ್ಟಿಕೋನಗಳ ವಿನಿಮಯವೇ ಪ್ರಜಾಪ್ರಭುತ್ವದ ಮೂಲ ಶಕ್ತಿ. ಪ್ರಜಾಪ್ರಭುತ್ವದಲ್ಲಿ ಭಿನ್ನಾಭಿಪ್ರಾಯಗಳಿಗೂ ಅವಕಾಶವಿರಬೇಕು ಮತ್ತು ಅದೇ ವ್ಯವಸ್ಥೆಯ ಅತಿ ದೊಡ್ಡ ಸಾಮರ್ಥ್ಯ. ಸಂವಾದ ಮತ್ತು ಚರ್ಚೆಯ ಮೂಲಕ ಸಮಸ್ಯೆಗಳಿಗೆ ಜವಾಬ್ದಾರಿಯುತವಾಗಿ ಪರಿಹಾರ ಕಂಡುಕೊಳ್ಳುವುದು ಎಲ್ಲರ ಬದ್ಧತೆಯಾಗಬೇಕು ಎಂದರು.

ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವವಾಗಿರುವ ಭಾರತದ ಜವಾಬ್ದಾರಿ ದೊಡ್ಡದಿದೆ. ತಂತ್ರಜ್ಞಾನ ಮತ್ತು ನಾವೀನ್ಯತೆಯ ಪ್ರಮುಖ ಕೇಂದ್ರವಾಗಿರುವ ಬೆಂಗಳೂರು ಇದರ ಮುಂಚೂಣಿಯಲ್ಲಿದೆ. ದೇಶದ ವಿಧಾನಸಭೆ, ಲೋಕಸಭೆ ಹಾಗೂ ಸ್ಥಳೀಯ ಆಡಳಿತ ಸಂಸ್ಥೆಗಳು ತಂತ್ರಜ್ಞಾನ ಬಳಕೆಯಲ್ಲಿ ಮುಂಚೂಣಿಯಲ್ಲಿರಬೇಕು ಎಂದು ಅವರು ಸಲಹೆ ನೀಡಿದರು.

ಸಮಾಜದ ಕಟ್ಟಕಡೆಯ ವ್ಯಕ್ತಿಯ ಧ್ವನಿಯೂ ಆಡಳಿತ ವ್ಯವಸ್ಥೆಯನ್ನು ತಲುಪಬೇಕು ಮತ್ತು ಆತನ ಸಮಸ್ಯೆಗೆ ಪರಿಹಾರ ಒದಗಿಸುವ ಶಕ್ತಿಯಾಗಿ ಜನಪ್ರತಿನಿಧಿಗಳು ಕಾರ್ಯನಿರ್ವಹಿಸಬೇಕು ಎಂದು ಸ್ಪೀಕರ್ ಓಂ ಬಿರ್ಲಾ ಕರೆ ನೀಡಿದರು.

2ನೇ ಪುಟಕ್ಕೆ ▶▶▶

ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಬೇಕು : ನ್ಯಾಯಾಧೀಶ ಬಿರಾದಾರ ದೇವಿಂದ್ರಪ್ಪ ಎನ್.

ಪಾಂಡವ ನ್ಯೂಸ್, ಹಾವೇರಿ : ಇಂದಿನ ದಿನಗಳಲ್ಲಿ ಮಾದಕ ವಸ್ತುಗಳ ಬಳಕೆ ಹೆಚ್ಚುತ್ತಿದ್ದು, ಇದರ ಪರಿಣಾಮ ಇಡಿ ಸಮಾಜ ಮೇಲೆ ಬೀರುತ್ತದೆ. ಆದ್ದರಿಂದ ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸುವುದು ಅಗತ್ಯವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಬಿರಾದಾರ ದೇವಿಂದ್ರಪ್ಪ ಎನ್. ಅವರು ಹೇಳಿದರು.

ಹೊಸರಿತ್ತಿ ಗ್ರಾಮದಲ್ಲಿ ಶನಿವಾರ ಜಿಲ್ಲಾ ನ್ಯಾಯಾಂಗ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ನ್ಯಾಯವಾದಿಗಳ ಸಂಘ, ಪದವಿ ಪೂರ್ವ ಶಿಕ್ಷಣ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಹಾಗೂ ಗುದ್ಲೆಪ್ಪ ಹಳ್ಳಿಕೇರಿ ಶಿಕ್ಷಣ ಸಂಸ್ಥೆ ಸಹಯೋಗದಲ್ಲಿ ಮಾದಕ ವಸ್ತುಗಳ ನಿಷೇಧ ಮತ್ತು ಅಕ್ರಮ ಸಾಗಾಣಿಕೆ ಹಾಗೂ ಮಾಧಕ ವಸ್ತುಗಳ ಕುರಿತು ಜಾಗೃತಿ ಮತ್ತು ಕಾನೂನು ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಾದಕ ವಸ್ತುಗಳ ಅಕ್ರಮ ಸಾಗಾಣಿಕೆಯೂ ಸಹ ಹೆಚ್ಚುತ್ತಿದೆ, ಮನೆಗಳಲ್ಲಿ ಮಾದಕ ವಸ್ತುಗಳ ವ್ಯಸನಿಗಳಿದ್ದಲ್ಲಿ ಅವರಿಗೆ ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ತಿಳುವಳಿಕೆ ನೀಡಬೇಕು. ನಿಮ್ಮ ಶಾಲೆಯ ಸುತ್ತಮುತ್ತಲಿನ ಪರಿಸರದಲ್ಲಿ ಯಾವುದಾದರೂ ಅಂಗಡಿಯಲ್ಲಿ ಮಾದಕ ವಸ್ತುಗಳ ಮಾರಾಟ ಜಾಲವಿದ್ದಲ್ಲಿ ನೀವು ಸಂಬಂಧಿಸಿದವರಿಗೆ ತಿಳಿಸಬೇಕು. ಮಕ್ಕಳಿಗೆ ತೊಂದರೆಯಾದರೆ ಮಕ್ಕಳ ಸಹಾಯವಾಣಿ 1098 ಕರೆ ಮಾಡಬೇಕು ಅಥವಾ 112ಗೆ ಕರೆಮಾಡಬೇಕು ಎಂದು ಹೇಳಿದರು.

ದತ್ತು ಪ್ರಕ್ರಿಯೆ ಕುರಿತು ಪ್ರಮಾಣವಚನ ಬೋಧಿಸಿದರು ಹಾಗೂ ಮಾದಕ ವಸ್ತುಗಳ ಜಾಗೃತಿ ನಡಿಗೆ ಅಭಿಯಾನಕ್ಕೆ ಚಾಲನೆ ನೀಡಿದರು.

ಹೊಸರಿತ್ತಿ ಜಿ.ಎಚ್.ಸ್ಕೂಲ್ ಮುಖ್ಯೋಪಾಧ್ಯಾಯ ಜೆ.ಪಿ.ಕೋರಿ ಅಧ್ಯಕ್ಷತೆ ವಹಿಸಿದ್ದರು. ಹಿರಿಯ ಸಿವಿಲ್ ನ್ಯಾಯವಾದಿಗಳು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀಮತಿ ಶ್ರೀಶೈಲಜಾ ಹೆಚ್. ವಿ, ಜಿಲ್ಲಾ ನ್ಯಾಯವಾದಿಗಳ ಸಂಘ ಅಧ್ಯಕ್ಷ ಹೆಚ್. ಸಿ. ಸಿದ್ದನಗೌಡರ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಜಯಶ್ರೀ ಪಾಟೀಲ, ಕ್ಷೇತ್ರ ಶಿಕ್ಷಣಾಧಿಕಾರಿ ಶ್ರೀನಿವಾಸ ಬಿ., ಹೊಸರಿತ್ತಿ ಗ್ರಾ.ಪಂ. ಪ್ರಭಾರ ಆಡಳಿತಾಧಿಕಾರಿ ಅಕ್ಬರಲಿ ಇತರರು ಉಪಸ್ಥಿತರಿದ್ದರು.

ಮಕ್ಕಳ ರಕ್ಷಣೆ, ಸಾರ್ವಜನಿಕರ ಸಮಸ್ಯೆಗಳಿಗೆ ಸ್ಪಂದನೆ: ವಿವಿಧ ಸ್ಥಳಗಳಿಗೆ ಜಿಲ್ಲಾಧಿಕಾರಿ ಭೇಟಿ



ಪಾಂಡವ ನ್ಯೂಸ್, ಹಾವೇರಿ : ಜಿಲ್ಲಾಧಿಕಾರಿ ಡಾ. ವಿಜಯಮಹಾಂತೇಶ ದಾನಮ್ಮನವರ ಅವರು ಮಂಗಳವಾರ ಹಾವೇರಿ ನಗರಕ್ಕೆ ಭೇಟಿ ನೀಡಿ ಮಕ್ಕಳ ಕಲ್ಯಾಣ, ಸಾರ್ವಜನಿಕರ ಸಮಸ್ಯೆಗಳು ಹಾಗೂ ನಗರದ ಮೂಲಸೌಕರ್ಯ ಅಭಿವೃದ್ಧಿಗೆ ಸಂಬಂಧಿಸಿದಂತೆ ವಿವಿಧ ಸ್ಥಳಗಳನ್ನು ಪರಿಶೀಲಿಸಿ, ಅಧಿಕಾರಿಗಳಿಂದ ಮಾಹಿತಿ ಪಡೆದುಕೊಂಡರು. ಮೊದಲಿಗೆ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ವತಿಯಿಂದ ಆಯೋಜಿಸಲಾದ ಸ್ಪಂದನ ವಿಶೇಷ ದತ್ತು ಕೇಂದ್ರಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು, ಮಗುವಿನ ನಾಮಕರಣ ಕಾರ್ಯಕ್ರಮದಲ್ಲಿ ಪಾಲ್ಗೊಂಡು, ದತ್ತು ಸ್ವೀಕರಿಸಿದ ಮಗುವಿಗೆ ದತ್ತು ಪ್ರಮಾಣಪತ್ರವನ್ನು ವಿತರಿಸಿದರು. ಮಕ್ಕಳಿಗೆ ಸುರಕ್ಷಿತ ಹಾಗೂ ಪ್ರೀತಿಯ ಕುಟುಂಬ ವಾತಾವರಣ ಕಲ್ಪಿಸುವಲ್ಲಿ ದತ್ತು ಪ್ರಕ್ರಿಯೆಯ ಮಹತ್ವವನ್ನು ತಿಳಿಸಿದರು.

ನಂತರ ಹಾವೇರಿ ನಗರಸಭೆ ಕಾರ್ಯಾಲಯಕ್ಕೆ ಭೇಟಿ ನೀಡಿದ ಅವರು, ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಿ, ವಿವಿಧ ಸಮಸ್ಯೆಗಳನ್ನು ಆಲಿಸಿದರು. ಸಾರ್ವಜನಿಕರು ಸಲ್ಲಿಸುವ ಅಹವಾಲುಗಳಿಗೆ ಅಧಿಕಾರಿಗಳು ಆದ್ಯತೆಯ ಮೇರೆಗೆ ಸ್ಪಂದಿಸಬೇಕು. ಜನರ ಸಮಸ್ಯೆಗಳನ್ನು ವಿಳಂಬವಿಲ್ಲದೆ ಪರಿಹರಿಸಲು ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.ಬಳಿಕ ನಗರದ ಕುಡಿಯುವ ನೀರಿನ ಶುದ್ಧೀಕರಣ ಘಟಕಕ್ಕೆ ಭೇಟಿ ನೀಡಿ, ಘಟಕದ ಕಾರ್ಯನಿರ್ವಹಣೆ ಹಾಗೂ ಪ್ರಸ್ತುತ ಕೈಗೊಳ್ಳಲಾಗುತ್ತಿರುವ ಕಾಮಗಾರಿಗಳನ್ನು ಪರಿಶೀಲಿಸಿದರು. ನಗರದ ಜನತೆಗೆ ಸಮರ್ಪಕವಾಗಿ ಶುದ್ಧ ಕುಡಿಯುವ ನೀರು ಪೂರೈಸಲು ಕಾಮಗಾರಿಗಳನ್ನು ಗುಣಮಟ್ಟದೊಂದಿಗೆ ನಿಗದಿತ ಕಾಲಮಿತಿಯಲ್ಲಿ ಪೂರ್ಣಗೊಳಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.ಇದಾದ ನಂತರ ವಿಜಯನಗರ ಬಡಾವಣೆಯಲ್ಲಿರುವ ಶ್ರೀಶಕ್ತಿ ಮಕ್ಕಳ ತೆರೆದ ತಂಗುದಾಣಕ್ಕೆ ಭೇಟಿ ನೀಡಿದ ಜಿಲ್ಲಾಧಿಕಾರಿಗಳು, ಅಲ್ಲಿನ ಮಕ್ಕಳ ಯೋಗಕ್ಷೇಮದ ಕುರಿತು ವಿಚಾರಿಸಿದರು. ಮಕ್ಕಳಿಗೆ ದೊರೆಯುತ್ತಿರುವ ಆಹಾರ, ವಸತಿ, ಶಿಕ್ಷಣ, ಆರೋಗ್ಯ ಸೌಲಭ್ಯಗಳು ಹಾಗೂ ಇತರೆ ಮೂಲಸೌಕರ್ಯಗಳ ಬಗ್ಗೆ ಮಾಹಿತಿ ಪಡೆದುಕೊಂಡರು. ಮಕ್ಕಳ ಸುರಕ್ಷತೆ, ಆರೈಕೆ ಮತ್ತು ಸಮಗ್ರ ಬೆಳವಣಿಗೆಗೆ ಹೆಚ್ಚಿನ ಆದ್ಯತೆ ನೀಡುವಂತೆ ಸಂಬಂಧಿಸಿದ ಸಿಬ್ಬಂದಿಗೆ ಸೂಚಿಸಿದರು. ಈ ಸಂದರ್ಭದಲ್ಲಿ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.

ಬರದ ನಡುವೆಯೂ ಮೈದುಂಬಿದ ಕುಮದ್ವತಿ; ಕೋಳಿವಾಡ ದಂಪತಿಯಿಂದ ಬಾಗಿನ



ಪಾಂಡವ ನ್ಯೂಸ್, ರಾಣೇಬೆನ್ನೂರು : ತಾಲೂಕಿನ ಮುಷ್ಟೂರು ಗ್ರಾಮದ ಬಳಿ ಮೈದುಂಬಿ ಹರಿಯುತ್ತಿರುವ ಕುಮದ್ವತಿ ನದಿಗೆ ಶಾಸಕ ಪ್ರಕಾಶ ಕೋಳಿವಾಡ ಹಾಗೂ ಅವರ ಧರ್ಮಪತ್ನಿ ಪೂರ್ಣಿಮಾ ಕೋಳಿವಾಡ ದಂಪತಿ ಬಾಗಿನ ಅರ್ಪಿಸಿ ವಿಶೇಷ ಪೂಜೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಶಾಸಕ ಪ್ರಕಾಶ ಕೋಳಿವಾಡ, ನದಿ, ಕೆರೆ ಸೇರಿದಂತೆ ಜಲಮೂಲಗಳು ಜನಜೀವನದ ಅವಿಭಾಜ್ಯ ಅಂಗಗಳಾಗಿವೆ. ರೈತರ ಕೃಷಿ ಚಟುವಟಿಕೆ ಹಾಗೂ ಜನರ ದೈನಂದಿನ ಬದುಕಿಗೆ ನೀರು ಅತ್ಯಗತ್ಯ. ಪ್ರಕೃತಿಯ ಕೊಡುಗೆಯಾದ ನದಿಗಳನ್ನು ಗೌರವಿಸುವುದರ ಜತೆಗೆ ಸಂರಕ್ಷಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ ಎಂದರು.

ಭೀಕರ ಬರಗಾಲದ ನಡುವೆಯೂ ಕುಮದ್ವತಿ ನದಿ ಮೈದುಂಬಿ ಹರಿ

ಮೊದಲ ಪುಟದಿಂದ.....

ಬಸವಣ್ಣನವರ ವೈಚಾರಿಕತೆಗೆ.....

ಸಚಿವ ರುದ್ರಪ್ಪ ಲಮಾಣಿ ಮಾತನಾಡಿ, ಬಸವಣ್ಣನವರು ಜಾತಿ ವ್ಯವಸ್ಥೆ ಹಾಗೂ ಅಸಮಾನತೆ ವಿರುದ್ಧ ಹೋರಾಡಿದ ಮಹಾನ್ ಸಮಾಜ ಸುಧಾರಕರು. ಅನುಭವ ಮಂಟಪದ ಮೂಲಕ ಸಾಮಾಜಿಕ ಸಾಮರಸ್ಯ ಮತ್ತು ಭಾವೈಕ್ಯತೆಯ ಸಂದೇಶ ಸಾರಿದ ಅವರ ಆದರ್ಶಗಳು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿವೆ ಎಂದರು.

ಕಾರ್ಯಕ್ರಮದಲ್ಲಿ ಹಾವೇರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಯಶೋಧಾ ವಂಟಗೋಡಿ, ವೀರಶೈವ ನಿಗಮ ಮಂಡಳಿ ವ್ಯವಸ್ಥಾಪಕ ನಿರ್ದೇಶಕ ಮಲ್ಲಿಕಾರ್ಜುನ ಮಠದ, ಹನುಮನಟ್ಟಿ ಕೃಷಿ ವಿಶ್ವವಿದ್ಯಾಲಯದ ಡೀನ್ ಕೆ.ಬಿ. ಯಡಹಳ್ಳಿ, ಬಿಇಒ ಶ್ರೀನಿವಾಸ ಬಿ., ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ಸಿ.ಬಿ. ಕುರುವತ್ತಿಗೌಡ್ರ, ವಿವಿಧ ಮಠಗಳ ಮಠಾಧೀಶರು, ಗುತ್ತಲ, ಅಗಡಿ, ಹೊಸರಿತ್ತಿ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳ ಭಕ್ತರು ಪಾಲ್ಗೊಂಡಿದ್ದರು.

ಮೊದಲ ಪುಟದಿಂದ.....

ಮಹಿಳೆಯರಿಗೆ ಶೇ.33ರಷ್ಟು.....

ಕಾಮನ್‌ವೆಲ್ತ್ ಮಹಿಳಾ ಸಂಸದರ (ಅಫಕ) ಭಾರತ ವಲಯದ ಅಧ್ಯಕ್ಷೆ ಡಿ. ಪುರಂದೇಶ್ವರಿ ಮಾತನಾಡಿ, ಮಹಿಳಾ ಸಬಲೀಕರಣ ಕೇವಲ ಸಂಖ್ಯಾಬಲಕ್ಕೆ ಸೀಮಿತವಾಗದೆ, ನೀತಿ ನಿರ್ಧಾರಗಳಲ್ಲಿ ಮಹಿಳೆಯರ ಸಕ್ರಿಯ ನಾಯಕತ್ವವಾಗಿ ಹೊರಹೊಮ್ಮಬೇಕು ಎಂದು ಪ್ರತಿಪಾದಿಸಿದರು.

ಪ್ರಜಾಪ್ರಭುತ್ವದಲ್ಲಿ ಮಹಿಳಾ ಸಬಲೀಕರಣವನ್ನು ಕೇವಲ ಸಾರ್ವಜನಿಕ ಹುದ್ದೆಗಳಲ್ಲಿರುವ ಮಹಿಳೆಯರ ಸಂಖ್ಯೆಯಿಂದ ಅಳೆಯಲು ಸಾಧ್ಯವಿಲ್ಲ. ಬದಲಾಗಿ ಶಾಸಕಾಂಗದ ಚರ್ಚೆಗಳಲ್ಲಿ ಅರ್ಥಪೂರ್ಣವಾಗಿ ಭಾಗವಹಿಸುವುದು ಮತ್ತು ನೀತಿ ನಿರ್ಧಾರಗಳ ಮೇಲೆ ಪ್ರಭಾವ ಬೀರುವುದೇ ನಿಜವಾದ ಸಬಲೀಕರಣ ಎಂದರು.

ಮಹಿಳಾ ಜನಪ್ರತಿನಿಧಿಗಳು ಆತ್ಮವಿಶ್ವಾಸದಿಂದ ನಾಯಕತ್ವ ವಹಿಸಲು ಪೂರಕ ವಾತಾವರಣ ನಿರ್ಮಿಸುವುದರ ಜೊತೆಗೆ ಅಗತ್ಯ ತರಬೇತಿ ಮತ್ತು ಸಾಂಸ್ಥಿಕ ಬೆಂಬಲ ಒದಗಿಸುವುದು ಅಷ್ಟೇ ಮುಖ್ಯವಾಗಿದೆ ಎಂದು ಅಭಿಪ್ರಾಯಪಟ್ಟರು.

ಹಾನಗಲ್‌ನಲ್ಲಿ ಮಹಿಳಾ ಉದ್ಯಮಿಗಳ ಉತ್ಪನ್ನ ಪ್ರದರ್ಶನ, ಮಾರುಕಟ್ಟೆ ಸಂಪರ್ಕ ಸಮಾವೇಶ



ಪಾಂಡವ ನ್ಯೂಸ್, ಹಾನಗಲ್: ಮನೆಯಲ್ಲೇ ತಯಾರಿಸುವ ಉತ್ಪನ್ನಗಳಿಗೆ ಮಾರುಕಟ್ಟೆ ಕಲ್ಪಿಸಿ, ಮಹಿಳಾ ಉದ್ಯಮಿಗಳನ್ನು ಸ್ವಾವಲಂಬಿಗಳನ್ನಾಗಿಸುವ ಉದ್ದೇಶದಿಂದ ಆಯೋಜಿಸಿದ್ದ ಮಹಿಳಾ ಉದ್ಯಮಿಗಳ ಉತ್ಪನ್ನ ಪ್ರದರ್ಶನ ಮತ್ತು ಮಾರುಕಟ್ಟೆ ಸಂಪರ್ಕ ಸಮಾವೇಶ ಗಮನ ಸೆಳೆಯಿತು.

ಮಂಗಳವಾರ ಪಟ್ಟಣದ ನಾಲ್ಕರ ಕ್ರಾಸ್ ಬಳಿಯ ರೋಶನಿ ಸಭಾಂಗಣದಲ್ಲಿ ನಡೆದ ಸಮಾವೇಶದಲ್ಲಿ ತಾಲೂಕಿನ 145ಕ್ಕೂ ಹೆಚ್ಚು ಮಹಿಳಾ ಉದ್ಯಮಿಗಳು ತಯಾರಿಸಿದ 200ಕ್ಕೂ ಅಧಿಕ ವೈವಿಧ್ಯಮಯ ಉತ್ಪನ್ನಗಳನ್ನು ಪ್ರದರ್ಶಿಸಿದರು. ರೊಟ್ಟಿ, ಉಪ್ಪಿನಕಾಯಿ, ಮಸಾಲೆ, ಅರಿಷಿಣ ಹಾಗೂ ಖಾರದ ಪುಡಿ, ಚಕ್ಕಲಿ, ಕೋಡುಬಳೆ, ಚಟ್ನಿಪುಡಿ, ಶೇಂಗಾ ಎಣ್ಣೆ, ಹಪ್ಪಳ, ಸಂಡಿಗೆ, ಹೋಳಿಗೆ ಸೇರಿದಂತೆ ವಿವಿಧ ಆಹಾರ ಉತ್ಪನ್ನಗಳು ಗಮನ ಸೆಳೆದವು. ಇದರೊಂದಿಗೆ ಎಂಬ್ರಾಯ್ಡರಿ, ಆರಿ ವರ್ಕ್, ಸೀರೆ ಕುಚ್ಚು, ಮೇಣದಬತ್ತಿ, ಕರ್ಪೂರ, ಹೆಣಿಗೆ ಚೀಲ, ಗಂಧದ ಮಾಲೆ, ಅಗರಬತ್ತಿ, ದೀಪದ ಬತ್ತಿ, ಕಸಬರಿಗೆ ಹಾಗೂ ಉಲ್ಲನ್ ಉತ್ಪನ್ನಗಳೂ ಪ್ರದರ್ಶನಗೊಂಡವು.

ಜಿಲ್ಲೆ ಹಾಗೂ ಹೊರ ಜಿಲ್ಲೆಗಳಿಂದ ಆಗಮಿಸಿದ್ದ ವರ್ತಕರು, ಖರೀದಿದಾರರು ಮತ್ತು ಆನ್‌ಲೈನ್ ಮಾರುಕಟ್ಟೆ ತಜ್ಞರು ಉತ್ಪನ್ನಗಳನ್ನು ವೀಕ್ಷಿಸಿ, ಮಹಿಳಾ ಉದ್ಯಮಿಗಳೊಂದಿಗೆ ನೇರ ಸಂಪರ್ಕ ಸಾಧಿಸಿದರು. ಉತ್ಪನ್ನಗಳ ಗುಣಮಟ್ಟ ಹೆಚ್ಚಿಸುವುದು, ಆಕರ್ಷಕ ಪ್ಯಾಕಿಂಗ್, ಮಾರುಕಟ್ಟೆ ಬೇಡಿಕೆ ಹಾಗೂ ಮಾರಾಟ ತಂತ್ರಗಳ ಕುರಿತು ಸಲಹೆ ನೀಡಿದರು. ಇದರಿಂದ ಸ್ಥಳೀಯ ಉತ್ಪನ್ನಗಳಿಗೆ ವಿಶಾಲ ಮಾರುಕಟ್ಟೆ ಕಲ್ಪಿಸುವ ಹೊಸ ಸಾಧ್ಯತೆಗಳು ತೆರೆದುಕೊಂಡವು.ಸಮಾವೇಶ ಉದ್ಘಾಟಿಸಿದ ಶಾಸಕ ಹಾಗೂ ಕರ್ನಾಟಕ ಗೃಹ ಮಂಡಳಿ ಅಧ್ಯಕ್ಷ ಶ್ರೀನಿವಾಸ ಮಾನೆ ಮಾತನಾಡಿ, ಉದ್ಯಮಶೀಲತೆಯ ಮೊದಲ ಹೆಜ್ಜೆ ಮನೆಯಿಂದಲೇ ಆರಂಭವಾಗಬೇಕು. ಕೇವಲ ನೂರು ರೂಪಾಯಿಗಳಿಂದ ಆರಂಭವಾದ ಉದ್ಯಮಗಳು ಇಂದು ಸಾವಿರಾರು ಕೋಟಿ ರೂ. ವಹಿವಾಟು ನಡೆಸುತ್ತಿರುವ ಅನೇಕ ಉದಾಹರಣೆಗಳಿವೆ. ಮಹಿಳೆಯರಲ್ಲಿ ಪರಿಶ್ರಮ, ಸೃಜನಶೀಲತೆ ಹಾಗೂ ಸಾಧಿಸುವ ಛಲವಿದೆ. ಅವರ ಉತ್ಪನ್ನಗಳಿಗೆ ಗುಣಮಟ್ಟದ ಜತೆಗೆ ಸೂಕ್ತ ಮಾರುಕಟ್ಟೆ ಸಂಪರ್ಕ ದೊರೆತರೆ ಉದ್ಯಮಗಳು ಮತ್ತಷ್ಟು ಬೆಳೆಯಲಿವೆ. ಮಹಿಳಾ ಉದ್ಯಮಿಗಳಿಗೆ ಪ್ರೋತ್ಸಾಹ, ಮಾರ್ಗದರ್ಶನ ಹಾಗೂ ಮಾರುಕಟ್ಟೆ ಸಂಪರ್ಕ ಕಲ್ಪಿಸುವ ಪ್ರಯತ್ನಗಳು ನಿರಂತರವಾಗಬೇಕು ಎಂದರು.

ಮಹಿಳಾ ಉತ್ಪಾದಕಿ ಚಿಂತನಾ ಮಾತನಾಡಿ, ಮನೆಯಲ್ಲಿ ತಯಾರಿಸಿದ ಉತ್ಪನ್ನಗಳಿಗೆ ಇಷ್ಟೊಂದು ದೊಡ್ಡ ಮಟ್ಟದಲ್ಲಿ ಮಾರುಕಟ್ಟೆ ಸಂಪರ್ಕ ದೊರೆಯುತ್ತದೆ ಎಂದು ನಿರೀಕ್ಷಿಸಿರಲಿಲ್ಲ. ವರ್ತಕರು ಹಾಗೂ ಖರೀದಿದಾರರಿಗೆ ಉತ್ಪನ್ನಗಳನ್ನು ನೇರವಾಗಿ ಪರಿಚಯಿಸಲು ಸಮಾವೇಶ ಉತ್ತಮ ವೇದಿಕೆಯಾಗಿದೆ. ನಮ್ಮ ಪರಿಶ್ರಮಕ್ಕೆ ಮಾರುಕಟ್ಟೆಯಲ್ಲಿ ಮನ್ನಣೆ ದೊರೆಯುವ ಭರವಸೆ ಮೂಡಿದ್ದು, ಉದ್ಯಮ ವಿಸ್ತರಣೆಗೆ ಪ್ರೇರಣೆ ಸಿಕ್ಕಿದೆ ಎಂದರು.

ಆನ್‌ಲೈನ್ ಮಾರುಕಟ್ಟೆ ತಜ್ಞ ದೇವೇಂದ್ರ ಬನ್ಸಾಲಿ ಮಾತನಾಡಿ, ಹಾನಗಲ್ ಮಹಿಳೆಯರು ತಯಾರಿಸಿರುವ ಉತ್ಪನ್ನಗಳಲ್ಲಿ ವೈವಿಧ್ಯತೆ ಮತ್ತು ಗುಣಮಟ್ಟವಿದೆ. ಇಂತಹ ಸಮಾವೇಶಗಳು ಉತ್ಪಾದಕರು ಹಾಗೂ ಖರೀದಿದಾರರ ನಡುವಿನ ಅಂತರ ಕಡಿಮೆ ಮಾಡಿ ನೇರ ವ್ಯಾಪಾರಕ್ಕೆ ಅವಕಾಶ ಕಲ್ಪಿಸುತ್ತವೆ. ಇಲ್ಲಿನ ಉತ್ಪನ್ನಗಳಿಗೆ ದೊಡ್ಡ ಮಾರುಕಟ್ಟೆ ಒದಗಿಸುವ ಸಾಧ್ಯತೆಗಳಿವೆ ಎಂದರು.

ಹ್ಯುಮ್ಯಾನಿಟಿ ಫೌಂಡೇಶನ್, ರೋಶನಿ ಸಮಾಜ ಸೇವಾ ಸಂಸ್ಥೆ, ಲೋಯಲಾ ವಿಕಾಸ ಕೇಂದ್ರ, ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಮಿಷನ್, ರಾಷ್ಟ್ರೀಯ ನಗರ ಸ್ವಯಂ ಉದ್ಯೋಗ ಯೋಜನೆ, ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಹಾಗೂ ವರ್ತಕರ ಸಂಘದ ಆಶ್ರಯದಲ್ಲಿ ಸಮಾವೇಶ ಆಯೋಜಿಸಲಾಗಿತ್ತು.

ಸ್ವಾತಿ ಮಾಳಗಿ, ಅನಿತಾ ಡಿಸೋಜಾ, ಫಾದರ್ ವಿನ್ಸೆಂಟ್ ಜೈಸನ್, ಹನುಮಂತಪ್ಪ ಮರಗಡಿ, ಈರಪ್ಪ ಬೈಲವಾಳ, ಗುರುರಾಜ ನಿಂಗೋಜಿ, ಆದರ್ಶ ಶೆಟ್ಟಿ ಹಾಗೂ ಜಗದೀಶ ಕಮ್ಮಾರ ಉಪಸ್ಥಿತರಿದ್ದರು.

ರಾಷ್ಟ್ರೀಯ ದತ್ತು ಮಾಸಾಚರಣೆ–ಅರಿವು ಕಾರ್ಯಕ್ರಮ



ಪಾಂಡವ ನ್ಯೂಸ್, ಹಾವೇರಿ : ಯಾವುದೇ ಮಗುವನ್ನು ದತ್ತು ಪಡೆಯುವಾಗ ಕಾನೂನು ಬದ್ಧವಾಗಿ ಹಾಗೂ ದತ್ತು ಮಾರ್ಗಸೂಚಿ ಅನುಸಾರ ದತ್ತು ಪಡೆಯಬೇಕು ಎಂದು ಹಿರಿಯ ಸಿವಿಲ್ ನ್ಯಾಯವಾದಿಗಳು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀಮತಿ ಶ್ರೀಶೈಲಜಾ ಹೆಚ್. ಪಿ ಅವರು ಹೇಳಿದರು. ರಾಣೇಬೆನ್ನೂರು ನಗರದಲ್ಲಿ ಇತ್ತೀಚೆಗೆ ಖಾಸಗಿ ಪ್ಯಾರಾಮೆಡಿಕಲ್ ಕಾಲೇಜ್ ನರ್ಸಿಂಗ್ ಮತ್ತು ಪ್ಯಾರಾಮೆಡಿಕಲ್ ಕಾಲೇಜು ವಿದ್ಯಾರ್ಥಿಗಳಿಗೆ ರಾಷ್ಟ್ರೀಯ ದತ್ತು ಮಾಸಾಚರಣೆ ಅಂಗವಾಗಿ ಆಯೋಜಿಸಲಾದ ಕಾನೂನು ಬದ್ಧ ದತ್ತು ಪ್ರಕ್ರಿಯೆ ಅರಿವು ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಯಾವುದೇ ಸ್ಥಳದಲ್ಲಾದರೂ ಪಾಲಕರ ನಿರ್ಲಕ್ಷ್ಯಕ್ಕೆ ಒಳಪಟ್ಟ ಮಕ್ಕಳು ಕಂಡುಬಂದರೆ ಕೂಡಲೇ ಮಕ್ಕಳ ಸಹಾಯವಾಣಿ 1098 ಸಂಖ್ಯೆಗೆ ಕರೆ ಮಾಡಿ ತಿಳಿಸಬೇಕು ಎಂದು ಸಲಹೆ ನೀಡಿದರು. ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಜಯಶ್ರೀ ಪಾಟೀಲ ಮಾತನಾಡಿ, ನವೆಂಬರ್–2026ರ ಘೋಷವಾಕ್ಯ:"No Shortcuts to Parenthood-Only Legal Adoption/ ಪೋಷಕರಾಗಲು ಯಾವುದೇ ಅಡ್ಡ ದಾರಿಗಳಿಲ್ಲ–ಕಾನೂನು ಬದ್ಧ ದತ್ತು ಸ್ವೀಕಾರವೊಂದೇ ಸರಿಯಾದ ಮಾರ್ಗ" ಎಂಬ ಕುರಿತು ವ್ಯಾಪಕ ಪ್ರಚಾರದೊಂದಿಗೆ ರಾಷ್ಟ್ರೀಯದತ್ತು ಮಾಸಾಚರಣೆ ಆಚರಿಸಲಾಗುತ್ತಿದೆ. ಇದರ ಅಂಗವಾಗಿ ಪೋಷಕತ್ವ ಯೋಜನೆ ಕಾನೂನು ಬದ್ಧ ದತ್ತು ಹಾಗೂ ಕಾನೂನು ಬಾಹಿರ ದತ್ತು ಪ್ರಕ್ರಿಯೆ ಅಪರಾಧ, ಮಕ್ಕಳ ಮಾರಾಟಅಪರಾಧ ಮಕ್ಕಳನ್ನು ಮಾರುವವರಿಗೂ ಹಾಗೂ ಕೊಳ್ಳುವವರಿಗೂ ಬಾಲನ್ಯಾಯ ಕಾಯ್ದೆ–2015 ಸೆಕ್ಷನ್ 81ರ ಅನ್ವಯ 5 ವರ್ಷಗಳವರೆಗೂ ಸೆರೆಮನೆ ವಾಸದೊಂದಿಗೆ 1 ಲಕ್ಷ ರೂ.ಗಳ ದಂಡ ವಿಧಿಸಬಹುದು ಎಂದು ಹೇಳಿದರು. ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷೆ ಶ್ರೀಮತಿ ಗೀತಾ ಪಾಟೀಲ ಅವರು ದತ್ತು ಸಂಕಲ್ಪ ಸಂದೇಶ ಬೋಧಿಸಿದರು. ಮಂಜುನಾಥ ಜ್ಯೋತಿ ಅಧ್ಯಕ್ಷತೆ ವಹಿಸಿದ್ದರು. ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ವಿನಯ ಗುಡಗೂರ ಕಾನೂನು ಬದ್ಧ ದತ್ತು ಪ್ರಕ್ರಿಯೆ ಕುರಿತು ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಸದಸ್ಯರಾದ ಮಹಾಂತೇಶ ಮೂಲಿಮನಿ, ಶ್ರೀಮತಿ ಜಯಶ್ರೀ ವರ್ಷ ವಿಲಾಸ ದೇಸಾಯಿ, ಶ್ರೀಮತಿ ಚೆನ್ನಬಸಮ್ಮ ಎನ್.ಬಡ್ಡಿ ಇತರರು ಉಪಸ್ಥಿತರಿದ್ದರು.

ಹಾವೇರಿ ಬಸ್ ನಿಲ್ದಾಣದಲ್ಲಿ ಶೌಚಾಲಯಕ್ಕೂ ಹಣ ವಸೂಲಿ!

ಮಹಿಳೆಯರಿಗೆ ಉಚಿತ ಸೌಲಭ್ಯ ಕಲ್ಪಿಸಲು ಡಿವೈಎಫ್‌ಐ ಪ್ರತಿಭಟನೆ



ಪಾಂಡವ ನ್ಯೂಸ್, ಹಾವೇರಿ : ನಗರದ ಕೇಂದ್ರ ಬಸ್ ನಿಲ್ದಾಣದಲ್ಲಿ ಮಹಿಳೆಯರಿಗೆ ಉಚಿತ ಶೌಚಾಲಯ ವ್ಯವಸ್ಥೆ ಕಲ್ಪಿಸಬೇಕು. ಶೌಚಾಲಯ ಬಳಕೆಯ ಹೆಸರಿನಲ್ಲಿ ಪ್ರಯಾಣಿಕರಿಂದ ಹಣ ವಸೂಲಿ ಮಾಡುವುದನ್ನು ತಕ್ಷಣ ನಿಲ್ಲಿಸಬೇಕು ಎಂದು ಆಗ್ರಹಿಸಿ ಡಿವೈಎಫ್‌ಐ ಜಿಲ್ಲಾ ಸಮಿತಿ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿ, ನಿಯಂತ್ರಣಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

ಜಿಲ್ಲೆಯ ಕೇಂದ್ರ ಬಸ್ ನಿಲ್ದಾಣಕ್ಕೆ ಪ್ರತಿನಿತ್ಯ ಸಾವಿರಾರು ಪ್ರಯಾಣಿಕರು, ವಿದ್ಯಾರ್ಥಿಗಳು ಹಾಗೂ ಮಹಿಳೆಯರು ಆಗಮಿಸುತ್ತಾರೆ. ಆದರೆ ಇಲ್ಲಿನ ಶೌಚಾಲಯ ಬಳಕೆಗೂ ಮಹಿಳೆಯರಿಂದ ಹಣ ವಸೂಲಿ ಮಾಡುತ್ತಿರುವುದು ಖಂಡನೀಯ. ಸಾರ್ವಜನಿಕ ಬಸ್ ನಿಲ್ದಾಣದಲ್ಲಿ ಮಹಿಳೆಯರಿಗೆ ಉಚಿತ ಶೌಚಾಲಯ ಕಲ್ಪಿಸುವುದು ಸಾರಿಗೆ ಇಲಾಖೆಯ ಜವಾಬ್ದಾರಿ. ಮೂಲಭೂತ ಸೌಲಭ್ಯವನ್ನೇ ಹಣ–ಕ್ಕೆ ಮಾರಾಟ ಮಾಡುತ್ತಿರುವುದು ಸಾರ್ವಜನಿಕರಿಗೆ ಹೊರೆಯಾಗುತ್ತಿದೆ ಎಂದು ಪ್ರತಿಭಟನಾಕಾರರು ಆಕ್ರೋಶ ವ್ಯಕ್ತಪಡಿಸಿದರು.

ವಿಶೇಷವಾಗಿ ಮಹಿಳೆಯರು, ವಿದ್ಯಾರ್ಥಿನಿಯರು ಹಾಗೂ ವಯೋವೃದ್ಧರು ಅನಿವಾರ್ಯವಾಗಿ ಶೌಚಾಲಯ ಬಳಸಬೇಕಾದ ಸಂದರ್ಭದಲ್ಲಿ ಹಣ ಪಾವತಿಸುವ ಅನಿವಾರ್ಯತೆ ಎದುರಾಗಿದೆ. ಶೌಚಾಲಯಗಳ ಸ್ವಚ್ಛತೆ ಮತ್ತು ನಿರ್ವಹಣೆಯೂ ಸಮರ್ಪಕವಾಗಿಲ್ಲ. ಸಾರ್ವಜನಿಕರ ಅಗತ್ಯವನ್ನು ದುರುಪಯೋಗಪಡಿಸಿಕೊಂಡು ಹಣ ವಸೂಲಿ ಮಾಡುತ್ತಿರುವುದನ್ನು ತಕ್ಷಣ ತಡೆಯಬೇಕು ಎಂದು ಒತ್ತಾಯಿಸಿದರು.

ಮಹಿಳೆಯರಿಗೆ ಶೌಚಾಲಯ ಬಳಕೆಯನ್ನು ಸಂಪೂರ್ಣ ಉಚಿತಗೊಳಿಸಬೇಕು. ಹಣ ವಸೂಲಿ ನಿಲ್ಲಿಸಿ, ಶೌಚಾಲಯಗಳ ಸ್ವಚ್ಛತೆ ಹಾಗೂ ಅಗತ್ಯ ಮೂಲಸೌಕರ್ಯ ಕಲ್ಪಿಸಬೇಕು. ನಿಯಮಬಾಹಿರವಾಗಿ ಹಣ ವಸೂಲಿ ಮಾಡುತ್ತಿದ್ದರೆ ಸಂಬಂಧಪಟ್ಟ ಗುತ್ತಿಗೆದಾರರ ವಿರುದ್ಧ ಕ್ರಮ ಕೈಗೊಳ್ಳಬೇಕು. ಬಸ್ ನಿಲ್ದಾಣದಲ್ಲಿ ಮಹಿಳೆಯರ ಸುರಕ್ಷತೆ ಮತ್ತು ಗೌರವಕ್ಕೆ ಆದ್ಯತೆ ನೀಡಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ. ಸಮಸ್ಯೆಗೆ ತಕ್ಷಣ ಪರಿಹಾರ ಕಲ್ಪಿಸದಿದ್ದರೆ ಮಹಿಳೆಯರ ಹಕ್ಕುಗಳಿಗಾಗಿ ಸಾರ್ವಜನಿಕರನ್ನು ಸಂಘಟಿಸಿ ತೀವ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ಡಿವೈಎ ರಾಷ್ಟ್ರೀಯ ಮುಖಂಡ ಬಸವರಾಜ ಪೂಜಾರ, ಜಿಲ್ಲಾಧ್ಯಕ್ಷ ಬಸವರಾಜ ಎಸ್., ಎಸ್–ಎಫ್‌ಐ ಜಿಲ್ಲಾಧ್ಯಕ್ಷ ಅರುಣಕುಮಾರ ನಗವತ, ಜಿಲ್ಲಾ ಕಾರ್ಯದರ್ಶಿ ಚೈತ್ರಾ ಕೊರವರ, ಶಂಭುಲಿಂಗ ಸವದತ್ತಿ, ಪರಶುರಾಮ ಎಸ್., ಕಾಂತೇಶ ಹಳ್ಳೇರ, ಲೋಕೇಶ ಕೆಂಚಣ್ಣನವರ, ಶರಣಪ್ಪ ಮಲ್ಲಕ್ಕನವರ ಸೇರಿದಂತೆ ವಿದ್ಯಾರ್ಥಿ–ಯುವಜನರು ಹಾಗೂ ಸಾರ್ವಜನಿಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ನಿಸ್ವಾರ್ಥ ಸೇವೆಗೆ ಕಲಾ ಸಂಸ್ಥೆಯ ಕೊಡುಗೆ ಮಾದರಿ: ಸಂಗನಬಸವ ಶ್ರೀಗಳ ಶ್ಲಾಘನೆ

ಪಾಂಡವ ನ್ಯೂಸ್, ಶಿಗ್ಗಾವಿ : ಗಾನಯೋಗಿ ಪಂಡಿತ ಪುಟ್ಟರಾಜ ಕವಿ ಗವಾಯಿಗಳ ಕಲಾ ಸಂಸ್ಥೆ ಕೇವಲ ಒಂದು ಕ್ಷೇತ್ರಕ್ಕೆ ಸೀಮಿತವಾಗದೆ, ಸಾಂಸ್ಕೃತಿಕ, ಧಾರ್ಮಿಕ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ತನ್ನದೇ ಆದ ವಿಶಿಷ್ಟ ಸೇವೆ ಸಲ್ಲಿಸುತ್ತಿರುವುದು ಶ್ಲಾಘನೀಯ ಎಂದು ಶಿಗ್ಗಾವಿ ವಿರಕ್ತಮಠದ ಶ್ರೀ ಸಂಗನಬಸವ ಮಹಾಸ್ವಾಮೀಜಿ ಹೇಳಿದರು.

ಪಟ್ಟಣದ ವಿರಕ್ತಮಠದಲ್ಲಿ ಗಾನಯೋಗಿ ಪಂಡಿತ ಪುಟ್ಟರಾಜ ಕವಿ ಗವಾಯಿಗಳ ಕಲಾ ಸಂಸ್ಥೆಯ ವತಿಯಿಂದ ಆಯೋಜಿಸಿದ್ದ ಸಾಧಕರ ಸನ್ಮಾನ ಸಮಾರಂಭದ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಶಿಗ್ಗಾವಿ ತಾಲೂಕಿನಲ್ಲಿ ಅನೇಕ ಪ್ರತಿಭಾವಂತ ಕಲಾವಿದರು, ಸಾಹಿತಿಗಳು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಮಹನೀಯರಿದ್ದಾರೆ. ಅಂತಹ ಸಾಧಕರನ್ನು ಗುರುತಿಸಿ ನಿರಂತರವಾಗಿ ಗೌರವಿಸುವುದರ ಜತೆಗೆ ಜನಪರ ಕಾರ್ಯಕ್ರಮಗಳನ್ನು ಆಯೋಜಿಸುತ್ತಿರುವ ಸಂಸ್ಥೆಯ ಕಾರ್ಯ ಮೆಚ್ಚುವಂತದ್ದು. ಯಾವುದೇ ಫಲಾಪೇಕ್ಷೆಯಿಲ್ಲದೆ ಸಂಸ್ಥೆ ಮಾಡುತ್ತಿರುವ ನಿಸ್ವಾರ್ಥ ಸೇವೆ ಇತರರಿಗೆ ಮಾದರಿಯಾಗಿದೆ ಎಂದರು.

ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ತರಬೇತಿ ಅಧಿಕಾರಿ ಶಶಿಕಾಂತ ರಾಠೋಡ ಮಾತನಾಡಿ, ತಾಲೂಕಿನಲ್ಲಿ ಎಲೆಮರೆಯ ಕಾಯಿಯಂತೆ ಸೇವೆ ಸಲ್ಲಿಸುತ್ತಿರುವ ಸಾಧಕರನ್ನು ಗುರುತಿಸಿ ಸನ್ಮಾನಿಸುವ ಮೂಲಕ ಕಲಾ ಸಂಸ್ಥೆಯ ಪದಾಧಿಕಾರಿಗಳು ಅವರಿಗೆ ವಿಶೇಷ ಗೌರವ ತಂದುಕೊಡುತ್ತಿದ್ದಾರೆ. ಈ ಕಾರ್ಯ ಎಲ್ಲರಿಗೂ ಮಾದರಿಯಾಗಿದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಗೌರವಾಧ್ಯಕ್ಷ ಕೊಟ್ರೇಶ ಮಾಸ್ತರ ಬೆಳಗಲಿ, ಕರ್ನಾಟಕ ಜಾನಪದ ವಿಶ್ವವಿದ್ಯಾಲಯದ ಸಹಾಯಕ ಪ್ರಾಧ್ಯಾಪಕ ಡಾ. ಚಂದ್ರಪ್ಪ ಸೊಬಟಿ ಹಾಗೂ ಸನ್ಮಾನಿತರಾದ ಎಸ್.ಕೆ. ಹೂಗಾರ ಮಾತನಾಡಿದರು.

ಸಮಾರಂಭದಲ್ಲಿ ಕರ್ನಾಟಕ ಜಾನಪದ ಅಕಾಡೆಮಿಯ ಗೌರವ ಪ್ರಶಸ್ತಿ ಪುರಸ್ಕೃತ ಕಲ್ಲಪ್ಪ ಬಗರಿಕಾರ, ರಾಜ್ಯಮಟ್ಟದ ಉತ್ತಮ ಶಿಕ್ಷಕ ಪ್ರಶಸ್ತಿ ಪುರಸ್ಕೃತ ಎಸ್.ಕೆ. ಹೂಗಾರ ಹಾಗೂ ಸಮಾಜಸೇವಾ ಪ್ರಶಸ್ತಿ ಪುರಸ್ಕೃತ ಅಶೋಕ ಕಾಳೆ ಅವರನ್ನು ಶ್ರೀಮಠ ಮತ್ತು ಕಲಾ ಸಂಸ್ಥೆಯ ವತಿಯಿಂದ ಆತ್ಮೀಯವಾಗಿ ಸನ್ಮಾನಿಸಿ ಗೌರವಿಸಲಾಯಿತು.



ಸಂಸ್ಥೆಯ ಉಪಾಧ್ಯಕ್ಷ ವಿರೂಪಾಕ್ಷಪ್ಪ ಬಗಾಡೆ, ಕಲಾವಿದರಾದ ಗದಗಯ್ಯ ಹಿರೇಮಠ, ಉಮೇಶ ನೆರೆಗಲ್ಲ,

ಪ್ರಮುಖ ಸಂಕ್ಷಿಪ್ತ ಸುದ್ದಿ

ನ.18ರಂದು ಕನಕ ಜಯಂತಿ ಪೂರ್ವಭಾವಿ ಸಭೆ

ಪಾಂಡವ ನ್ಯೂಸ್, ಚಿತ್ರದುರ್ಗ : ಜಿಲ್ಲಾ ಕೇಂದ್ರದಲ್ಲಿ ನವೆಂಬರ್ 27ರಂದು ಕನಕ ಜಯಂತಿ ಆಚರಿಸುವ ಸಂಬಂಧ ಅಗತ್ಯ ಪೂರ್ವ ಸಿದ್ಧತೆಗಳನ್ನು ಕೈಗೊಳ್ಳುವ ಬಗ್ಗೆ ಚರ್ಚಿಸಲು ಇದೇ ನವೆಂಬರ್ 18ರಂದು ಬೆಳಿಗ್ಗೆ 11ಕ್ಕೆ ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಹಮ್ಮಿಕೊಳ್ಳಲಾಗಿದೆ.

ಜಿಲ್ಲಾಧಿಕಾರಿ ಎಸ್.ರಮ್ಯಾ ಅವರು ಸಭೆಯ ಅಧ್ಯಕ್ಷತೆ ವಹಿಸುವರು. ಪೂರ್ವಭಾವಿ ಸಭೆಗೆ ಸಮಾಜದ ಮುಖಂಡರು ಹಾಗೂ ಅಧಿಕಾರಿಗಳು ಆಗಮಿಸಿ ಸಲಹೆ ಸೂಚನೆಗಳನ್ನು ನೀಡುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ.ಬಿ.ಎಂ. ಗುರುನಾಥ ತಿಳಿಸಿದ್ದಾರೆ.

ನವೆಂಬರ್ 19ರಂದು 'ದಿಶಾ' ಸಮಿತಿ ಸಭೆ

ಪಾಂಡವ ನ್ಯೂಸ್, ಬಳ್ಳಾರಿ : ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ 'ದಿಶಾ' ಸಮಿತಿಯ ಮಾಸಿಕ ಸಭೆಯು ಬಳ್ಳಾರಿ ಲೋಕಸಭಾ ಕ್ಷೇತ್ರದ ಸದಸ್ಯರು ಹಾಗೂ ದಿಶಾ ಸಮಿತಿಯ ಅಧ್ಯಕ್ಷರಾದ ಈ. ತುಕಾರಾಮ್ ಅವರ ಅಧ್ಯಕ್ಷತೆಯಲ್ಲಿ ನವೆಂಬರ್ 19 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾ ಪಂಚಾಯತ್ ನ ಹೊಸ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ನಡೆಯಲಿದೆ.

ಅಹವಾಲು ಸ್ವೀಕಾರ ಕಾರ್ಯಕ್ರಮ:

ಸಭೆ ಆರಂಭಕ್ಕೂ ಮುನ್ನ, ಅದೇ ದಿನ ಬೆಳಿಗ್ಗೆ 10 ಗಂಟೆಗೆ ಜಿಲ್ಲಾ ಪಂಚಾಯತ್ ಕಚೇರಿ ಆವರಣದಲ್ಲಿ ಅಧ್ಯಕ್ಷರಿಂದ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಎಲ್ಲಾ ಸಂಬಂಧಿತ ಅಧಿಕಾರಿಗಳು ಬೆಳಿಗ್ಗೆ 9.30 ಗಂಟೆಗೆ ಕಡ್ಡಾಯವಾಗಿ ಹಾಜರಿರಬೇಕು ಎಂದು ದಿಶಾ ಸಮಿತಿಯ ಸದಸ್ಯ ಕಾರ್ಯದರ್ಶಿ ಆದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್ ಅವರು ತಿಳಿಸಿದ್ದಾರೆ.

ನ.21 ರಂದು 'ತಿಂಗಳ ಸೊಬಗು' ಸಾಂಸ್ಕೃತಿಕ ಕಾರ್ಯಕ್ರಮ

ಪಾಂಡವ ನ್ಯೂಸ್, ಬಳ್ಳಾರಿ : ಕಲಾ ಪ್ರತಿಭೆಯನ್ನು ಪ್ರೋತ್ಸಾಹಿಸುವ ಹಾಗೂ ಸಾರ್ವಜನಿಕರಿಗೆ ಮನರಂಜನೆ ನೀಡುವ ಉದ್ದೇಶದಿಂದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಸಾಂಸ್ಕೃತಿಕ ಸಮುಚ್ಚಯ ನಿರ್ವಹಣಾ ಸಮಿತಿ, ಬಳ್ಳಾರಿ ಇವರ ಸಂಯುಕ್ತ ಆಶ್ರಯದಲ್ಲಿ ನವೆಂಬರ್ 21 ರಂದು ಸಂಜೆ 6.30 ಗಂಟೆಗೆ ನಗರದ ಡಾ.ರಾಜ್ ಕುಮಾರ್ ರಸ್ತೆಯ ಸಾಂಸ್ಕೃತಿಕ ಸಮುಚ್ಚಯದ ನಾಡೋಜ ಸುಭದ್ರಮ್ಮ ಮನ್ನೂರು ಬಯಲು ರಂಗಮಂದಿರದಲ್ಲಿ 'ತಿಂಗಳ ಸೊಬಗು' ಸಾಂಸ್ಕೃತಿಕ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಈ ಕಾರ್ಯಕ್ರಮದಲ್ಲಿ ವಿವಿಧ ಆಕರ್ಷಕ ಕಲಾ ಪ್ರಕಾರಗಳು ಪ್ರದರ್ಶನಗೊಳ್ಳಲಿವೆ.

ಹಾಸ್ಯ ಚಟಾಕಿಗಳು: ಬಳ್ಳಾರಿಯ ಖ್ಯಾತ ಹಾಸ್ಯ ಕಲಾವಿದ ಎ.ಎಂ.ಎರಿಸ್ವಾಮಿ ಅವರಿಂದ. ಸಮೂಹ ನೃತ್ಯ: ಬಳ್ಳಾರಿಯ ಲಕ್ಷೀ ಕಲಾ ಟ್ರಸ್ಟ್ (ರಿ) ತಂಡದಿಂದ.

ಬಯಲಾಟ: ಬಳ್ಳಾರಿ ತಾಲೂಕಿನ ಎಂ.ಗೋನಾಳ ವೀರಭದ್ರೇಶ್ವರ ಬಯಲಾಟ ಕಲಾವಿದರ ಸಂಘದಿಂದ 'ವೀರ ಅಭಿಮನ್ಯು ಕಾಳಗ' ಸನ್ನಿವೇಶಗಳ ಪ್ರದರ್ಶನ.

ಕಲಾಸಕ್ತರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ಕೋರಿದೆ.

ನಗರದ ವಿವಿಧೆಡೆ ನೀರು ಪೂರೈಕೆ

ಪಾಂಡವ ನ್ಯೂಸ್, ಗದಗ : ಗದಗ ಬೆಟಗೇರಿ ಅವಳಿ ನಗರದ ಸಾರ್ವಜನಿಕರಿಗೆ ತಿಳಿಸುವುದೇನೆಂದರೆ. ನವಂಬರ್ 18 ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು.

ಸ್ಥಳಗಳ ವಿವರ: ವಾರ್ಡ ನಂ 16ರಲ್ಲಿ ಹೊಂಬಳ ನಾಕಾ, ಜನತಾ ಕಾಲೋನಿ, ಮಣ್ಣಮ್ಮನವರ ಲೈನ್, ದರಿಯಪ್ಪಜ್ಜನ ಲೈನ್, ಶೌಚಾಲಯ ಹಿಂದೆ, ಉಳಿದ ಭಾಗಗಳು ವಾರ್ಡ ನಂ 28ರಲ್ಲಿ ಪಂಚಾಕ್ಷರಿ ನಗರ 5ನೇ ಕ್ರಾಸ್ ವಾರ್ಡ ನಂ 13 ಹಾಗೂ 14ರಲ್ಲಿ ವಕೀಲ ಚಾಳ್, ಗೌಸ್ ಬಿಲ್ಡಿಂಗ್, ಕೆ.ಸಿ ರಾಣಿ ರೋಡ, ಹೆಡಪೋಸ್ಟ್, ಸೋನಿಯವರ ಲೈನ್, ಪತ್ತೆಪೂರ ಲೈನ್, ಉಳಿದ ಭಾಗಗಳು ವಾರ್ಡ ನಂ 03ರಲ್ಲಿ ಬಣ್ಣದ ನಗರ, ಕುಂಬಾರ ಓಣಿ, ಕಬಾಡಿಯವರ ಲೈನ್, ರಾಜಾಜಿ ರೋಡ, ಅಯ್ಯಪ್ಪಜ್ಜನ ಗದ್ದಗಿ, ಲಕ್ಕುಂಡಿ ದವಾಖಾನೆ ಲೈನ್, ಉಳಿದ ಭಾಗಗಳು ವಾರ್ಡ ನಂ 29ರಲ್ಲಿ ರಾಜೀವಗಾಂಧಿ ನಗರ, ಡಂಬಳ ಲೈನ್, ಮಸೂತಿ ಮೇಲೆ, ಕೆಳಗೆ ವಾರ್ಡ 12ರಲ್ಲಿ ಮಾಲೀಪಾಟೀಲ ಲೈನ್, ಮುಧೋಳ ಲೈನ್, ಅರಸಿದ್ದಿ ಲೈನ್, ಅಗಸರ ಲೈನ್, ಜಾಧವ ಲೈನ್, 3ನೇ ಕ್ರಾಸ್, ಉದ್ದಾರ ಮಾಸ್ತರ ಲೈನ್, ಜೆ.ಟಿ. ಕಾಲೇಜ್ ಲೈನ್, ಬೇಕರಿ ಲೈನ್, ಉಳಿದ ಭಾಗಗಳು ವಾರ್ಡ ನಂ 06ರಲ್ಲಿ ಪವಾರ ಲೈನ್, ಮಾಕಾಪೂರ ಲೈನ್, ಉಳಿದ ಭಾಗಗಳು ವಾರ್ಡ ನಂ 22ರಲ್ಲಿ ಅಮರೇಶ್ವರ ನಗರ, ತಾಜ್ ನಗರ್, ಹುಬ್ಬಳ್ಳಿ ಲೇಔಟ್ ವಾರ್ಡ ನಂ 34ರಲ್ಲಿ ನಂದೀಶ್ವರ ನಗರ, ಪುರದ ದವಾಖಾನೆ, 20ನಂಬರ ಸ್ಕೂಲ್ (ತಾಂತ್ರಿಕವಾಗಿ ನೀರು ಪೂರೈಕೆಯಲ್ಲಿ ಒಂದು ವೇಳೆ ಅಡತಡೆಯಾದಲ್ಲಿ ಸಾರ್ವಜನಿಕರು ನಗರಸಭೆಯೊಂದಿಗೆ ಸಹಕರಿಸಬೇಕು. ನಿಗದಿಪಡಿಸಿದ ಸಮಯದಲ್ಲಿ ಸಾರ್ವಜನಿಕರು ನೀರು ತುಂಬಿಕೊಳ್ಳಬೇಕು ತದನಂತರ ನೀರು ಬಂದ ಮಾಡಲಾಗುವುದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಬಿಹೆಚ್ಇಎಲ್: ವಿವಿಧ ಹುದ್ದೆಗಳಿಗೆ ಅರ್ಜಿ ಆಹ್ವಾನ

ಪಾಂಡವ ನ್ಯೂಸ್, ಚಿತ್ರದುರ್ಗ : ಕೇಂದ್ರ ಸರ್ಕಾರದ ಸ್ವಾಮ್ಯದ ಭಾರತ್ ಹೆವಿ ಇಲೆಕ್ಟಿಕಲ್ಸ್ ಲಿಮಿಟೆಡ್ (BHEL) ಸಂಸ್ಥೆಯ ಬೆಂಗಳೂರು ಕಚೇರಿಯಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳ ನೇಮಕಾತಿಗಾಗಿ ಅರ್ಹ ಹಾಗೂ ಆಸಕ್ತ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು ಸಂಸ್ಥೆಯ ಜಾಲತಾಣವಾದ ಛಿಚಿಡಿಜಿಜಡಿಛಿ. ಛಿಜಟಟಿಟಿ ಮೂಲಕ ನವೆಂಬರ್ 18 ರೊಳಗೆ ಅರ್ಜಿ ಸಲ್ಲಿಸಬಹುದಾಗಿದೆ. ಎಸ್ಎಸ್ಎಲ್ಸಿಯಲ್ಲಿ ಉತ್ತೀರ್ಣರಾಗಿ ಸಂಬಂಧಪಟ್ಟ ಟ್ರೇಡ್‌ನಲ್ಲಿ ಐಟಿಐ ಪ್ರಮಾಣ ಪತ್ರ ಹೊಂದಿರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ಅರ್ಹರಾಗಿರುತ್ತಾರೆ. ಎಸ್ಎಸ್ಎಲ್ಸಿ ಅಂಕಪಟ್ಟಿ, ಐಟಿಐ ಪ್ರಮಾಣ ಪತ್ರ (ಸ್ವ ದೃಢೀಕೃತ ರಿಸಲ್ಟ್ ಶೀಟ್) ಜಾತಿ ಪ್ರಮಾಣ ಪತ್ರ, ಅಂಗವಿಕಲರ ಪ್ರಮಾಣ ಪತ್ರ, ಆಧಾರ್ ಕಾರ್ಡ್ ಹಾಗೂ ಪಾನ್ ಕಾರ್ಡ್ ಜೆರಾಕ್ಸ್, 4 ಭಾವಚಿತ್ರಗಳು ಮತ್ತು ಎನ್ಸಿವಿಟಿ ಎಂಐಎಸ್ ಪೋರ್ಟಲ್ ನೋಂದಣಿ ಪ್ರತಿಯನ್ನು ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ www.bhel.com ಜಾಲತಾಣವನ್ನು ಅಥವಾ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಚಿತ್ರದುರ್ಗದ ದೂರವಾಣಿ ಸಂಖ್ಯೆಗಳಾದ 9945587060, 7022459064, 7019755147 ಗಳನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಜಿಲ್ಲೆಯ ವಿವಿಧ ಕ್ಷೇತ್ರಗಳ ಸಾಧಕರೊಂದಿಗೆ ರಾಜ್ಯಪಾಲರ ಸಂವಾದ

ಮಳೆನೀರು ಕೊಯ್ಲು, ನೀರು ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಲು ಕರೆ



ಪಾಂಡವ ನ್ಯೂಸ್, ಚಿತ್ರದುರ್ಗ: ಕೃಷಿ ಉತ್ಪನ್ನಗಳ ಮೌಲ್ಯವರ್ಧನೆ, ಸಾವಯವ ಕೃಷಿ ಪದ್ಧತಿ ಹಾಗೂ ಹೈನುಗಾರಿಕೆಯಲ್ಲಿ ಜಿಲ್ಲೆಯ ರೈತರು ಸಾಧಿಸಿರುವ ಪ್ರಗತಿಗೆ ಕರ್ನಾಟಕದ ರಾಜ್ಯಪಾಲರಾದ ಡಾ. ಸುಧಾ ಯಾದವ್ ಅವರು ಮೆಚ್ಚುಗೆ ವ್ಯಕ್ತಪಡಿಸಿ, ಜಲ ಸಂರಕ್ಷಣೆಯ ನಿಟ್ಟಿನಲ್ಲಿ ಪ್ರತಿಯೊಬ್ಬರು ಮಳೆನೀರು ಕೊಯ್ಲು, ನೀರು ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದು ಕರೆ ನೀಡಿದರು.

ಚಿತ್ರದುರ್ಗ ಜಿಲ್ಲೆಯ ಮೂಲಕ ಬಳ್ಳಾರಿಗೆ ಪ್ರಯಾಣಿಸುವ ಸಂದರ್ಭದಲ್ಲಿ ಹಿರಿಯೂರು ನಗರದ ಸರ್ಕ್ಯೂಟ್ ಹೌಸ್‌ನಲ್ಲಿ ಭಾನುವಾರ ಜಿಲ್ಲೆಯ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿರುವ ಗಣ್ಯರನ್ನು ಭೇಟಿಯಾಗಿ, ಅವರೊಂದಿಗೆ ಮಧ್ಯಾಹ್ನದ ಭೋಜನದೊಂದಿಗೆ ಸಂವಾದ ನಡೆಸಿದರು.

ಭವಿಷ್ಯದ ದೃಷ್ಟಿಯಿಂದ ನೀರಿನ ಸಂರಕ್ಷಣೆ ಅತ್ಯಗತ್ಯವಾಗಿದ್ದು, ಮಳೆನೀರು ಸಂಗ್ರಹಣೆಯ ಮಹತ್ವ ಒತ್ತಿ ಹೇಳಿದ ಅವರು, ಯುವ ಪೀಳಿಗೆಯು ಯಾವುದೇ ದುಶ್ಚಟಗಳಿಗೆ ಬಲಿಯಾಗದೇ, ಮಾದಕ ವಸ್ತುಗಳಿಂದ ದೂರವಿದ್ದು, ಉತ್ತಮ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಹೇಳಿದರು.

ಸಿರಿಧಾನ್ಯಗಳ ಸಂಸ್ಕರಣೆ ಮತ್ತು ಮಾರುಕಟ್ಟೆ, ರೈತ ಉತ್ಪಾದಕ ಕಂಪನಿಗಳು, ಸಮಗ್ರ ಕೃಷಿ, ಹೈನುಗಾರಿಕೆ, ಸಾವಯವ ಕೃಷಿ, ಸ್ವ-ಸಹಾಯ ಸಂಘಗಳ ಮೂಲಕ ಸಿರಿಧಾನ್ಯ ಆಧಾರಿತ ಉತ್ಪನ್ನಗಳ ತಯಾರಿಕೆ ಮತ್ತು ಮಾರಾಟ, ಕನ್ನಡ ಸಾಹಿತ್ಯ, ಗ್ರಾಮೀಣ ಕಲೆ, ರಂಗಭೂಮಿ ಹಾಗೂ ಮಳೆನೀರು ಕೊಯ್ಲು ಸೇರಿದಂತೆ ವಿವಿಧ ಕ್ಷೇತ್ರಗಳ ಸಾಧಕರೊಂದಿಗೆ ಕುರಿತು ಚರ್ಚೆ ನಡೆಸಿದ ರಾಜ್ಯಪಾಲರು ಸಾಧಕರ ಕಾರ್ಯಚಟುವಟಿಕೆಗಳು, ಸಾಧನೆಗಳು, ಅನುಭವಗಳು ಹಾಗೂ ಸಮಾಜಕ್ಕೆ ನೀಡುತ್ತಿರುವ ಕೊಡುಗೆಗಳ ಕುರಿತು ಮಾಹಿತಿ ಪಡೆದರು.

ಸಾಧಕರು ತಮ್ಮ ತಮ್ಮ ಕ್ಷೇತ್ರಗಳಲ್ಲಿನ ಸಾಧನೆ, ಅನುಭವ ಮತ್ತು ಪ್ರಭಾವ ಬಳಸಿಕೊಂಡು ಚಿತ್ರದುರ್ಗ ಜಿಲ್ಲೆಯಾದ್ಯಂತ ಮಾದಕ ವಸ್ತುಗಳ ದುಷ್ಪರಿಣಾಮಗಳ ಕುರಿತು ಜನಜಾಗೃತಿ ಮೂಡಿಸುವ ಕಾರ್ಯದಲ್ಲಿ ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಮಳೆನೀರು ಕೊಯ್ಲಿಗೆ ಹೆಚ್ಚಿನ ಆದ್ಯತೆ ನೀಡಬೇಕು ಹಾಗೂ ಈ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವುದರ ಜೊತೆಗೆ ಸಮುದಾಯದ ಸಕ್ರಿಯ ಪಾಲ್ಗೊಳ್ಳುವಿಕೆಯನ್ನು ಉತ್ತೇಜಿಸಬೇಕು ಎಂದು ತಿಳಿಸಿದ ಅವರು, ಗ್ರಾಮೀಣ ಅಭಿವೃದ್ಧಿ, ಸಾಮಾಜಿಕ ಜಾಗೃತಿ ಮತ್ತು ಸಮುದಾಯದ ಕಲ್ಯಾಣಕ್ಕಾಗಿ ತಮ್ಮ ಪ್ರಯತ್ನಗಳನ್ನು ಮುಂದುವರಿಸುವಂತೆ ವಿವಿಧ ಕ್ಷೇತ್ರಗಳ ಸಾಧಕರಿಗೆ ಪ್ರೋತ್ಸಾಹಿಸಿದರು.

ಸಂವಾದ ಆರಂಭದಲ್ಲಿ ಹೊಸದುರ್ಗದ ಶ್ರೀರಾಂಪುರ ದುರ್ಗದ ಸಿರಿಧಾನ್ಯ ರೈತ ಉತ್ಪಾದಕ ಸಂಸ್ಥೆಯ ಗಿರೀಶ್ ಮಾತನಾಡಿ, ರೈತ ಬೆಳೆದ ಸಿರಿಧಾನ್ಯಗಳನ್ನು ನಾವೇ ಬೆಂಬಲ ಬೆಲೆಯಲ್ಲಿ ಖರೀದಿಸಿ, ಸುಮಾರು 1 ಕೋಟಿ ವೆಚ್ಚದ ಘಟಕದಲ್ಲಿ ಸಂಸ್ಕರಿಸುತ್ತಿದ್ದೇವೆ. ನಂತರ 'ಹೊಸಸಿರಿ' ಬ್ರ್ಯಾಂಡ್ ಅಡಿಯಲ್ಲಿ ಬೆಂಗಳೂರಿನ ಮಾಲ್‌ಗಳು ಮತ್ತು ವಿವಿಧ ಮಳಿಗೆಗಳಿಗೆ ಮಾರಾಟ ಮಾಡುತ್ತಿದ್ದೇವೆ ಎಂದು ನೀಡಿದರು.

ಪ್ರಗತಿಪರ ರೈತ ಕೋನರೆಡ್ಡಿ ತಮ್ಮ ಅನುಭವ ಹಂಚಿಕೊಂಡು, 2010ರಿಂದಲೂ ನಮ್ಮ ಜಮೀನಿನಲ್ಲಿ ಯಾವುದೇ ರಾಸಾಯನಿಕ ಗೊಬ್ಬರ ಅಥವಾ ಕೀಟನಾಶಕಗಳನ್ನು ಬಳಸುತ್ತಿಲ್ಲ. ನಾವೇ ತಯಾರಿಸುವ ಜೀವಾಮೃತ, ಸಗಣಿ, ಗೋಮೂತ್ರ ಹಾಗೂ ಸಸ್ಯ ಕಷಾಯಗಳನ್ನು ಬಳಸಿ ಸಮಗ್ರ ಸಾವಯವ ಕೃಷಿ ಮಾಡುತ್ತಿದ್ದೇವೆ. ಆರಂಭದ ಎರಡು ವರ್ಷ ಸ್ವಲ್ಪ ಕಷ್ಟವಾದರೂ, ಈಗ ಉತ್ತಮ ಲಾಭದಾಯಕವಾಗಿದೆ. ಕೃಷಿ ಇಲಾಖೆಯ ಸಹಯೋಗದೊಂದಿಗೆ ಇತರ ರೈತರಿಗೂ ಈ ಬಗ್ಗೆ ಅರಿವು ಮೂಡಿಸಲಾಗುತ್ತಿದೆ' ಎಂದರು. ರಾಸಾಯನಿಕ ಕೃಷಿಯತ್ತ ವಾಲುತ್ತಿರುವ ರೈತರನ್ನು ಸಾವಯವದತ್ತ ಸೆಳೆಯಲು ಇಲಾಖೆ ಇನ್ನಷ್ಟು ಶ್ರಮಿಸಬೇಕಿದೆ ಎಂದರು.

ನಮ್ಮ ಸ್ವಂತ ಉಳಿತಾಯ ಹಾಗೂ ಕೃಷಿ ಇಲಾಖೆಯ ಪ್ಯಾಕೇಜಿಂಗ್ ಮತ್ತು ಬ್ರ್ಯಾಂಡಿಂಗ್ ಸಹಾಯಧನದೊಂದಿಗೆ ಉದ್ಯಮ ಆರಂಭಿಸಿದ್ದೇವೆ. ಪ್ರಸ್ತುತ 25ಕ್ಕೂ ಹೆಚ್ಚು ಮಹಿಳೆಯರಿಗೆ ಉದ್ಯೋಗ ನೀಡಿದ್ದೇವೆ. ಪೈಪೋಟಿಗಿಂತ ಪರಸ್ಪರ ಸಹಕಾರದೊಂದಿಗೆ ಉದ್ಯಮ ನಡೆಸುತ್ತಿದ್ದು, ಮುಂದಿನ ಹಂತದಲ್ಲಿ ಪಿಎಂಎಫ್ಎಂಇ ಯೋಜನೆಯಡಿ ವಿಸ್ತರಿಸುವ ಗುರಿ ಹೊಂದಿದ್ದೇವೆ ಎಂದು ಸ್ವ ಸಹಾಯ ಸಂಘದ ಮೂಲಕ ಸಿರಿಧಾನ್ಯ ಆಧಾರಿತ ಉತ್ಪನ್ನಗಳ ಮಾರಾಟ ಮಾಡುತ್ತಿರುವ ಶ್ರೀದೇವಿ ಮಾಹಿತಿ ನೀಡಿದರು.

ಸರ್ಕಾರದ ಎನ್ಎಲ್ಎಂ ಯೋಜನೆಯಡಿ ನಮ್ಮ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ 250 ಹಸುಗಳನ್ನು ಖರೀದಿಸಲಾಗಿದೆ. ಈ ಹಿಂದೆ ದಿನಕ್ಕೆ 140-150 ಲೀಟರ್ ಇದ್ದ ಹಾಲಿನ ಸಂಗ್ರಹ ಈಗ 650 ರಿಂದ 700 ಲೀಟರ್‌ಗೆ ಏರಿಕೆಯಾಗಿದೆ. ಇದರಿಂದ ವಾರ್ಷಿಕ ರೂ.1.50 ಕೋಟಿಯಿಂದ ರೂ.1.75 ಕೋಟಿವರೆಗೆ ವಹಿವಾಟು ನಡೆಯುತ್ತಿದೆ. ಅಲ್ಲದೆ, ಹೈನುಗಾರಿಕೆಯ ಉಪ ಉತ್ಪನ್ನಗಳಿಂದ ಜೀವಾಮೃತ ತಯಾರಿಸಿ ಕೃಷಿಗೂ ಬಳಸುತ್ತಿದ್ದೇವೆ ಎಂದು ಪ್ರಗತಿಪರ ಕೃಷಿಕ ಕೆ.ನರಸಿಂಹಮೂರ್ತಿ ಮಾಹಿತಿ ನೀಡಿದರು.

ಇಂದಿನ ಯುವ ಪೀಳಿಗೆಯಲ್ಲಿ ಓದು ಮತ್ತು ಬರವಣಿಗೆಯ ಆಸಕ್ತಿ ಕಡಿಮೆಯಾಗುತ್ತಿಲ್ಲ. ಆದರೆ ಅವರ ಅಭಿವ್ಯಕ್ತಿಯ ಮಾಧ್ಯಮ ಬದಲಾಗಿದೆ. ಪುಸ್ತಕಗಳ ಬದಲಿಗೆ ಅವರು ಮೊಬೈಲ್ ಮತ್ತು ಸಾಮಾಜಿಕ ಜಾಲತಾಣಗಳ ಮೂಲಕ ಸಾಹಿತ್ಯ, ಇತಿಹಾಸ ಹಾಗೂ ಸಂಸ್ಕೃತಿಯ ಬಗ್ಗೆ ಹೆಚ್ಚು ಬರೆಯುತ್ತಿದ್ದಾರೆ ಎಂದು ಲೇಖಕ ಎಂ.ಜಿ.ರಂಗಸ್ವಾಮಿ ರಾಜ್ಯಪಾಲರ ಗಮನಕ್ಕೆ ತಂದರು.

'ಯುವ ಪೀಳಿಗೆಗೆ ಬರವಣಿಗೆಯಲ್ಲಿ ಆಸಕ್ತಿ ಇದೆಯೇ? ಸಾಂಸ್ಕೃತಿಕವಾಗಿ ಅವರ ದೃಷ್ಟಿಕೋನ ಹೇಗಿದೆ?' ಎಂದು ರಾಜ್ಯಪಾಲರು ಪ್ರಶ್ನಿಸಿದರು. ಇದಕ್ಕೆ ಉತ್ತರಿಸಿದ ಲೇಖಕ ಎಂ.ಜಿ.ರಂಗಸ್ವಾಮಿ, 'ಯುವಕರು ಇತಿಹಾಸ ಮತ್ತು ಸಂಸ್ಕೃತಿಯ ಬಗ್ಗೆ ಅಪಾರ ಆಸಕ್ತಿ ಹೊಂದಿದ್ದಾರೆ. ಜಾಗತಿಕ ಸಮಸ್ಯೆಗಳು ಮತ್ತು ಭವಿಷ್ಯದ ಬಗ್ಗೆ ಅವರಿಗೆ ಕಾಳಜಿ ಇದೆ. ಅವರು ಸಾಕಷ್ಟು ಬರೆಯುತ್ತಿದ್ದಾರೆ. ಆದರೆ ಅದು ಪುಸ್ತಕ ರೂಪದ ಬದಲಿಗೆ ಡಿಜಿಟಲ್ ಮತ್ತು ಮೊಬೈಲ್ ವೇದಿಕೆಗಳಿಗೆ ಸೀಮಿತವಾಗಿದೆ ಎಂದು ತಿಳಿಸಿದ ಅವರು, ಇದೇ ಸಂದರ್ಭದಲ್ಲಿ ಡಾ. ಫ್ರಾನ್ಸಿಸ್ ಬುಕಾನನ್ ಅವರ ಹಳೆಯ ಮೈಸೂರು ಪ್ರವಾಸದ ಐತಿಹಾಸಿಕ ವರದಿಗಳ ಅನುವಾದ ಕಾರ್ಯದ ಬಗ್ಗೆಯೂ ರಾಜ್ಯಪಾಲರಿಗೆ ಮಾಹಿತಿ ನೀಡಿದರು.

ಸಂವಾದದಲ್ಲಿ ಹಿರಿಯ ರಂಗಕರ್ಮಿ, ಹಾರ್ಮೋನಿಯಂ ವಾದಕ ಹಾಗೂ ನಾಟಕ ನಿರ್ದೇಶಕರಾದ 90 ವರ್ಷದ ಜಿ.ಡಿ. ತಿಮ್ಮಯ್ಯ ಅವರನ್ನು ರಾಜ್ಯಪಾಲರಿಗೆ ಪರಿಚಯಿಸಲಾಯಿತು. ಪೌರಾಣಿಕ, ಐತಿಹಾಸಿಕ ಮತ್ತು ಸಾಮಾಜಿಕ ನಾಟಕಗಳನ್ನು ನಿರ್ದೇಶಿಸಿರುವ ಹಾಗೂ ಎರಡು ಕವನ ಸಂಕಲನಗಳನ್ನು ಹೊರತಂದಿರುವ ತಿಮ್ಮಯ್ಯ ಅವರಿಗೆ ಪ್ರಸಕ್ತ ಸಾಲಿನ ಕನ್ನಡ ರಾಜ್ಯೋತ್ಸವ ಪ್ರಶಸ್ತಿ ಲಭಿಸಿರುವುದನ್ನು ತಿಳಿದು ರಾಜ್ಯಪಾಲರು ಸಂತಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಎಸ್.ರಮ್ಯಾ, ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಎಸ್.ಆಕಾಶ್, ದಾವಣಗೆರೆ ಪೂರ್ವ ವಲಯ ಐಜಿಪಿ ಎನ್.ಸತೀಶ್ ಕುಮಾರ್, ಉಪವಿಭಾಗಾಧಿಕಾರಿ ಡಾ.ಕೆ.ಜೆ.ಕಾಂತರಾಜ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಶಿವಕುಮಾರ್, ತಹಶೀಲ್ದಾರ್ ಸಿದ್ದೇಶ್, ಕೃಷಿ ಇಲಾಖೆ ಜಂಟಿ ಕೃಷಿ ನಿರ್ದೇಶಕ ಮಂಜುನಾಥ್, ಇತಿಹಾಸ ಸಂಶೋಧಕ ಬಿ.ರಾಜಶೇಖರಪ್ಪ, ಜಲತಜ್ಞ ದೇವರಾಜರೆಡ್ಡಿ, ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಇದ್ದರು.

ಮಾಜಿ ಸಚಿವ ಬಿ.ಸಿ. ಪಾಟೀಲ ಜನ್ಮದಿನ: ರೋಗಿಗಳಿಗೆ ಹಣ್ಣು ವಿತರಣೆ

ಹಿರೇಕೆರೂರು ಸಾರ್ವಜನಿಕ ಆಸ್ಪತ್ರೆಯಲ್ಲಿ ಬಿಜೆಪಿ ಕಾರ

ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ ಅಧ್ಯಕ್ಷತೆಯಲ್ಲಿ ನಡೆದ ಜಿಲ್ಲಾ 'ದಿಶಾ' ಪ್ರಗತಿ ಪರಿಶೀಲನಾ ಸಭೆ

ಸಿಜೆರಿಯನ್ ತಗ್ಗಿಸಿ, ಲ್ಯಾಬ್‌ಗಳಲ್ಲಿನ ವ್ಯತ್ಯಾಸದ ಪರಿಶೀಲನೆ ನಡೆಸಲು ಸೂಚನೆ

ಪಾಂಡವ ನ್ಯೂಸ್, ದಾವಣಗೆರೆ : ಜಿಲ್ಲೆಯಲ್ಲಿನ ಸರ್ಕಾರಿ ಹಾಗೂ ಖಾಸಗಿ ನರ್ಸಿಂಗ್ ಹೋಂ ಗಳಲ್ಲಿ ನಡೆಯುವ ಸಿಜೆರಿಯನ್ ಹೆರಿಗೆಗಳನ್ನು ಗಣನೀಯವಾಗಿ ತಗ್ಗಿಸಲು ಮತ್ತು ವಿವಿಧ ಲ್ಯಾಬ್ ಗಳಲ್ಲಿನ ಪರೀಕ್ಷಾ ವರದಿಗಳ ವ್ಯತ್ಯಾಸಗಳನ್ನು ಜಿಲ್ಲಾ ಆರೋಗ್ಯಾಧಿಕಾರಿಗಳು ಮತ್ತು ಜಿಲ್ಲಾ ಸರ್ಜನ್ ಜಂಟಿಯಾಗಿ ಪರಿಶೀಲನೆ ನಡೆಸಿ ಸಮಗ್ರ ವರದಿ ನೀಡುವಂತೆ ಸಂಸದರಾದ ಡಾ: ಪ್ರಭಾ ಮಲ್ಲಿಕಾರ್ಜುನ್ ತಿಳಿಸಿದರು.

ಅವರು ಸೋಮವಾರ ಹೊನ್ನಾಳಿ ತಾಲ್ಲೂಕಿನ ಅರಬಗಟ್ಟೆಯ ಶ್ರೀಮತಿ ಇಂದಿರಾಗಾಂಧಿ ವಸತಿ ಶಾಲೆಯಲ್ಲಿ ನಡೆದ ಜಿಲ್ಲಾ ಅಭಿವೃದ್ಧಿ ಸಮನ್ವಯ ಮತ್ತು ಉಸ್ತುವಾರಿ ಸಮಿತಿ (ಆಖಖಐಂ) ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಪ್ರಗತಿ ಪರಿಶೀಲನೆಯಲ್ಲಿ ಮಾತನಾಡಿದರು.

ಸಭೆಯಲ್ಲಿ 2026–27ನೇ ಸಾಲಿನ ಅಕ್ಟೋಬರ್ ಅಂತ್ಯದವರೆಗೆ ವಿವಿಧ ಇಲಾಖೆಗಳು ಸಾಧಿಸಿರುವ ಭೌತಿಕ ಹಾಗೂ ಆರ್ಥಿಕ ಪ್ರಗತಿಯನ್ನು ಪರಾಮರ್ಶಿಸಲಾಯಿತು.

ಸಿಜೆರಿಯನ್ ಅಂಕಿ ಅಂಶಗಳನ್ನು ಅವಲೋಕಿಸಿದಾಗ ದಿನದ ಅವಧಿಯಲ್ಲಿ ಹೆಚ್ಚು ಸಿಜೆರಿಯನ್ ಆಗಿದ್ದು ಇವು ಖಾಸಗಿ ನರ್ಸಿಂಗ್ ಹೋಂಗಳಲ್ಲಿ ಹೆಚ್ಚಿವೆ. ಅನಿವಾರ್ಯ ಸಂದರ್ಭವನ್ನು ಹೊರತುಪಡಿಸಿ ಉಳಿದಂತೆ ಸಾಮಾನ್ಯ ಹೆರಿಗೆಗೆ ಒತ್ತು ನೀಡಬೇಕು, ಇದರಿಂದ ಮಹಿಳೆಯರ ಆರೋಗ್ಯವು ಉತ್ತಮವಾಗಿರಲಿದೆ ಎಂದ ಅವರು ಸಿಜಿ ಆಸ್ಪತ್ರೆ ಹಾಗೂ ಹೊರಗಿನ ಲ್ಯಾಬ್ ಗಳಲ್ಲಿನ ಟೆಸ್ಟಿಂಗ್ ವರದಿಗಳನಲ್ಲಿ ವ್ಯತ್ಯಾಸ ಕಂಡು ಬರುತ್ತಿದ್ದು ಪರಿಶೀಲನೆ ನಡೆಸಲು ಜಿಲ್ಲಾ ಸರ್ಜನ್ ಗೆ ಸೂಚಿಸಿದರು.

ಶುದ್ಧ ಕುಡಿಯುವ ನೀರು ಪೂರಕೆಗೆ ಸೂಚನೆ: ಗ್ರಾಮ ಪಂಚಾಯಿತಿಗಳು ಸ್ವಚ್ಛತೆ ಕಾಪಾಡಿಕೊಂಡು ಶುದ್ಧ ನೀರು ಪೂರಕೆಗೆ ಕ್ರಮ ಕಗೊಳ್ಳಬೇಕು. ಆರ್. ಓ ಘಟಕಗಳ ಬಳಿ ಮತ್ತು ಪೈಪ್ ಲೈನ್ ಗಳಲ್ಲಿ ಕಲುಷಿತವಾಗದಂತೆ ನೋಡಿಕೊಳ್ಳಬೇಕು. ಪೈಪ್ ಲೈನ್ ನಲ್ಲಿ ನೀರು ಲೀಕೇಜ್ ಆಗಿ, ಅದೇ ನೀರು ಪುನಃ ಪೈಪ್ ಲೈನ್ ಗೆ ಸೇರಿಕೊಳ್ಳುತ್ತದೆ. ಇತ್ತೀಚೆಗೆ ಕಲ್ಲೇದೇವಪುರ ಗ್ರಾಮಕ್ಕೆ ಚರಂಡಿ ಕಾಮಗಾರಿಗೆ ಚಾಲನೆ ನೀಡಲು ಹೋದಾಗ ಪೈಪ್ ಹೊಡೆದು ಸುತ್ತಲೂ ಕಲುಷಿತವಾಗಿರುವುದನ್ನು ಕಂಡಿದ್ದು ಪಂಚಾಯಿತಿ ಅಧಿಕಾರಿಗಳು ಇವೆಲ್ಲವನ್ನು ಪರಿಶೀಲಿಸಲು ತಾಕೀತು ಮಾಡಲು ಸಿಇಓಗೆ ತಿಳಿಸಿದರು. ಈವೇಳೆ ಸಿಇಓ ಅವರು ನೀರಿನ ಟೆಸ್ಟ್ ಮಾಡುತ್ತಿರುವ ಬಗ್ಗೆ ವಿವರಿಸಿದರು.

ಮನೆ ನಿರ್ಮಾಣ ಮೊತ್ತ ಹೆಚ್ಚಿಸಲು ಸರ್ಕಾರಕ್ಕೆ ಒತ್ತಾಯ: ಪ್ರಧಾನಮಂತ್ರಿ ಆವಾಸ್ ಯೋಜನೆಯಡಿ ಮನೆ ನಿರ್ಮಿಸಲು ನೀಡಲಾಗುವ ಸಹಾಯಧನ ತೀರಾ ಕಡಿಮೆಯಾಗಿದೆ. ಇದಕ್ಕೆ ಪೂರಕವಾಗಿ ಸ್ವಚ್ಛ ಭಾರತ್ ಮಿಷನ್ ಹಾಗೂ ಬಿವಿಜಿ ರಾಮ್ ಜಿ ಯೋಜನೆಯಡಿ 90 ದಿನಗಳ ಸಹಾಯಧನ ನೀಡಲು ಲಿಂಕ್ ಮಾಡಿ ಎಂದ ಅವರು ಈ ಬಗ್ಗೆ ಸಂಸತ್ ನಲ್ಲಿ ಪ್ರಶ್ನೋತ್ತರ ಅವಧಿಯಲ್ಲಿ ಗಮನ ಸೆಳೆಯಲಿದ್ದು ಅಂಕಿ ಅಂಶಗಳನ್ನು ಒದಗಿಸಲು ತಿಳಿಸಿದರು.

ಸಂಚಾರಿ ನಿಯಮಗಳ ಅನುಷ್ಠಾನಕ್ಕೆ ಸೂಚನೆ: ಅಪ್ರಾಪ್ತ ಮಕ್ಕಳು ತಮ್ಮ ಪೋಷಕರಿಗೆ ತಿಳಿಸದೇ ದ್ವಿಚಕ್ರ ವಾಹನಗಳನ್ನು ತೆಗೆದುಕೊಂಡು ಟ್ರಿಪ್ಪಲ್ ರೈಡಿಂಗ್ ಮಾಡುತ್ತಿದ್ದಾರೆ. ಈ ಬಗ್ಗೆ ಶಾಲಾ, ಕಾಲೇಜಿನ ವಿದ್ಯಾರ್ಥಿಗಳಿಗೆ ಮೊದಲು ಜಾಗತಿ ಮೂಡಿಸಿ ನಂತರ ಕಾನೂನು ಕ್ರಮ ಕಗೊಳ್ಳಲು ಸಂಸದರು ಪೊಲೀಸ್ ಇಲಾಖೆಗೆ ತಿಳಿಸಿದರು. ಈ ವೇಳೆ ಜಿಲ್ಲಾಧಿಕಾರಿ ಗಂಗಾಧರಸ್ವಾಮಿ ಜಿ. ಎಂ ಅವರು ಎಸ್. ಪಿ ಅವರೊಂದಿಗೆ ಶಾಲಾ, ಕಾಲೇಜುಗಳಿಗೆ ಭೇಟಿ ನೀಡಿ ಜಾಗತಿ ಮೂಡಿಸಿ, ನಂತರ ಸಂಚಾರಿ ನಿಯಮಗಳ ಅನುಷ್ಠಾನ ಮಾಡಲಾಗುತ್ತದೆ ಎಂದರು.

ಶಾಸಕರು ಈ ವೇಳೆ ಪ್ರಸಸ್ತಾಪಿಸಿ ತಾಲ್ಲೂಕಿನಲ್ಲಿ ಈ ಹಿಂದೆ ಬ್ಯಾಂಕ್ ನಿಂದ ಕಳ್ಳತನ ಮಾಡಿದ ಬಂಗಾರ, ಕೊಲೆ ಪ್ರಕರಣ ಭೇದಿಸುವಲ್ಲಿ ಪೊಲೀಸ್ ಇಲಾಖೆ ಅತ್ಯುತ್ತಮ ಕೆಲಸ ಮಾಡಿದೆ. ಆದರೆ ಜೂಜು, ಗಾಂಜಾ ಹಾವಳಿ ಹೆಚ್ಚಿದ್ದು ಕೆಳ ಹಂತದ ಪೊಲೀಸ್ ಸಿಬ್ಬಂದಿಗಳು ಇದಕ್ಕೆ ಸಹಕಾರ ನೀಡುತ್ತಿದ್ದು ನಿಯಂತ್ರಿಸಬೇಕೆಂದು ಒತ್ತಾಯಿಸಿದರು.

ವಿಶೇಷಚೇತನರು ವಡ್ನಹಳ್ಳಿ ಸಿಆರ್ ಸಿಗೆ ಭೇಟಿ ನೀಡಿ: ದಾವಣಗೆರೆ ತಾ. ವಡ್ನಹಳ್ಳಿಯಲ್ಲಿ ಕೇಂದ್ರ ಸರ್ಕಾರದ ಸಿಆರ್ ಸಿ ಕೇಂದ್ರಕ್ಕೆ ವಿಶೇಷಚೇತನರು ಮತ್ತು ಹಿರಿಯ ನಾಗರಿಕರು ಭೇಟಿ ನೀಡಬೇಕು. ಅಲ್ಲಿ ನುರಿತ ತಜ್ಞರು ಇದ್ದು ವಿಶೇಷಚೇತನರಿಗೆ ಅಗತ್ಯವಿರುವ ಚಿಕಿತ್ಸೆ ಮತ್ತು ಸಲಕರಣೆಗಳನ್ನು ವಿತರಣೆ ಮಾಡಲಾಗುತ್ತದೆ ಎಂದರು, ಈ ವೇಳೆ ಹೊನ್ನಾಳಿ ಶಾಸಕರಾದ ಡಿ. ಜಿ. ಶಾಂತನಗೌಡರು ತಾಲ್ಲೂಕಿನ ಪಟ್ಟಿ ಸಿದ್ದಪಡಿಸಿ ಅರ್ಹರನ್ನು ಕಳುಹಿಸಿಕೊಡಲಾಗುತ್ತದೆ ಎಂದರು.

ಡಿಸೆಂಬರ್ ಅಂತ್ಯದೊಳಗೆ ಗುಂಡಿ ಮುಚ್ಚಿ: ರಾಜ್ಯ ಹೆದ್ದಾರಿ ಮತ್ತು ಜಿಲ್ಲಾ ರಸ್ತೆಗಳಲ್ಲಿನ ಗುಂಡಿಗಳನ್ನು ಮುಚ್ಚಬೇಕು. ಹರಿಹರ– ಮಲೆಬೆನ್ನೂರು ರಸ್ತೆ ಅಂಡರ್ ಪಾಸ್ ಹತ್ತಿರ ಗುಂಡಿಗಳಿದ್ದು ಇದನ್ನು ಎನ್ ಹೆಚ್ ಎ. ಐ ಅಧಿಕಾರಿಗಳು ಕ್ರಮ ಕಗೊಳ್ಳಬೇಕೆಂದಾಗ ಅದನ್ನು ಪ್ರಾಧಿಕಾರದಿಂದಲೇ ರಸ್ತೆ ನಿರ್ಮಿಸಲಾಗುತ್ತದೆ ಎಂದರು. ಕೃಷಿ ಮತ್ತು ತೋಟಗಾರಿಕೆ ಇಲಾಖೆ:ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ನಿಧಿ ಯೋಜನೆಯಡಿ ಜಿಲ್ಲೆಯ 1,31,381 ರೈತ ಫಲಾನುಭವಿಗಳಿಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಒಟ್ಟು ರೂ. 698.98 ಕೋಟಿ ಪಾವತಿಸಲಾಗಿದೆ. ಪ್ರಧಾನ ಮಂತ್ರಿ ಕೃಷಿ ಸಿಂಚಾಯಿ ಯೋಜನೆ–ಸೂಕ್ಷ್ಮ ನೀರಾವರಿ (ಕಒಐಐಜ–ಒಖ) ಅಡಿಯಲ್ಲಿ 3,076 ಹೆಕ್ಟೇರ್ ಗುರಿಗೆ 3,009 ಹೆಕ್ಟೇರ್ (ಶೇ. 98) ಸಾಧನೆಯಾಗಿದ್ದು, ರೂ. 340.14 ಲಕ್ಷ ವೆಚ್ಚ ಮಾಡಲಾಗಿದೆ. ತೋಟಗಾರಿಕೆ ಇಲಾಖೆಯ ವಿವಿಧ ಯೋಜನೆಗಳಡಿ ಒಟ್ಟು 6,422 ಫಲಾನುಭವಿಗಳಿಗೆ ಸೌಲಭ್ಯ ಕಲ್ಪಿಸಲಾಗಿದ್ದು, ಬಿಡುಗಡೆಯಾದ ರೂ. 1,352.37 ಲಕ್ಷ ಅನುದಾನದಲ್ಲಿ ರೂ. 1,231.25 ಲಕ್ಷ (ಶೇ. 91.04) ವೆಚ್ಚವಾಗಿದೆ.

ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ (ಎಎಒ):ಜಲ ಜೀವನ್ ಮಿಷನ್ ಯೋಜನೆಯಡಿ ಜಿಲ್ಲೆಯಲ್ಲಿ ಅನುಮೋದನೆಯಾದ ಒಟ್ಟು 876 ಕಾಮಗಾರಿಗಳ ಪೈಕಿ 735 ಕಾಮಗಾರಿಗಳು ಪೂರ್ಣಗೊಂಡಿವೆ (ಶೇ. 83.90). 2,59,132 ಮನೆಗಳಿಗೆ ನಳ ಸಂಪರ್ಕ ಕಲ್ಪಿಸುವ ಗುರಿಯಲ್ಲಿ 2,40,336 ಮನೆಗಳಿಗೆ (ಶೇ. 92.75) ನೀರಿನ ಸಂಪರ್ಕ ನೀಡಲಾಗಿದ್ದು, ರೂ. 658.13 ಕೋಟಿ ಅನುದಾನದಲ್ಲಿ 460.85 ಕೋಟಿ ವೆಚ್ಚವಾಗಿದೆ. ಜಿಲ್ಲೆಯಲ್ಲಿರುವ 799 ಶುದ್ಧ ಕುಡಿಯುವ ನೀರಿನ ಘಟಕಗಳ ಪೈಕಿ 673 ಘಟಕಗಳು ಕಾರ್ಯನಿರ್ವಹಿಸುತ್ತಿದ್ದು, ಬಾಕಿ 126 ಘಟಕಗಳ ದುರಸ್ತಿಗೆ ಕ್ರಮ ವಹಿಸಲಾಗಿದೆ.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ:ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಬಿಡುಗಡೆಯಾದ ರೂ. 2,419.82 ಲಕ್ಷ ಅನುದಾನದಲ್ಲಿ ರೂ. 1,603.46 ಲಕ್ಷ (ಶೇ. 66) ವೆಚ್ಚವಾಗಿದೆ. ಏಪ್ರಿಲ್‌ನಿಂದ ಸೆಪ್ಟೆಂಬರ್ ಅಂತ್ಯದವರೆಗೆ ಜಿಲ್ಲೆಯ ಸರ್ಕಾರಿ ಮತ್ತು ಖಾಸಗಿ ಆಸ್ಪತ್ರೆಗಳಲ್ಲಿ ಒಟ್ಟು 12,249 ಹೆರಿಗೆಗಳಾಗಿದ್ದು, ನವಜಾತ ಶಿಶುಗಳಿಗೆ ಃಅಔ (ಶೇ. 102) ಹಾಗೂ ಸಂಪೂರ್ಣ ಲಸಿಕಾಕರಣದಲ್ಲಿ ಶೇ. 111ರಷ್ಟು ಪ್ರಗತಿ ಸಾಧಿಸಲಾಗಿದೆ. ಶಾಲಾ ಮಕ್ಕಳ



ಆರೋಗ್ಯ ತಪಾಸಣೆಯಲ್ಲಿ 77,975 ಮಕ್ಕಳ ಪೈಕಿ 76,708 ಮಕ್ಕಳ ತಪಾಸಣೆ (ಶೇ. 98) ಪೂರ್ಣಗೊಂಡಿದೆ.

ಶಾಲಾ ಶಿಕ್ಷಣ ಮತ್ತು ಅಕ್ಷರ ದಾಸೋಹ:ಜಿಲ್ಲೆಯಲ್ಲಿ 1,041 ಸರ್ಕಾರಿ ಪ್ರಾಥಮಿಕ ಮತ್ತು 135 ಸರ್ಕಾರಿ ಪ್ರೌಢಶಾಲೆಗಳು ಸೇರಿದಂತೆ ಒಟ್ಟು 1,959 ಶಾಲೆಗಳು ಕಾರ್ಯನಿರ್ವಹಿಸುತ್ತಿವೆ. ಪ್ರಧಾನ ಮಂತ್ರಿ ಪೋಷಣ್ (ಅಕ್ಷರ ದಾಸೋಹ) ಯೋಜನೆಯಡಿ ಜಿಲ್ಲೆಯ 1,476 ಸರ್ಕಾರಿ ಮತ್ತು ಅನುದಾನಿತ ಶಾಲೆಗಳ 1,27,242 ವಿದ್ಯಾರ್ಥಿಗಳಿಗೆ ಮಧ್ಯಾಹ್ನದ ಬಿಸಿಯೂಟ ನೀಡಲಾಗುತ್ತಿದೆ. ಶಾಲೆಯಿಂದ ಹೊರಗುಳಿದ 1,047 ಮಕ್ಕಳನ್ನು ಗುರುತಿಸಲಾಗಿದ್ದು, ಈ ಪೈಕಿ 93 ಮಕ್ಕಳನ್ನು ಮರಳಿ ಶಾಲೆಗೆ ಕರೆತರಲಾಗಿದೆ. ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ:ಜಿಲ್ಲೆಯ 1,771 ಅಂಗನವಾಡಿ ಕೇಂದ್ರಗಳ ಮೂಲಕ ಪೂರಕ ಪೌಷ್ಠಿಕ ಆಹಾರ ಕಾರ್ಯಕ್ರಮದಡಿ 1,19,820 ಫಲಾನುಭವಿಗಳಿಗೆ (ಶೇ. 97) ಪೌಷ್ಠಿಕ ಆಹಾರ ವಿತರಿಸಲಾಗುತ್ತಿದೆ. ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆಯಡಿ 7,463 ಫಲಾನುಭವಿಗಳಿಗೆ ರೂ. 393.90 ಲಕ್ಷ ಅನುದಾನವನ್ನು ನೇರ ನಗದು ವರ್ಗಾವಣೆ ಮೂಲಕ ಪಾವತಿಸಿ ಶೇ. 100ರಷ್ಟು ಗುರಿ ಸಾಧಿಸಲಾಗಿದೆ.

ಮಹಾತ್ಮ ಗಾಂಧಿ ನರೇಗಾ ಮತ್ತು ವಸತಿ ಯೋಜನೆಗಳು:ನರೇಗಾ ಯೋಜನೆಯಡಿ ಅಕ್ಟೋಬರ್ ಅಂತ್ಯದವರೆಗೆ 10.91 ಲಕ್ಷ ಮಾನವ ದಿನಗಳನ್ನು ಸೃಜಿಸಲಾಗಿದ್ದು, 26,660 ಕುಟುಂಬಗಳ 41,419 ಕೂಲಿಕಾರರಿಗೆ ಉದ್ಯೋಗ ನೀಡಲಾಗಿದೆ. ಇದಕ್ಕಾಗಿ ಒಟ್ಟು ರೂ. 5,412.62 ಲಕ್ಷ (ರೂ. 54.12 ಕೋಟಿ) ವೆಚ್ಚ ಭರಿಸಲಾಗಿದೆ.

ಪ್ರಧಾನ ಮಂತ್ರಿ ಆವಾಸ್ (ನಗರ) ಯೋಜನೆಯಡಿ ಮಂಜೂರಾದ 3,376 ಮನೆಗಳ ಪೈಕಿ 2,472 ಮನೆಗಳು ಪೂರ್ಣಗೊಂಡಿವೆ. ಗ್ರಾಮೀಣ ವಸತಿ ಯೋಜನೆಗಳಡಿ (ಕಒಂಜ–ಉ, ಅಂಬೇಡ್ಕರ್ ಮತ್ತು ಬಸವ ವಸತಿ) ಒಟ್ಟು 2,371 ಮನೆಗಳು ಪೂರ್ಣಗೊಂಡಿದ್ದು, ಉಳಿದ ಮನೆಗಳ ನಿರ್ಮಾಣ ಪ್ರಗತಿಯಲ್ಲಿದೆ. ಬೆಸ್ಕಾಂ ದಾವಣಗೆರೆ ಮತ್ತು ಹರಿಹರ ವಿಭಾಗಗಳಿಂದ ಗಂಗಾ ಕಲ್ಯಾಣ ಯೋಜನೆಯಡಿ ಒಟ್ಟು 727 ಕೊಳವೆಬಾವಿಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸಲಾಗಿದೆ. ಪಿಎಂ ಸ್ವನಿಧಿ ಯೋಜನೆಯಡಿ ಬೀದಿ ಬದಿ ವ್ಯಾಪಾರಿಗಳಿಗೆ 27,349 ಸಾಲ ಮಂಜೂರಾಗಿದ್ದು, 26,623 ಫಲಾನುಭವಿಗಳಿಗೆ (ಶೇ. 97.35) ಸಾಲ ವಿತರಿಸಲಾಗಿದೆ.

ಕೆ.ಎಸ್.ಆರ್.ಟಿ.ಸಿ ಶಕ್ತಿ ಯೋಜನೆಯಡಿ ಜೂನ್ 2023 ರಿಂದ ಅಕ್ಟೋಬರ್ 2026 ರವರೆಗೆ ಜಿಲ್ಲೆಯಲ್ಲಿ ಒಟ್ಟು 17.48 ಕೋಟಿ ಮಹಿಳಾ ಪ್ರಯಾಣಿಕರು ಉಚಿತವಾಗಿ ಪ್ರಯಾಣಿಸಿದ್ದು, ಇದರ ಒಟ್ಟು ಪ್ರಯಾಣ ದರ ರೂ. 523.28 ಕೋಟಿಗಳಾಗಿವೆ. ಬಸ್ ನಲ್ಲಿ ಸೀಟುಕೊಡಿ: ನಿಗಮದ ಬಸ್ ಗಳಲ್ಲಿ ಮಹಿಳೆಯರಿಗೆ ಮತ್ತು ಹಿರಿಯ ನಾಗರಿಕರಿಗೆ ಮತ್ತು ವಿಶೇಷಚೇತನರಿಗೆ ಮಿಸಲಾದ ಆಸನಗಳಲ್ಲಿ ಮೀಸಲು ವರ್ಗದವರು ಬಸ್ ನಲ್ಲಿ ಇದ್ದಾಗ ಆಸನಗಳನ್ನು ಕೊಡಿಸುವ ಕೆಲಸವನ್ನು ಕೆಎಸ್ ಆರ್ ಟಿಸಿ ಅಧಿಕಾರಿಗಳು ಮಾಡಬೇಕು, ಮಾಡದಿದ್ದಲ್ಲಿ ಕ್ರಮ ಕಗೊಳ್ಳಲು ಈ ಬಗ್ಗೆ ನಿಗಮದಿಂದ ಸುತ್ತೋಲೆ ಹೊರಡಿಸಲು ತಿಳಿಸಿದ ಸಂಸದರು ಕಗೊಂಡ ಕ್ರಮದ ಬಗ್ಗೆ ಮುಂದಿನ ಸಭೆಯಲ್ಲಿ ತಿಳಿಸಲು ಸಾರಿಗೆ ನಿಗಮದ ಅಧಿಕಾರಿಗಳಿಗೆ ತಿಳಿಸಿದರು.ಇ ಸ್ವತ್ತು ಅನ್ನು ಸರ್ಕಾರಿ ಶಾಲಾ ಕಾಲೇಜು ಗಳಿಗೆ ನೀಡಲು ಶಾಲಾ ಶಿಕ್ಷಣ ಇಲಾಖೆ ಸುತ್ತೋಲೆ ಹೊರಡಿಸಿದೆ ಆದುದರಿಂದ ದಾನವಾಗಿ ಬಂದಂತಹ ಸ್ವತ್ತನ್ನು ಸರ್ಕಾರಿ ಶಾಲಾ ಕಾಲೇಜುಗಳಿಗೆ ಡಿಸೆಂಬರ್ 15 ರೊಳಗೆ ಇ ಸ್ವತ್ತು ನೀಡಲು ಕ್ರಮವಹಿ ಸಬೇಕು. ಕೆಲವರು ಇ ಸ್ವತ್ತು ಕುರಿತು ನ್ಯಾಯಾಲಯದಲ್ಲಿ ಪ್ರಕರಣ ದಾಖಲಿಸಿ ತಡೆಯಾಜ್ಞೆ ತಂದಿರುತ್ತಾರೆ ಅಂತಹ ಪ್ರಕರಣಗಳಲ್ಲಿ ಅಧಿಕಾರಿಗಳ ನಿರ್ಲಕ್ಷ್ಯ ಕಂಡು ಬಂದಲ್ಲಿ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಾಗುವುದು ಎಂದರು.

ರಾಷ್ಟ್ರೀಯ ಮತ್ತು ರಾಜ್ಯ ಹೆದ್ದಾರಿಗಳ ಬಳಿ ಮೊದಲೇ ಮನೆಗಳು ನಿರ್ಮಿಸಿದ್ದಲ್ಲಿ ಅಂತಹ ಮನೆಗಳಿಗೆ ಇ ಸ್ವತ್ತನ್ನು ನೀಡಬಹುದು ಹೊಸದಾಗಿ ನಿರ್ಮಿಸುವ ಮನೆಗಳಿಗೆ ಸ್ಥಳ ಬಿಟ್ಟು ನಿರ್ಮಿಸಲು ಷರತ್ತು ವಿಧಿಸಿ ಈ ಸ್ವತ್ತು ನೀಡಬೇಕು ಸರ್ಕಾರವು ಎಲ್ಲರಿಗೂ ಇ ಸ್ವತ್ತು ನೀಡಲು ವಿಶೇಷ ಅಭಿಯಾನ ಆರಂಭಿಸಿದೆ ಎಂದರುವಿದ್ಯಾರ್ಥಿಗಳಿಗೆ ಶಿಕ್ಷಣದ ಸಾಲ ನೀಡಲು ಕೆಲವು ಬ್ಯಾಂಕುಗಳು ನಿರ್ಲಕ್ಷ ವಹಿಸುತ್ತಿರುವುದು ದೂರುಗಳು ಬರುತ್ತವೆ ಆದುದರಿಂದ ವಿದ್ಯಾರ್ಥಿಗಳ ಭವಿಷ್ಯದ ದೃಷ್ಟಿಯಿಂದ ಶಿಕ್ಷಣದ ಸಾಲ ನೀಡಲು ಎಲ್ಲಾ ಬ್ಯಾಂಕುಗಳು ಕ್ರಮವಹಿಸಬೇಕು.

ಸಣ್ಣ ವ್ಯಾಪಾರ ಸ್ಟಾರ್ಟ್ ಅಪ್ ಹಾಗೂ ಎಸ್ ಎಸ್ ಜಿ ಮಹಿಳಾ ಸ್ವಸಹಾಯ ಸಂಘಗಳಿಗೆ ಸಾಲ ನೀಡಲು ಹಿಂದೇಟು ಹಾಕಬಾರದು ಇಂತಹ ಸಂಸ್ಥೆಗಳಿಗೆ ಸಾಲ ನೀಡಿದಲ್ಲಿ ಆರ್ಥಿಕವಾಗಿ ಸಬಲರಾಗಲು ಕಾರಣವಾಗುತ್ತೀರಾ ಶಾಲಾ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಹಣಕಾಸು ನಿರ್ವಹಣೆ ಕುರಿತು ಅರಿವು ಮೂಡಿಸುವ ಕಾರ್ಯಕ್ರಮ ಮಾಡುವಂತೆ ತಿಳಿಸಿದರು

ಸಭೆಯಲ್ಲಿ ಶಾಸಕರಾದ ಡಿ. ಜಿ. ಶಾಂತನಗೌಡ, ಡಿ. ಸಿ. ಗಂಗಾಧರಸ್ವಾಮಿ ಜಿ. ಎಂ, ಸಿ. ಇ. ಓ ಸಾಹಿತ್ಯ ಎಂ. ಆಲದಕಟ್ಟಿ, ಹೆಚ್ಚುವರಿ ರಕ್ಷಣಾಧಿಕಾರಿ ಪರಮೇಶ್ವರ ಹೆಗಡೆ, ಡಿಎ ಹರ್ಷವರ್ಧನ್ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು, ದಿಶಾ ಸಮಿತಿ ಸದಸ್ಯರು ಉಪಸ್ಥಿತರಿದ್ದರು.

ಬಳ್ಳಾರಿಯಲ್ಲಿ ಅರ್ಥಪೂರ್ಣ 'ಜನಜಾತೀಯ ಗೌರವ ದಿವಸ್' ಆಚರಣೆ



ಪಾಂಡವ ನ್ಯೂಸ್, ಬಳ್ಳಾರಿ : ಭಾರತ ಸರ್ಕಾರದ ಯುವ ಕಾರ್ಯ ಮತ್ತು ಕ್ರೀಡಾ ಸಚಿವಾಲಯದ ಮೇರಾ ಯುವ ಭಾರತ ಕೇಂದ್ರ (ಬಳ್ಳಾರಿ), ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜು ಹಾಗೂ ರಾಷ್ಟ್ರೀಯ ಸೇವಾಯೋಜನಾ ಘಟಕದ ಸಹಯೋಗದೊಂದಿಗೆ 'ಜನಜಾತೀಯ ಗೌರವ ದಿವಸ್' ಕಾರ್ಯಕ್ರಮವನ್ನು ಸೋಮವಾರ ಅರ್ಥಪೂರ್ಣವಾಗಿ ಆಚರಿಸಲಾಯಿತು. ಬುಡಕಟ್ಟು ಸ್ವಾತಂತ್ರ ಸೇನಾನಿ ಹಾಗೂ ಹೋರಾಟಗಾರ ಬಿರ್ಸಾ ಮುಂಡಾ ಅವರ 151 ನೇ ಜನ್ಮ ದಿನಾಚರಣೆ ಅಂಗವಾಗಿ ಬಳ್ಳಾರಿಯ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನಲ್ಲಿ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಬುಡಕಟ್ಟು ಸಮುದಾಯಗಳ ಅಮೂಲ್ಯ ಕೊಡುಗೆಯನ್ನು ಹಾಗೂ ಭಾರತೀಯ ಸ್ವಾತಂತ್ರ ಸಂಗ್ರಾಮಕ್ಕಾಗಿ ಅವರು ಮಾಡಿದ ಬಲಿದಾನವನ್ನು ಸ್ಮರಿಸಲು ಈ ದಿನಾಚರಣೆಯನ್ನು ಹಮ್ಮಿಕೊಳ್ಳಲಾಗುತ್ತದೆ. ಮುಂಬರುವ ಪೀಳಿಗೆಗೆ ಬುಡಕಟ್ಟು ಜನರು ದೇಶಕ್ಕೆ ನೀಡಿರುವ ಕೊಡುಗೆಯನ್ನು ತಿಳಿಸುವ ಸಲುವಾಗಿ, 2021 ನೇ ವರ್ಷದ 75ನೇ ಅಜಾದಿ ಕಾ ಅಮೃತ್ ಮಹೋತ್ಸವದ ಸಂದರ್ಭದಲ್ಲಿ ಪ್ರತಿ ವರ್ಷ ನವೆಂಬರ್ 15 ರಂದು "ಜನಜಾತೀಯ ಗೌರವ ದಿವಸ್" ಆಚರಿಸಲು ಭಾರತದ ಮಾನ್ಯ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಘೋಷಿಸಿದ್ದರು.

ಬಳ್ಳಾರಿಯ ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರಾದ ಬಿ. ಸುಲೇಖಾ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಬುಡಕಟ್ಟು ಸಂಸ್ಕೃತಿಯು ಭಾರತದ ಶ್ರೀಮಂತಿಕೆಗೆ ಪ್ರತೀಕವಾಗಿದ್



ಆರೋಗ್ಯವಂತ ಸ್ತ್ರೀ, ಸುಂದರ ಕುಟುಂಬ ಮತ್ತು ಸಮೃದ್ಧ ಸಮಾಜದ ಅಡಿಪಾಯ

ಸ್ತ್ರೀ ಎಂದರೆ ಕೇವಲ ಒಂದು ವ್ಯಕ್ತಿಯಲ್ಲ, ಆಕೆ ಕುಟುಂಬದ ಶಕ್ತಿ, ಪ್ರೀತಿಯ ಪ್ರತಿರೂಪ, ತಾಳ್ಮೆಯ ಸಂಕೇತ ಹಾಗೂ ಸಮಾಜದ ಅಭಿವೃದ್ಧಿಯ ಪ್ರಮುಖ ಭಾಗ. ತಾಯಿಯಾಗಿ, ಮಗಳಾಗಿ, ಸಹೋದರಿಯಾಗಿ, ಪತ್ನಿಯಾಗಿ, ಸ್ನೇಹಿತೆಯಾಗಿ ಹಾಗೂ ಸಮಾಜದ ಜವಾಬ್ದಾರಿಯುತ ನಾಗರಿಕಳಾಗಿ ಸ್ತ್ರೀ ವಿವಿಧ ಪಾತ್ರಗಳನ್ನು ನಿರ್ವಹಿಸುತ್ತಾಳೆ. ಒಂದು ಕುಟುಂಬದ ಸಂತೋಷ, ನೆಮ್ಮದಿ ಮತ್ತು ಪ್ರಗತಿಯಲ್ಲಿ ಸ್ತ್ರೀಯ ಕೊಡುಗೆ ಅಪಾರವಾಗಿದೆ. ಆದ್ದರಿಂದ ಸ್ತ್ರೀಯರ ಆರೋಗ್ಯ, ಶಿಕ್ಷಣ, ಸ್ವಾವಲಂಬನೆ ಮತ್ತು ಗೌರವಕ್ಕೆ ಹೆಚ್ಚಿನ ಆದ್ಯತೆ ನೀಡುವುದು ಇಂದಿನ ಸಮಾಜದ ಪ್ರಮುಖ ಕರ್ತವ್ಯವಾಗಿದೆ.

ಸ್ತ್ರೀ ಎಂದರೆ ಯಾರು? ಸ್ತ್ರೀ ಎಂದರೆ ಸೃಷ್ಟಿಯ ಮುಂದುವರಿಕೆಗೆ ಕಾರಣವಾಗುವ, ಪ್ರೀತಿ, ಕರುಣೆ, ಸಹನೆ, ಧೈರ್ಯ ಮತ್ತು ಆತ್ಮವಿಶ್ವಾಸದ ಗುಣಗಳನ್ನು ಹೊಂದಿರುವ ವ್ಯಕ್ತಿತ್ವ. ಸ್ತ್ರೀ ಕೇವಲ ಕುಟುಂಬದ ಜವಾಬ್ದಾರಿಗಳನ್ನು ನಿರ್ವಹಿಸುವವಳಲ್ಲ; ಆಕೆ ಜ್ಞಾನ, ವಿಜ್ಞಾನ, ವೈದ್ಯಕೀಯ, ಶಿಕ್ಷಣ, ಕೃಷಿ, ಕಲೆ, ಸಾಹಿತ್ಯ, ಆಡಳಿತ ಹಾಗೂ ರಾಜಕೀಯ ಸೇರಿದಂತೆ ಪ್ರತಿಯೊಂದು ಕ್ಷೇತ್ರದಲ್ಲಿಯೂ ತನ್ನ ಸಾಮರ್ಥ್ಯವನ್ನು ಸಾಬೀತುಪಡಿಸಿದ್ದಾಳೆ.

ಸ್ತ್ರೀಯು ಕುಟುಂಬದ ಆಧಾರಸ್ತಂಭವಾಗಿರುವುದರ ಜೊತೆಗೆ ತನ್ನದೇ ಆದ ಕನಸುಗಳು, ಆಸಕ್ತಿಗಳು, ಹಕ್ಕುಗಳು ಮತ್ತು ಸ್ವತಂತ್ರ ವ್ಯಕ್ತಿತ್ವವನ್ನು ಹೊಂದಿದ್ದಾಳೆ. ಆಕೆಗೆ ಸಮಾನ ಅವಕಾಶ, ಗೌರವ ಮತ್ತು ಆರೋಗ್ಯಕರ ಜೀವನ ಒದಗಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದೆ.

ಸ್ತ್ರೀಯರ ಆರೋಗ್ಯದ ಪ್ರಾಮುಖ್ಯತೆ : ಆರೋಗ್ಯವಂತ ಸ್ತ್ರೀ ಆರೋಗ್ಯವಂತ ಕುಟುಂಬ ಮತ್ತು ಆರೋಗ್ಯವಂತ ಸಮಾಜದ ನಿರ್ಮಾಣಕ್ಕೆ ಸಹಕಾರಿಯಾಗುತ್ತಾಳೆ. ಸ್ತ್ರೀಯರ ಆರೋಗ್ಯವೆಂದರೆ ಕೇವಲ ರೋಗರಹಿತ ಸ್ಥಿತಿಯಲ್ಲ, ದೈಹಿಕ, ಮಾನಸಿಕ, ಸಾಮಾಜಿಕ ಮತ್ತು ಸಂತಾನೋತ್ಪತ್ತಿ ಅವಳ ಆರೋಗ್ಯದ ಸಮಗ್ರ ಸ್ಥಿತಿಯಾಗಿದೆ.ಅವಳ ಜೀವನದ ಪ್ರತಿ ಹಂತದಲ್ಲೂ ನಾವು ಕಾಳಜಿ ಮಾಡಬೇಕಾಗುತ್ತದೆ.

ಸ್ತ್ರೀಯರ ಜೀವನದ ವಿವಿಧ ಹಂತಗಳಲ್ಲಿ ಆರೋಗ್ಯದ ಬಗ್ಗೆ ವಿಶೇಷ ಕಾಳಜಿ ವಹಿಸಬೇಕಾಗುತ್ತದೆ. ಅವುಗಳಲ್ಲಿ ಪ್ರಮುಖವಾಗಿ

ಬಾಲ್ಯಾವಸ್ಥೆಯ ಆರೋಗ್ಯ:ಬಾಲ್ಯದಿಂದಲೇ ಪೌಷ್ಟಿಕ ಆಹಾರ, ವೈಯಕ್ತಿಕ ಸ್ವಚ್ಛತೆ, ಲಸಿಕೆ, ಆಟೋಟ ಮತ್ತು ದೈಹಿಕ ಚಟುವಟಿಕೆಗಳಿಗೆ ಆದ್ಯತೆ ನೀಡಬೇಕು. ಹೆಣ್ಣುಮಕ್ಕಳಲ್ಲಿ ರಕ್ತಹೀನತೆ ತಡೆಗಟ್ಟಲು ಕಬ್ಬಿಣಾಂಶಯುಕ್ತ ಆಹಾರ ನೀಡುವುದು ಅತ್ಯಂತ ಮುಖ್ಯ.ಕಿಶೋರಾವಸ್ಥೆಯ ಆರೋಗ್ಯ:ಈ ಹಂತದಲ್ಲಿ ದೈಹಿಕ ಹಾಗೂ ಹಾರ್ಮೋನ್‌ಗಳ ಬದಲಾವಣೆಗಳು ಕಂಡುಬರುತ್ತವೆ. ಋತುಚಕ್ರದ ಬಗ್ಗೆ ಸರಿಯಾದ ಅರಿವು, ಮುಟ್ಟಿನ ಸಮಯದಲ್ಲಿ ವೈಯಕ್ತಿಕ ಸ್ವಚ್ಛತೆ, ಸಮತೋಲಿತ ಆಹಾರ ಮತ್ತು ಮಾನಸಿಕ ಆರೋಗ್ಯದ ಬಗ್ಗೆ ಶಿಕ್ಷಣ ನೀಡಬೇಕು. ಮುಟ್ಟಿನ ಕುರಿತು ಇರುವ ಮೂಢನಂಬಿಕೆಗಳನ್ನು ಹೋಗಲಾಡಿಸಬೇಕು.ಸಂತಾನೋತ್ಪತ್ತಿ ಮತ್ತು ಗರ್ಭಾವಸ್ಥೆಯ ಆರೋಗ್ಯ:ವಿವಾಹಪೂರ್ವ ಹಾಗೂ ಗರ್ಭಧಾರಣೆಯ ಪೂರ್ವ ಆರೋಗ್ಯ ತಪಾಸಣೆ, ಗರ್ಭಾವಸ್ಥೆಯಲ್ಲಿ ನಿಯಮಿತ ವೈದ್ಯಕೀಯ ತಪಾಸಣೆ, ಪೌಷ್ಟಿಕ ಆಹಾರ, ಕಬ್ಬಿಣಾಂಶ ಮತ್ತು ಫೋಲಿಕ್ ಆಮ್ಲದ ಪೂರೈಕೆ, ಸೂಕ್ತ ವಿಶ್ರಾಂತಿ ಹಾಗೂ ಸುರಕ್ಷಿತ ಹೆರಿಗೆಗೆ ಹೆಚ್ಚಿನ ಮಹತ್ವ ನೀಡಬೇಕು. ತಾಯಿ ಮತ್ತು ಮಗುವಿನ ಆರೋಗ್ಯ ಕಾಪಾಡುವುದು ಕುಟುಂಬದ ಜವಾಬ್ದಾರಿಯಾಗಿದೆ. ಋತುಬಂಧದ ಆರೋಗ್ಯ:ಸಾಮಾನ್ಯವಾಗಿ ಮಧ್ಯವಯಸ್ಸಿನಲ್ಲಿ ಋತುಬಂಧದ ಹಂತ ಎದುರಾಗುತ್ತದೆ. ಈ ಸಮಯದಲ್ಲಿ ಹಾರ್ಮೋನ್‌ಗಳ ಬದಲಾವಣೆಯಿಂದ ನಿದ್ರಾಹೀನತೆ, ಮೂಡ್ ಬದಲಾವಣೆ, ಬಿಸಿ ಅನುಭವ, ಮೂಳೆಗಳ ಸಾಂದ್ರತೆ ಕಡಿಮೆಯಾಗುವಂತಹ ಸಮಸ್ಯೆಗಳು ಕಾಣಿಸಿಕೊಳ್ಳಬಹುದು. ವೈದ್ಯರ ಸಲಹೆ, ಸೂಕ್ತ ವ್ಯಾಯಾಮ, ಕ್ಯಾಲ್ಸಿಯಂ ಮತ್ತು ವಿಟಮಿನ್ ಡಿ ಯುಕ್ತ ಆಹಾರ ಹಾಗೂ ಮಾನಸಿಕ ಬೆಂಬಲ ಅಗತ್ಯ.ಮಾನಸಿಕ ಆರೋಗ್ಯ:ಕುಟುಂಬ, ಉದ್ಯೋಗ, ಮಕ್ಕಳ ಪಾಲನೆ ಮತ್ತು ಸಾಮಾಜಿಕ ಜವಾಬ್ದಾರಿಗಳ ನಡುವೆ ಸ್ತ್ರೀಯರು ಅನೇಕ ಬಾರಿ ಒತ್ತಡಕ್ಕೆ ಒಳಗಾಗುತ್ತಾರೆ. ಆದ್ದರಿಂದ ಅವರಿಗೆ ವಿಶ್ರಾಂತಿ, ಸ್ವಂತ ಸಮಯ, ಕುಟುಂಬದ ಸಹಕಾರ ಮತ್ತು ಭಾವನಾತ್ಮಕ ಬೆಂಬಲ ದೊರೆಯಬೇಕು. ಖಿನ್ನತೆ, ಆತಂಕ ಮತ್ತು ನಿರಂತರ ಮಾನಸಿಕ ಒತ್ತಡವನ್ನು ನಿರ್ಲಕ್ಷಿಸಬಾರದು.ಸ್ತ್ರೀಯರ ಆರೋಗ್ಯಕ್ಕಾಗಿ ಅನುಸರಿಸಬೇಕಾದ ಕ್ರಮಗಳು : ಪೌಷ್ಟಿಕಾಂಶಯುಕ್ತ ಸಮತೋಲಿತ ಆಹಾರ ಸೇವಿಸಬೇಕು. ಹಸಿರು ಸೊಪ್ಪು, ತರಕಾರಿ, ಹಣ್ಣು, ಬೇಳೆಕಾಳು ಮತ್ತು ಪ್ರೋಟೀನ್‌ಯುಕ್ತ ಆಹಾರಕ್ಕೆ ಆದ್ಯತೆ ನೀಡಬೇಕು. ಪ್ರತಿದಿನ ಕನಿಷ್ಠ 30 ನಿಮಿಷಗಳ ಕಾಲ ದೈಹಿಕ ಚಟುವಟಿಕೆ ಅಥವಾ ವ್ಯಾಯಾಮ ಮಾಡಬೇಕು. ಸಾಕಷ್ಟು ನಿದ್ರೆ ಮತ್ತು ವಿಶ್ರಾಂತಿ ಪಡೆಯಬೇಕು. ರಕ್ತದೊತ್ತಡ, ರಕ್ತದಲ್ಲಿನ ಸಕ್ಕರೆ, ಹಿಮೋಗ್ಲೋಬಿನ್ ಮುಂತಾದವುಗಳನ್ನು ಅಗತ್ಯಕ್ಕೆ ಅನುಗುಣವಾಗಿ ಪರೀಕ್ಷಿಸಿಕೊಳ್ಳಬೇಕು. ವೈದ್ಯರ ಸಲಹೆಯಂತೆ ಸ್ತನ ಮತ್ತು ಗರ್ಭಕಂಠದ ಕ್ಯಾನ್ಸರ್ ತಪಾಸಣೆ ಮಾಡಿಸಿಕೊಳ್ಳಬೇಕು. ವೈಯಕ್ತಿಕ ಸ್ವಚ್ಛತೆ ಮತ್ತು ಋತುಚಕ್ರದ ಸ್ವಚ್ಛತೆಯನ್ನು ಕಾಪಾಡಿಕೊಳ್ಳಬೇಕು. ಆರೋಗ್ಯ ಸಮಸ್ಯೆಗಳನ್ನು ಮುಚ್ಚಿಡದೆ ಸೂಕ್ತ ಸಮಯದಲ್ಲಿ ವೈದ್ಯಕೀಯ ಸಲಹೆ ಪಡೆಯಬೇಕು.

ಕುಟುಂಬ ನಿರ್ವಹಣೆಯಲ್ಲಿ ಸ್ತ್ರೀಯರ ಪಾತ್ರ : ಕುಟುಂಬವೆಂಬುದು ಪ್ರೀತಿ, ವಿಶ್ವಾಸ, ಸಹಕಾರ ಮತ್ತು ಪರಸ್ಪರ ಗೌರವದ ಮೇಲೆ ನಿರ್ಮಾಣವಾಗುವ ಒಂದು ಸುಂದರ ವ್ಯವಸ್ಥೆ. ಈ ವ್ಯವಸ್ಥೆಯಲ್ಲಿ ಸ್ತ್ರೀಯರ ಪಾತ್ರ ಬಹಳ ಮಹತ್ವದ್ದಾಗಿದೆ.

ಮಕ್ಕಳ ಪಾಲನೆ ಮತ್ತು ಸಂಸ್ಕಾರ:ಮಕ್ಕಳಿಗೆ ಉತ್ತಮ ಶಿಕ್ಷಣ, ನೈತಿಕ ಮೌಲ್ಯಗಳು, ಶಿಸ್ತು, ಸ್ವಚ್ಛತೆ, ಆರೋಗ್ಯಕರ ಜೀವನಶೈಲಿ ಮತ್ತು ಮಾನವೀಯ ಗುಣಗಳನ್ನು ಬೆಳೆಸುವಲ್ಲಿ ತಾಯಿಯ ಪಾತ್ರ ಪ್ರಮುಖವಾಗಿದೆ. ಆದರೆ ಮಕ್ಕಳ ಪಾಲನೆ ತಂದೆ–ತಾಯಿ ಇಬ್ಬರ ಸಮಾನ ಜವಾಬ್ದಾರಿಯಾಗಿದೆ.

ಕುಟುಂಬದ ಆರೋಗ್ಯ ಸಂರಕ್ಷಣೆ:ಕುಟುಂಬದ ಸದಸ್ಯರ ಆಹಾರ ಪದ್ಧತಿ, ವೈಯಕ್ತಿಕ ಸ್ವಚ್ಛತೆ, ಆರೋಗ್ಯಕರ ಜೀವನಶೈಲಿ ಮತ್ತು ಆರೋಗ್ಯದ ಬಗ್ಗೆ ಜಾಗೃತಿ ಮೂಡಿಸುವಲ್ಲಿ ಸ್ತ್ರೀಯರು ಪ್ರಮುಖ ಪಾತ್ರ ವಹಿಸುತ್ತಾರೆ.ಆರ್ಥಿಕ ನಿರ್ವಹಣೆ:ಕುಟುಂಬದ ಆದಾಯ ಮತ್ತು ಖರ್ಚುಗಳನ್ನು ಸಮರ್ಪಕವಾಗಿ ನಿರ್ವಹಿಸುವುದು, ಉಳಿತಾಯದ ಮಹತ್ವ ತಿಳಿಸುವುದು ಹಾಗೂ ಆರ್ಥಿಕ ಯೋಜನೆಯಲ್ಲಿ ಪಾಲ್ಗೊಳ್ಳುವುದು ಕುಟುಂಬದ ಪ್ರಗತಿಗೆ ಸಹಕಾರಿಯಾಗಿದೆ. ಕುಟುಂಬದಲ್ಲಿ ಭಾವನಾತ್ಮಕ ಸಂಬಂಧಗಳ ನಿರ್ವಹಣೆ:ಕುಟುಂಬದ ಸದಸ್ಯರ ನಡುವೆ ಪ್ರೀತಿ, ವಿಶ್ವಾಸ, ಸಹನೆ ಮತ್ತು ಪರಸ್ಪರ ಗೌರವವನ್ನು ಬೆಳೆಸುವಲ್ಲಿ ಸ್ತ್ರೀಯರ ಕೊಡುಗೆ ಗಮನಾರ್ಹವಾಗಿದೆ. ಸಮಸ್ಯೆಗಳ ಸಂದರ್ಭದಲ್ಲಿ ಧೈರ್ಯ ತುಂಬಿ, ಕುಟುಂಬದ ಸದಸ್ಯರಿಗೆ ಮಾನಸಿಕ ಬೆಂಬಲ ನೀಡುತ್ತಾರೆ.ಸಾಮಾಜಿಕ ಜವಾಬ್ದಾರಿ: ಮನೆಯ ನಿರ್ವಹಣೆಯ ಜೊತೆಗೆ ಸಮಾಜದ ಅಭಿವೃದ್ಧಿ, ಪರಿಸರ ಸಂರಕ್ಷಣೆ, ಆರೋಗ್ಯ ಜಾಗೃತಿ, ಶಿಕ್ಷಣ ಮತ್ತು ಮಹಿಳಾ ಸಬಲೀಕರಣದಂತಹ ಚಟುವಟಿಕೆಗಳಲ್ಲಿಯೂ ಸ್ತ್ರೀಯರು ಸಕ್ರಿಯವಾಗಿ ಭಾಗವಹಿಸುತ್ತಾರೆ.

ಆದರೆ ಕುಟುಂಬ ನಿರ್ವಹಣೆ ಸ್ತ್ರೀಯೊಬ್ಬಳ ಜವಾಬ್ದಾರಿಯಷ್ಟೇ ಅಲ್ಲ. ಮನೆಯ ಕೆಲಸಗಳು, ಮಕ್ಕಳ ಪಾಲನೆ, ಹಿರಿಯರ ಆರೈಕೆ ಮತ್ತು ಆರ್ಥಿಕ ನಿರ್ಧಾರಗಳಲ್ಲಿ ಪುರುಷರು ಹಾಗೂ ಇತರ ಕುಟುಂಬ ಸದಸ್ಯರೂ ಸಮಾನವಾಗಿ ಪಾಲ್ಗೊಳ್ಳಬೇಕು.ಆಯುರ್ವೇದದ ದೃಷ್ಟಿಯಲ್ಲಿ ಸ್ತ್ರೀಯರ ಆರೋಗ್ಯ : ಆಯುರ್ವೇದವು ಸ್ತ್ರೀಯರ ಆರೋಗ್ಯ ಸಂರಕ್ಷಣೆಗೆ ವಿಶೇಷ ಮಹತ್ವ ನೀಡಿದೆ. ಸ್ತ್ರೀಯರ ಆರೋಗ್ಯವನ್ನು ಕಾಪಾಡಲು ಆಹಾರ, ವಿಹಾರ, ಆಚಾರ ಮತ್ತು ವಿಚಾರಗಳ ಸಮತೋಲನ ಅಗತ್ಯವೆಂದು ತಿಳಿಸುತ್ತದೆ.ದಿನಚರ್ಯೆ, ಋತುಚರ್ಯೆ, ಸಮತೋಲಿತ ಆಹಾರ, ಯೋಗ, ಪ್ರಾಣಾಯಾಮ ಮತ್ತು ಸೂಕ್ತ ನಿದ್ರೆಯು ಆರೋಗ್ಯ ಕಾಪಾಡಲು ಸಹಕಾರಿಯಾಗಿವೆ. ಸ್ತ್ರೀಯರ ಜೀವನದ ವಿವಿಧ ಹಂತಗಳಲ್ಲಿ ಕಂಡುಬರುವ ಆರೋಗ್ಯ ಸಮಸ್ಯೆಗಳಿಗೆ ಅವರ ಪ್ರಕೃತಿ, ವಯಸ್ಸು ಮತ್ತು ದೈಹಿಕ ಸ್ಥಿತಿಗೆ ಅನುಗುಣವಾಗಿ ಸೂಕ್ತ ವೈದ್ಯಕೀಯ ಸಲಹೆ ಪಡೆಯಬೇಕು.ಆಯುರ್ವೇದದ ಆರೋಗ್ಯದ ಪರಿಕಲ್ಪನೆಯಾದ ಸಮದೋಷ, ಸಮಾಗ್ನಿ, ಸಮಧಾತು, ಮಲಕ್ರಿಯೆ ಹಾಗೂ ಪ್ರಸನ್ನ ಆತ್ಮ, ಇಂದ್ರಿಯ ಮತ್ತು ಮನಸ್ಸಿನ ಸ್ಥಿತಿಯು ಸಮಗ್ರ ಆರೋಗ್ಯದ ಮಹತ್ವವನ್ನು ಸಾರುತ್ತದೆ.


ಸ್ತ್ರೀ ಸಬಲೀಕರಣ ಮತ್ತು ಆರೋಗ್ಯಕರ ಸಮಾಜ : ಸ್ತ್ರೀಯರ ಆರೋಗ್ಯದ ಜೊತೆಗೆ ಶಿಕ್ಷಣ, ಆರ್ಥಿಕ ಸ್ವಾವಲಂಬನೆ, ಸಾಮಾಜಿಕ ಭದ್ರತೆ ಮತ್ತು ನಿರ್ಧಾರ ತೆಗೆದುಕೊಳ್ಳುವ ಸ್ವಾತಂತ್ರ್ಯಕ್ಕೂ ಮಹತ್ವ ನೀಡಬೇಕು. ಆರೋಗ್ಯವಂತ ಮತ್ತು ಸ್ವಾವಲಂಬಿ ಸ್ತ್ರೀಯರು ಕುಟುಂಬದ ಅಭಿವೃದ್ಧಿಗೆ ಮಾತ್ರವಲ್ಲದೆ ದೇಶದ ಪ್ರಗತಿಗೂ ಮಹತ್ವದ ಕೊಡುಗೆ ನೀಡುತ್ತಾರೆ.

ಸ್ತ್ರೀಯರನ್ನು ಗೌರವಿಸುವುದು ಎಂದರೆ ಕೇವಲ ಒಂದು ದಿನ ಆಚರಣೆ ಮಾಡುವುದಲ್ಲ; ಅವರ ಆರೋಗ್ಯ, ಅಭಿಪ್ರಾಯ, ಕನಸುಗಳು ಮತ್ತು ಹಕ್ಕುಗಳಿಗೆ ಪ್ರತಿದಿನ ಗೌರವ ನೀಡುವುದಾಗಿದೆ.

ಸ್ತ್ರೀ ಕುಟುಂಬದ ಬೆಳಕು, ಸಮಾಜದ ಶಕ್ತಿ ಮತ್ತು ರಾಷ್ಟ್ರದ ಅಭಿವೃದ್ಧಿಯ ಪ್ರಮುಖ ಆಧಾರ. ಆಕೆಯ ಆರೋಗ್ಯವನ್ನು ನಿರ್ಲಕ್ಷಿಸಿ ಆರೋಗ್ಯವಂತ ಕುಟುಂಬ ಮತ್ತು ಸಮೃದ್ಧ ಸಮಾಜವನ್ನು ನಿರ್ಮಿಸಲು ಸಾಧ್ಯವಿಲ್ಲ. ಆದ್ದರಿಂದ ಸ್ತ್ರೀಯರ ಆರೋಗ್ಯಕ್ಕೆ ಆದ್ಯತೆ ನೀಡುವುದು, ಅವರಿಗೆ ಸಮಾನ ಅವಕಾಶಗಳನ್ನು ಕಲ್ಪಿಸುವುದು, ಕುಟುಂಬದಲ್ಲಿ ಜವಾಬ್ದಾರಿಗಳನ್ನು ಹಂಚಿಕೊಳ್ಳುವುದು ಹಾಗೂ ಅವರ ಸಾಧನೆಗಳನ್ನು ಗೌರವಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ.“ಸ್ತ್ರೀ ಆರೋಗ್ಯವಂತಳಾದರೆ ಕುಟುಂಬ ಆರೋಗ್ಯವಂತವಾಗುತ್ತದೆ; ಕುಟುಂಬ ಆರೋಗ್ಯವಂತವಾದರೆ ಸಮಾಜ ಆರೋಗ್ಯವಂತವಾಗುತ್ತದೆ; ಸಮಾಜ ಆರೋಗ್ಯವಂತವಾದರೆ ರಾಷ್ಟ್ರ ಸಮೃದ್ಧವಾಗುತ್ತದೆ.”

ಆದ್ದರಿಂದ ಪ್ರತಿಯೊಬ್ಬ ಸ್ತ್ರೀಯೂ ತನ್ನ ಆರೋಗ್ಯದ ಬಗ್ಗೆ ಕಾಳಜಿ ವಹಿಸಲಿ, ಕುಟುಂಬವೂ ಆಕೆಯ ಆರೋಗ್ಯದ ಬಗ್ಗೆ ಕಾಳಜಿ ವಹಿಸಲಿ ಎಂಬುದು ಇಂದಿನ ಸಮಾಜದ ಆಶಯವಾಗಬೇಕು.

“”ಸ್ತ್ರೀ ಸಮಾಜದ ಕಣ್ಣು ಅವಳ ರಕ್ಷಣೆ ನಮ್ಮೆಲ್ಲರ ಜವಾಬ್ದಾರಿ””



ಲೇಖಕರು ಡಾ. ಸುವರ್ಣ ನಿಡಗುಂದಿ.
ಡಿಜಿಎಂ ಆರ್ಯುವೇದ ಕಾಲೇಜು
ಗದಗ

ಈ ಆರೋಗ್ಯಕರ ಆಹಾರಗಳಿಂದ ಹೃದಯದ ಆಯುಸ್ಸು ಹೆಚ್ಚಿಸಲು ಸಾಧ್ಯ: ವೈದ್ಯರ ಸಲಹೆ



ಹೃದಯ ಸಂಬಂಧಿ ಕಾಯಿಲೆಗಳು ಜಾಗತಿಕವಾಗಿ ಗಂಭೀರ ಆರೋಗ್ಯ ಸಮಸ್ಯೆಯಾಗಿ ಪರಿಣಮಿಸಿವೆ. ಮಕ್ಕಳು ಹಾಗೂ ಯುವಜನರನ್ನೂ ಹೃದ್ರೋಗಗಳು ಕಾಡುತ್ತಿವೆ. ಅಧಿಕ ರಕ್ತದೊತ್ತಡ, ಹೈ ಕೊಲೆಸ್ಟಾಲ್ ಮತ್ತು ಹೃದಯಕ್ಕೆ ಸಂಬಂಧಿಸಿದ ಕಾಯಿಲೆಗಳು ಹೆಚ್ಚಾಗಿ ಕಂಡುಬರುತ್ತಿವೆ. ಇತ್ತೀಚಿನ ಸಂಶೋಧನೆಗಳು ಪ್ರಕಾರ, ಕಳಪೆ ಆಹಾರ ಪದ್ಧತಿ ಮಾತ್ರವಲ್ಲದೇ, ಮಾನಸಿಕ ಒತ್ತಡ, ದೈಹಿಕ ವ್ಯಾಯಾಮದ ಕೊರತೆ ಹಾಗೂ ಅನಾರೋಗ್ಯಕರ ಜೀವನಶೈಲಿಯ ಪರಿಣಾಮ ಅಪಾಯ ಮತ್ತಷ್ಟು ಗಮನಾರ್ಹವಾಗಿ ಹೆಚ್ಚಿಸಿವೆ.

ಕಾರ್ಡಿಯಾಲಜಿಸ್ಟ್ ತಿಳಿಸುವ ಪ್ರಕಾರ, ಔಷಧ ಹಾಗೂ ವ್ಯಾಯಾಮದ ಜೊತೆಗೆ ದೈನಂದಿನ ಆಹಾರ ಪದ್ಧತಿಯ ಕಡೆಗೆ ವಿಶೇಷ ಗಮನಹರಿಸುವುದು ಆರೋಗ್ಯಕರ ಹೃದಯಕ್ಕೆ ಅತ್ಯಗತ್ಯವಾಗಿದೆ. ಎಣ್ಣೆಯಲ್ಲಿ ಕರಿದ ಪದಾರ್ಥಗಳು, ಸಂಸ್ಕರಿಸಿದ ಆಹಾರಗಳನ್ನು ಅತಿಯಾಗಿ ಸೇವಿಸುವುದರಿಂದ ರಕ್ತದೊತ್ತಡ, ಕೊಲೆಸ್ಟಾಲ್ ಮಟ್ಟದ ಮೇಲೆ ನಕಾರಾತ್ಮಕ ಪರಿಣಾಮ ಬೀರಬಹುದು. ಸಸ್ಯ ಆಧಾರಿತ ಆಹಾರಗಳಲ್ಲಿ ಕಂಡುಬರುವ ನಾರಿನಂಶ, ಆರೋಗ್ಯಕರ ಕೊಬ್ಬುಗಳು ಹಾಗೂ – ಆಕ್ಸಿಡೆಂಟ್‌ಗಳು ಹೃದಯದ ಆರೋಗ್ಯ ಕಾಪಾಡಲು ತುಂಬಾ ಸಹಾಯ ಮಾಡುತ್ತವೆ ಎಂದು ಹಲವು ಅಧ್ಯಯನಗಳು ತಿಳಿಸುತ್ತವೆ. ಹೃದಯವನ್ನು ದೀರ್ಘಕಾಲದವರೆಗೆ ಆರೋಗ್ಯಕರವಾಗಿ ಹಾಗೂ ಯೌವನಯುತವಾಗಿ ಆಯ್ಕೆ ಮಾಡಿಕೊಳ್ಳಲು ನಿಮ್ಮ ದೈನಂದಿನ ಆಹಾರ ಕ್ರಮದಲ್ಲಿ ಯಾವೆಲ್ಲ ಪದಾರ್ಥಗಳನ್ನು ಸೇರಿಸಿಕೊಳ್ಳಬೇಕು ಅರಿತುಕೊಳ್ಳೋಣ.

ವೈದ್ಯರು ತಿಳಿಸುವ ಪ್ರಕಾರ, ಹೃದಯದ ಆರೋಗ್ಯಕ್ಕಾಗಿ ದೈನಂದಿನ ಆಹಾರ ಪದ್ಧತಿಯಲ್ಲಿ ಸುಧಾರಣೆ ತರುವುದು ತುಂಬಾ ಅವಶ್ಯವಾಗಿದೆ. ಕೆಲವು ಸಸ್ಯ ಆಧಾರಿತ ಆಹಾರಗಳು ಹೃದಯವನ್ನು ಆರೋಗ್ಯಕರವಾಗಿಡಲು, ಅಪಧಮನಿಗಳನ್ನು ಉತ್ತಮ ಸ್ಥಿತಿಯಲ್ಲಿಡಲು ಸಹಾಯ ಮಾಡುತ್ತವೆ.

ಪ್ರತಿಯೊಬ್ಬರೂ ಇವುಗಳನ್ನು ತಮ್ಮ ದೈನಂದಿನ ಆಹಾರದಲ್ಲಿ ಸೇರಿಸಿಕೊಳ್ಳುವ ಕುರಿತು ಬಗ್ಗೆ ಯೋಚಿಸಬೇಕಾಗುತ್ತದೆ.ನಟ್ಸ್, ವಿವಿಧ ಕಾಳುಗಳು ಒಳ್ಳೆಯದು: ಬಾದಾಮಿ, ವಾಲ್‌ನಟ್‌ಗಳಂತಹ ಬೀಜಗಳು, ಅಗಸೆ ಬೀಜಗಳು ಹಾಗೂ ಚಿಯಾ ಬೀಜಗಳಂತಹ ಪೋಷಕಾಂಶಗಳ ಅತ್ಯುತ್ತಮ ಮೂಲಗಳಾಗಿವೆ. ಇವುಗಳಲ್ಲಿ ಆರೋಗ್ಯಕರ ಕೊಬ್ಬುಗಳು, ನಾರಿನಂಶ, ಒಮೆಗಾ –3 ಕೊಬ್ಬಿನಾಮ್ಲಗಳು ಸಮೃದ್ಧವಾಗಿವೆ. ಈ ಪೋಷಕಾಂಶಗಳು ಕೆಟ್ಟ ಕೊಲೆಸ್ಟಾಲ್ ಮಟ್ಟವನ್ನು ನಿಯಂತ್ರಣದಲ್ಲಿಡಲು ಹೆಚ್ಚು ಸಹಾಯ ಮಾಡುತ್ತದೆ.

ಹೃದಯ ಕಾಯಿಲೆಯ ಅಪಾಯ ಕಡಿಮೆ ಮಾಡುತ್ತವೆ. ವಾಲ್‌ನಟ್‌ಗಳಲ್ಲಿ ಕಂಡುಬರುವ ಪಾಲಿಅನ್‌ಸ್ಯಾಚುರೇಟೆಡ್ ಕೊಬ್ಬುಗಳು, ಒಮೆಗಾ–3 ಕೊಬ್ಬಿನಾಮ್ಲಗಳು ಹೃದಯಕ್ಕೆ ಅತ್ಯಂತ ಪ್ರಯೋಜನಕಾರಿಯಾಗಿದೆ. ಇವುಗಳನ್ನು ಮಿತ ಪ್ರಮಾಣದಲ್ಲಿ ಸೇವಿಸುವುದರಿಂದ ರಕ್ತದೊತ್ತಡ, ಕೊಲೆಸ್ಟಾಲ್ ಮಟ್ಟವನ್ನು ನಿಯಂತ್ರಣದಲ್ಲಿಡಲು ಸಾಧ್ಯವಾಗುತ್ತದೆ ಎಂದು ವೈದ್ಯರು ತಿಳಿಸುತ್ತಾರೆ.

ಸಮೃದ್ಧವಾಗಿವೆ. ಈ ಪೋಷಕಾಂಶಗಳು ಕೆಟ್ಟ ಕೊಲೆಸ್ಟಾಲ್ ಮಟ್ಟವನ್ನು ನಿಯಂತ್ರಣದಲ್ಲಿಡಲು ಹೆಚ್ಚು ಸಹಾಯ ಮಾಡುತ್ತದೆ. ಹೃದಯ ಕಾಯಿಲೆಯ ಅಪಾಯ ಕಡಿಮೆ ಮಾಡುತ್ತವೆ. ವಾಲ್‌ನಟ್‌ಗಳಲ್ಲಿ ಕಂಡುಬರುವ ಪಾಲಿಅನ್‌ಸ್ಯಾಚುರೇಟೆಡ್ ಕೊಬ್ಬುಗಳು, ಒಮೆಗಾ–3 ಕೊಬ್ಬಿನಾಮ್ಲಗಳು ಹೃದಯಕ್ಕೆ ಅತ್ಯಂತ ಪ್ರಯೋಜನಕಾರಿಯಾಗಿದೆ. ಇವುಗಳನ್ನು ಮಿತ ಪ್ರಮಾಣದಲ್ಲಿ ಸೇವಿಸುವುದರಿಂದ ರಕ್ತದೊತ್ತಡ, ಕೊಲೆಸ್ಟಾಲ್ ಮಟ್ಟವನ್ನು ನಿಯಂತ್ರಣದಲ್ಲಿಡಲು ಸಾಧ್ಯವಾಗುತ್ತದೆ ಎಂದು ವೈದ್ಯರು ತಿಳಿಸುತ್ತಾರೆ. ಸಮೃದ್ಧವಾಗಿವೆ. ಈ ಪೋಷಕಾಂಶಗಳು ಕೆಟ್ಟ ಕೊಲೆಸ್ಟಾಲ್ ಮಟ್ಟವನ್ನು ನಿಯಂತ್ರಣದಲ್ಲಿಡಲು ಹೆಚ್ಚು ಸಹಾಯ ಮಾಡುತ್ತದೆ. ಹೃದಯ ಕಾಯಿಲೆಯ ಅಪಾಯ ಕಡಿಮೆ ಮಾಡುತ್ತವೆ. ವಾಲ್‌ನಟ್‌ಗಳಲ್ಲಿ ಕಂಡುಬರುವ ಪಾಲಿ

2028ಕ್ಕೆ ಮತ್ತೆ ಜನರ ಸೇವೆಗೆ ಬರುತ್ತೇನೆ: ಯಾಸೀರ್‌ಖಾನ್ ಪಠಾಣ್

ಕ್ಷೇತ್ರದ ಅಭಿವೃದ್ಧಿಗೆ 300 ಕೋಟಿ ವಿಶೇಷ ಅನುದಾನ; 239 ಕುಟುಂಬಗಳಿಗೆ ಹಕ್ಕುಪತ್ರ ವಿತರಣೆ

ಪಾಂಡವ ನ್ಯೂಸ್, ಶಿಗ್ಗಾವಿ : ಕ್ಷೇತ್ರದಲ್ಲಿ ಈ ಹಿಂದೆ ಹಲವು ಪ್ರಭಾವಿ ನಾಯಕರು ಅಧಿಕಾರ ಅನುಭವಿಸಿದ್ದರೂ ನಿರೀಕ್ಷಿತ ಅಭಿವೃದ್ಧಿ ಸಾಧ್ಯವಾಗಿಲ್ಲ ಎಂಬ ನೋವನ್ನು ಬಸವೇಶ್ವರ ಸಮಿತಿ ಸದಸ್ಯರು ವ್ಯಕ್ತಪಡಿಸಿದ್ದಾರೆ. ಈ ಭಾಗದ ಅಭಿವೃದ್ಧಿಗೆ ಸುಮಾರು 4 ಕೋಟಿ ಅನುದಾನ ನೀಡಿದ್ದೇನೆ ಎಂದು ಶಾಸಕ ಯಾಸೀರ್‌ಖಾನ್ ಪಠಾಣ್ ಹೇಳಿದರು.

ತಾಲೂಕಿನ ಕುಂದೂರು ಗ್ರಾಮದಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿ, ಫಲಾನುಭವಿಗಳಿಗೆ ಹಕ್ಕುಪತ್ರ ವಿತರಿಸಿ ಮಾತನಾಡಿದ ಅವರು, ನನ್ನ ಕನಸಿನ ಯೋಜನೆಯಡಿ ಇಂದು 239 ಕುಟುಂಬಗಳಿಗೆ ಹಕ್ಕುಪತ್ರ ವಿತರಿಸಲಾಗುತ್ತಿದೆ. ತಾಲೂಕಿನಲ್ಲಿ ಸುಮಾರು 20 ಸಾವಿರ ಕುಟುಂಬಗಳ ಹೆಸರು ಸರ್ಕಾರದ ದಾಖಲೆಗಳಲ್ಲಿದ್ದರೂ ಹಕ್ಕುಪತ್ರ ದೊರೆತಿರಲಿಲ್ಲ. ಕಳೆದ ಒಂದು ವರ್ಷದಲ್ಲಿ 8 ಸಾವಿರ ಕುಟುಂಬಗಳಿಗೆ ಹಕ್ಕುಪತ್ರ ವಿತರಿಸಲಾಗಿದೆ. ಉಳಿದ 12 ಸಾವಿರ ಕುಟುಂಬಗಳಿಗೂ ಅಧಿಕಾರಾವಧಿಯಲ್ಲಿ ಹಕ್ಕುಪತ್ರ ವಿತರಿಸುವ ಗುರಿ ಹೊಂದಿದ್ದೇನೆ. ನನ್ನ ಕೆಲಸಕ್ಕೆ ಜನರ ಆಶೀರ್ವಾದ ಪಡೆಯಲು 2028ರಲ್ಲಿ ಮತ್ತೆ ಬರುತ್ತೇನೆ ಎಂದರು.ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಯಲ್ಲಿ



ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿಗಳನ್ನು ಗೆಲ್ಲಿಸುವ ಮೂಲಕ ಪಕ್ಷದ ಬಲವರ್ಧನೆಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳು ಕ್ಷೇತ್ರದ ಅಭಿವೃದ್ಧಿಗೆ ವಿಶೇಷ ಆದ್ಯತೆ ನೀಡಿದ್ದಾರೆ. ಕ್ಷೇತ್ರದ 37 ಗ್ರಾಮ ಪಂಚಾಯಿತಿಗಳಿಗೆ ತಲಾ ₹1 ಕೋಟಿ ಅನುದಾನ ನೀಡಲಾಗಿದೆ. ಗ್ರಾಮೀಣಾಭಿವೃದ್ಧಿಗೆ 100 ಕೋಟಿ, ಲೋಕೋಪಯೋಗಿ ಇಲಾಖೆಗೆ 100 ಕೋಟಿ ಹಾಗೂ ಪಟ್ಟಣಗಳ ಅಭಿವೃದ್ಧಿಗೆ 100 ಕೋಟಿ ಸೇರಿದಂತೆ ಒಟ್ಟು 300 ಕೋಟಿ ವಿಶೇಷ ಅನುದಾನ ದೊರೆತಿದೆ ಎಂದು ತಿಳಿಸಿದರು.

ವನಹಳ್ಳಿಯಲ್ಲಿ 25 ಲಕ್ಷ ವೆಚ್ಚದಲ್ಲಿ ಸಿಸಿ ರಸ್ತೆ, ಗಟಾರ್ ನಿರ್ಮಾಣಕ್ಕೆ ಹಾಗೂ ಕಾಮನಹಳ್ಳಿಯಲ್ಲಿ 10 ಲಕ್ಷ ವೆಚ್ಚದಲ್ಲಿ ವಿಠ್ಠಲ ರುಕ್ಮಿಣಿ ದೇವಸ್ಥಾನದ ಅಭಿವೃದ್ಧಿಗೆ ಭೂಮಿಪೂಜೆ ನೆರವೇರಿಸಲಾಯಿತು. ಗೋಟಗೋಂಡಿಯಲ್ಲಿ 30 ಲಕ್ಷ, ಬಿಸೆಟ್ಟಿಕೊಪ್ಪದಲ್ಲಿ 20 ಲಕ್ಷ ಹಾಗೂ ಕೃಷಿನಗರದಲ್ಲಿ 15 ಲಕ್ಷ ವೆಚ್ಚದ ರಸ್ತೆ ಮತ್ತು ಗಟಾರ್ ಕಾಮಗಾರಿಗಳಿಗೆ ಚಾಲನೆ ನೀಡಲಾಯಿತು. ಕುಂದೂರಿನಲ್ಲಿ 262 ಲಕ್ಷ ವೆಚ್ಚದ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಿ, 239 ಕುಟುಂಬಗಳಿಗೆ ಹಕ್ಕುಪತ್ರ ವಿತರಿಸಲಾಯಿತು.

ವನಹಳ್ಳಿಯಲ್ಲಿ 83 ಫಲಾನುಭವಿಗಳಿಗೂ ಹಕ್ಕುಪತ್ರ ನೀಡಲಾಯಿತು.

ಕಾರ್ಯಕ್ರಮದಲ್ಲಿ ಗುಡ್ಡಪ್ಪ ಜಲದಿ, ಎಸ್.ಎಫ್. ಮಣ–ಕಟ್ಟಿ, ಸುಭಾಷ್ ಬಸರಿ ಕಟ್ಟೆ, ಗೋವಿಂದಪ್ಪ ತೊಂಡೂರು, ನೀಲಪ್ಪ ಬಡಿಗೇರ, ಶ್ರೀಕಾಂತ ನೆಲ್ಲಿಕೊಪ್ಪ, ದೇವೇಂದ್ರ ಶೋಕಪ್ಪನವರ, ಆನಂದ ಲಮಾಣಿ, ಯಲ್ಲಪ್ಪ ತಳವಾರ, ಮಾರುತಿ ಮೈಲಾರಿ, ಭೀಮಣ್ಣ ಹರಿಜನ, ಹನುಮಂತಪ್ಪ ವಾಲಿಕಾರ ಸೇರಿದಂತೆ ವಿವಿಧ ಗ್ರಾಮಗಳ ಮುಖಂಡರು ಉಪಸ್ಥಿತರಿದ್ದರು.

ಗ್ಯಾರಂಟಿ ಜಾರಿಯೇ ಸಾಧನೆ ಎಂದು ಬೀಗುವುದು ಕಾಂಗ್ರೆಸ್ ವೈಫಲ್ಯ: ವಿರೂಪಾಕ್ಷಪ್ಪ ಬಳ್ಳಾರಿ



ಪಾಂಡವ ನ್ಯೂಸ್, ಬ್ಯಾಡಗಿ : ಗ್ಯಾರಂಟಿ ಯೋಜನೆಗಳನ್ನು ಜಾ–ರಿಗೊಳಿಸಿರುವುದೇ ರಾಜ್ಯದ ದೊಡ್ಡ ಸಾಧನೆ ಎಂದು ಕಾಂಗ್ರೆಸ್ ನಾಯಕರು ಬೀಗುತ್ತಿದ್ದಾರೆ. ಆದರೆ ಇದರಿಂದ ಅಭಿವೃದ್ಧಿಯ ಪರ್ವವೇ ಸ್ಥಗಿತಗೊಂಡಿದೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ಹಾಗೂ ಮಾಜಿ ಶಾಸಕ ವಿರೂಪಾಕ್ಷಪ್ಪ ಬಳ್ಳಾರಿ ಆರೋಪಿಸಿದರು.

ಪಟ್ಟಣದ ಹಳೆ ಪುರಸಭೆ ಎದುರು ತಾಲೂಕು ಬಿಜೆಪಿ ಘಟಕದ ವತಿಯಿಂದ ಕಾಂಗ್ರೆಸ್ ಸರ್ಕಾರದ ಆಡಳಿತ ವೈಫಲ್ಯ ಖಂಡಿಸಿ ಹಮ್ಮಿಕೊಂಡಿದ್ದ ಪ್ರತಿಭಟನೆಗೆ ನೇತೃತ್ವ ವಹಿಸಿ ಅವರು ಮಾತನಾಡಿದರು.

ಹಾವೇರಿ ಜಿಲ್ಲೆಯಲ್ಲಿ ಭೀಕರ ಬರಗಾಲದಿಂದ ರೈತರು ಹಾಗೂ ಜನಸಾಮಾನ್ಯರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಬೆಳೆ ಪರಿಹಾರ ಮತ್ತು ವಿಮೆ ಪರಿಹಾರ ಇನ್ನೂ ಸಮರ್ಪಕವಾಗಿ ಕೈ ಸೇರಿಲ್ಲ. ನೀರಾವರಿ ಯೋಜನೆಗಳ ಅನುಷ್ಠಾನದಲ್ಲಿ ವಿಳಂಬವಾಗಿರುವುದರಿಂದ ಕೆರೆಕಟ್ಟೆಗಳು ಖಾಲಿಯಾಗಿವೆ. ಅಧಿಕಾರಿಗಳು ಹಾಗೂ ಎಂಜಿನಿಯರ್‌ಗಳ ಮೇಲೆ ಸರ್ಕಾರದ ನಿಯಂತ್ರಣ ಇಲ್ಲದಂತಾಗಿದೆ. ಅಭಿವೃದ್ಧಿ ಕಾಮಗಾರಿಗಳು ಸ್ಥಗಿತಗೊಂಡಿದ್ದು, ರಾಜ್ಯದಲ್ಲಿ ಭ್ರಷ್ಟಾಚಾರ ತಾಂಡವವಾಡುತ್ತಿದೆ ಎಂದು ದೂರಿದರು.

ಕಳೆದ ಮೂರೂವರೆ ವರ್ಷಗಳ ಕಾಂಗ್ರೆಸ್ ಆಡಳಿತದಿಂದ ಜನರು ಬೇಸತ್ತಿದ್ದಾರೆ. ಗ್ಯಾರಂಟಿ ಯೋಜನೆಗಳ ನೆಪದಲ್ಲಿ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿವೆ. ಬರಗಾಲದ ಸಂದರ್ಭದಲ್ಲಿ ನೀರಿನ ಸಮಸ್ಯೆ ಎದುರಾಗುತ್ತಿದ್ದರೂ ಮುಂಜಾಗ್ರತಾ ಕ್ರಮ ಕೈಗೊಳ್ಳಲು ಸರ್ಕಾರದ ಬಳಿ ಹಣವಿಲ್ಲದಂತಾಗಿದೆ. ವಿವಿಧ ಯೋಜನೆಗಳ ಅನುದಾನವನ್ನು ಬೇರೆಡೆಗೆ ವರ್ಗಾಯಿಸುವ ಮೂಲಕ ಆರ್ಥಿಕ ಹಿನ್ನಡೆಗೆ ಕಾರಣವಾಗಿದೆ ಎಂದು ಆರೋಪಿಸಿದರು.

ಮುಖ್ಯಮಂತ್ರಿ ಸೇರಿದಂತೆ ಸಚಿವರು ರಾಜ್ಯದ ಅಭಿವೃದ್ಧಿಗೆ ಆದ್ಯತೆ ನೀಡುತ್ತಿಲ್ಲ. ಕಾಂಗ್ರೆಸ್ ಸರ್ಕಾರದ ಮೂರೂವರೆ ವರ್ಷದ ಆಡಳಿತ ವೈಫಲ್ಯ ಹಾಗೂ ಜನವಿರೋಧಿ ನೀತಿಗಳನ್ನು ಖಂಡಿಸಿ ಜಿಲ್ಲೆಯಾದ್ಯಂತ ಬಿಜೆಪಿ ವತಿಯಿಂದ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ತಾಲೂಕು ಬಿಜೆಪಿ ಅಧ್ಯಕ್ಷ ನಿಂಗಪ್ಪ ಬಟ್ಟಲಕಟ್ಟಿ, ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷ ವಿಜಯ ಮಾಳಗಿ, ಎಪಿಎಂಸಿ ಮಾಜಿ ಸದಸ್ಯ ಶಂಕರಗೌಡ್ರ ಪಾಟೀಲ, ಸುಭಾಸ ಮಾಳಗಿ, ವಿನಯ ಹಿರೇಮಠ, ಜೀತೇಂದ್ರ ಸುಣಗಾರ ಸೇ–ರಿದಂತೆ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಪಾಲ್ಗೊಂಡಿದ್ದರು.

ಪೌರ ಕಾರ್ಮಿಕರ ಅನಿರ್ದಿಷ್ಟಾವಧಿ ಮುಷ್ಕರ ಆರಂಭ

5 ದಿನಗಳಲ್ಲಿ ಭರವಸೆ ನೀಡದಿದ್ದರೆ ಕುಟುಂಬ ಸಮೇತ ಸರಣಿ ಪ್ರತಿಭಟನೆ ಎಚ್ಚರಿಕೆ

ಪಾಂಡವ ನ್ಯೂಸ್, ರಟ್ಟಿಹಳ್ಳಿ: ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ರಟ್ಟಿಹಳ್ಳಿ ಪಟ್ಟಣ ಪಂಚಾಯಿತಿ ಪೌರ ಕಾರ್ಮಿಕರು ಸೋಮವಾರದಿಂದ ಅನಿರ್ದಿಷ್ಟಾವಧಿ ಮುಷ್ಕರ ಆರಂಭಿಸಿದ್ದಾರೆ.

ಪೌರ ಕಾರ್ಮಿಕರ ಸಂಘದ ಅಧ್ಯಕ್ಷ ಮಂಜುನಾಥ ಛಲವಾದಿ ಮಾತನಾಡಿ, ಕಳೆದ 20 ವರ್ಷಗಳಿಂದ ಪಟ್ಟಣ ಪಂಚಾಯಿತಿಯಲ್ಲಿ ಸೇವೆ ಸಲ್ಲಿಸುತ್ತಿರುವ ಪೌರ ಕಾರ್ಮಿಕರ ಹುದ್ದೆಗಳನ್ನು ಕಾಯಂಗೊಳಿಸಬೇಕು. ಈ ಹಿಂದೆ ಗ್ರಾಮ ಪಂಚಾಯಿತಿ ಇದ್ದಾಗಿನಿಂದಲೂ ಸೇವೆ ಸಲ್ಲಿಸುತ್ತಿರುವ

23 ನೌಕರರನ್ನು ಪೌರ ಸೇವಾ ವೃಂದದಲ್ಲಿ ವಿಲೀನಗೊಳಿಸಬೇಕು. ಈ ಕುರಿತು ಹಲವು ಬಾರಿ ಮನವಿ ಸಲ್ಲಿಸಿ, ಪ್ರತಿಭಟನೆ ನಡೆಸಿದರೂ ಕೇವಲ ಭರವಸೆ ಮಾತ್ರ ದೊರೆತಿದೆ. ಇದುವರೆಗೂ ಯಾವುದೇ ನಿರ್ದಿಷ್ಟ ಭರವಸೆ ಸಿಗದ ಕಾರಣ ಅನಿರ್ದಿಷ್ಟಾವಧಿ ಹೋರಾಟಕ್ಕೆ ಮುಂದಾಗಿದ್ದೇವೆ ಎಂದರು.

ಬೆಂಗಳೂರು ನಗರಾಭಿವೃದ್ಧಿ ಇಲಾಖೆಯು ರಟ್ಟಿಹಳ್ಳಿ ಪಟ್ಟಣ ಪಂಚಾಯಿತಿಯ ಗ್ರಾಮ ಪಂಚಾಯಿತಿ



ಅವಧಿಯ 26 ಪೌರ ನೌಕರರನ್ನು ಪೌರ ಸೇವಾ ವೃಂದದಲ್ಲಿ ವಿಲೀನಗೊಳಿಸುವ ಪ್ರಸ್ತಾವನೆಗೆ ಒಪ್ಪಿಗೆ ನೀಡಲು ಸಾಧ್ಯವಿಲ್ಲವೆಂದು ತಿಳಿಸಿ, ಪ್ರಸ್ತಾವನೆಯನ್ನು ಪರಿಶೀಲನೆಯಿಂದ ಕೈಬಿಟ್ಟಿರುವುದು ನೌಕರರ ಕುಟುಂಬಗಳನ್ನು ಸಂಕಷ್ಟಕ್ಕೆ ತಳ್ಳಿದೆ. ಐದು ದಿನಗಳೊಳಗೆ ಬೇಡಿಕೆ ಈಡೇರಿಸುವ ಭರವಸೆ ನೀಡದಿದ್ದರೆ ಕುಟುಂಬ ಸಮೇತ ಸರಣಿ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು.

ಪ್ರತಿಭಟನೆಯಲ್ಲಿ ದೊಡ್ಡವೀರಪ್ಪ ದ್ಯಾವಕ್ಕಳವರ, ಸಂತೋಷ ಬಿಳಚಿ, ಅನುರಾಧ ಸುಣಗಾರ, ಚಂದ್ರಪ್ಪ ಹರಿಜನ, ನರಸಿಂಹ ಹರಿಜನ, ಭೀಮರಾಜ ಹೊಸಳ್ಳಿ, ಬಸವರಾಜ ಕವಲತ್ತು, ಫಜಲುಲ್ಲಾ ಖತೀಬ್, ಬಸವರಾಜ ಕಟ್ಟೇಕಾರ ಸೇರಿದಂತೆ ಪೌರ ಕಾರ್ಮಿಕರು ಭಾಗವಹಿಸಿದ್ದರು.

ಪ್ರತಿಭಾ ಪ್ರೇರಣಾ ಕಾರ್ಯಕ್ರಮ ಮಕ್ಕಳ ಬೆಳವಣಿಗೆಗೆ ಪೂರಕ: ರಾಘವೇಂದ್ರ ಮಾಳಮ್ಮನವರ



ಪಾಂಡವ ನ್ಯೂಸ್, ರಾಣೇಬೆನ್ನೂರು : ಮಕ್ಕಳಲ್ಲಿ ಹುದುಗಿರುವ ಸುಪ್ತ ಪ್ರತಿಭೆ ಹಾಗೂ ಕೌಶಲ್ಯಗಳನ್ನು ಗುರುತಿಸಿ, ಅವುಗಳನ್ನು ಅನಾವರಣಗೊಳಿಸಲು ಪ್ರತಿಭಾ ಪ್ರೇರಣಾ ಕಾರ್ಯಕ್ರಮಗಳು ಉತ್ತಮ ವೇದಿಕೆಯಾಗಿವೆ ಎಂದು ಮೆಡ್ಲೇರಿ ಕ್ಲಸ್ಟರ್ ಸಂಪನ್ಮೂಲ ವ್ಯಕ್ತಿ ರಾಘವೇಂದ್ರ ಮಾಳಮ್ಮನವರ ಹೇಳಿದರು.

ತಾಲೂಕಿನ ಮೆಡ್ಲೇರಿ ಗ್ರಾಮದ ಸ್ವಾಮಿ ವಿವೇಕಾನಂದ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಆಯೋಜಿಸಿದ್ದ ಮಕ್ಕಳ ದಿನಾಚರಣೆ ಹಾಗೂ ಪ್ರತಿಭಾ ಪ್ರೇರಣಾ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಇಂದಿನ ಮಕ್ಕಳೇ ನಾಳಿನ ಪ್ರಜೆಗಳು. ಮಕ್ಕಳಿಗೆ ಬಾಲ್ಯದಿಂದಲೇ ಶಿಕ್ಷಣದ ಜತೆಗೆ ಸಂಸ್ಕಾರ, ನೈತಿಕ ಮೌಲ್ಯ ಹಾಗೂ ಜೀವನ ಮೌಲ್ಯಗಳನ್ನು ಕಲಿಸುವುದು ಅಗತ್ಯ ಎಂದರು.

ಪಠ್ಯದ ಜತೆಗೆ ಪಠ್ಯೇತರ ಚಟುವಟಿಕೆಗಳಿಗೂ ಆದ್ಯತೆ ನೀಡಿದಾಗ ಮಕ್ಕಳಲ್ಲಿನ ವಿಭಿನ್ನ ಪ್ರತಿಭೆಗಳು ಅನಾವರಣಗೊಳ್ಳುತ್ತವೆ. ಮಕ್ಕಳ ಸರ್ವತೋಮುಖ ಬೆಳವಣಿಗೆಯಲ್ಲಿ ಶಾಲೆ, ಶಿಕ್ಷಕರು ಹಾಗೂ ಪಾಲಕರ ಜವಾಬ್ದಾರಿ ಮಹತ್ವದ್ದಾಗಿದೆ. ಮಕ್ಕಳ ಪ್ರತಿಭೆ ಗುರುತಿಸಿ ಪ್ರೋತ್ಸಾಹಿಸುವ ಇಂತಹ ಕಾರ್ಯಕ್ರಮಗಳು ಅವರಲ್ಲಿ ಆತ್ಮವಿಶ್ವಾಸ ಹೆಚ್ಚಿಸಲು ಸಹಕಾರಿಯಾಗುತ್ತವೆ ಎಂದರು.

ಶಾಲೆಯ ಮುಖ್ಯ ಶಿಕ್ಷಕ ಹನುಮಂತ ಚಿತ್ತೇನಹಳ್ಳಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕನ್ನಡ ಸಾಹಿತ್ಯ ಪರಿಷತ್ತಿನ ಮೆಡ್ಲೇರಿ ಘಟಕದ ಅಧ್ಯಕ್ಷ ಮಾರುತಿ ತಳವಾರ, ಯುವ ಮುಖಂಡ ಭರಮಪ್ಪ ಕುದರಿಹಾಳ ಮುಖ್ಯ ಅತಿಥಿಗಳಾಗಿದ್ದರು. ನಿವೃತ್ತ ಶಿಕ್ಷಕ ಆರ್.ಡಿ. ಹೊಂಬರಡಿ ಅಧ್ಯಕ್ಷತೆ ವಹಿಸಿದ್ದರು.

ಸನ್ಮಾನ: ಹಾವೇರಿ ಜಿಲ್ಲಾಡಳಿತದ ಜಿಲ್ಲಾ ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿಗೆ ಭಾಜನರಾದ ಮೆಡ್ಲೇರಿ ಗ್ರಾಮದ ಮಾರುತಿ ತಳವಾರ ಅವರನ್ನು ಶಾಲೆಯ ವತಿಯಿಂದ ಸನ್ಮಾನಿಸಲಾಯಿತು. ಡಿ.ವೈ. ಮುದಕಣ್ಣನವರ, ಎಂ.ಕೆ. ಅರ್ಕಾಚಾರಿ, ಎಂ.ಜಿ. ನಾಶಿಪುಡಿ, ಅಭಿಷೇಕ ನಾಯಕ, ಶಿವಾನಂದ ಮಾಷ್ಕಿ, ಪಿ.ಎಸ್. ಶೆಟ್ಟರ್, ಶೋಭಾ ಕುಂಚೂರು, ದೀಪಾ ಕಿಲಾರದ ಸೇರಿದಂತೆ ಶಿಕ್ಷಕರು, ಪಾಲಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

ಆರ್.ವಿ. ಮಠದ ಸ್ವಾಗತಿಸಿದರು. ಅಭಿಷೇಕ ನಾಯ್ಕರ್ ನಿರೂಪಿಸಿದರು. ಎಂ.ಜೆ. ನಾಶಿಪುಡಿ ವಂದಿಸಿದರು.

ಮಕ್ಕಳ ಮಾರಾಟ ಜಾಲ, ಶೋಷಣೆ ತಡೆಗೆ ಸಾಹಿತ್ಯದ ಶಕ್ತಿ ಅಗತ್ಯ: ಆನಂದ ಪಾಟೀಲ

ಶೇಷಗಿರಿಯಲ್ಲಿ ಶಾಂತಿ ಕೆ. ಅಪ್ಪಣ್ಣ ಅವರಿಗೆ ಸೃಜನ ಅನುವಾದ ಪ್ರಶಸ್ತಿ ಪ್ರದಾನ

ಪಾಂಡವ ನ್ಯೂಸ್, ಹಾನಗಲ್ಲ: ಮಾನವ ರೂಪದಲ್ಲಿರುವ ಕೆಲವರು ದುಷ್ಟ ಪ್ರಾಣಿಗಳಂತೆ ವರ್ತಿಸುತ್ತಿರುವುದರಿಂದ ಸಮಾಜದಲ್ಲಿ ಶೋಷಣೆ ನಿರಂತರವಾಗಿದೆ. ಇಂತಹ ಅನ್ಯಾಯಗಳನ್ನು ಬಯಲಿಗೆಳೆದು, ಅವುಗಳ ವಿರುದ್ಧ ಜನರಲ್ಲಿ ಜಾಗೃತಿ ಮೂಡಿಸುವ ಶಕ್ತಿ ಸಾಹಿತ್ಯಕ್ಕಿದೆ ಎಂದು ಖ್ಯಾತ ಸಾಹಿತಿ ಆನಂದ ಪಾಟೀಲ ಹೇಳಿದರು.

ತಾಲೂಕಿನ ಶೇಷಗಿರಿ ಗ್ರಾಮದ ಸಿ.ಎಂ. ಉದಾಸಿ ಕಲಾಕ್ಷೇತ್ರದಲ್ಲಿ ಗಜಾನನ ಯುವಕ ಮಂಡಳದ ವತಿಯಿಂದ ಆಯೋಜಿಸಿದ್ದ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಶಾಂತಿ ಕೆ. ಅಪ್ಪಣ್ಣ ಅವರಿಗೆ ಸೃಜನ ಅನುವಾದ ಪ್ರಶಸ್ತಿ ಪ್ರದಾನ ಮಾಡಿ ಅವರು ಮಾತನಾಡಿದರು.

ತಮಿಳಿನ ಬಿ. ಜಯಮೋಹನ್ ಅವರ ಏಳಾಂ ಉಲಗಂ ಕಾದಂಬರಿಯನ್ನು 'ತಳಾತಳ' ಶೀರ್ಷಿಕೆಯಡಿ ಕನ್ನಡಕ್ಕೆ ಅನುವಾದಿಸಿದ್ದಕ್ಕಾಗಿ ಶಾಂತಿ ಕೆ. ಅಪ್ಪಣ್ಣ ಅವರಿಗೆ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಮಕ್ಕಳ ಮಾರಾಟ ಜಾಲ, ಭಿಕ್ಷಾಟನೆಗೆ ಮಕ್ಕಳನ್ನು ಬಳಸಿಕೊಳ್ಳುವ ವ್ಯಾಪಾರೀಕರಣ ಹಾಗೂ ದರ್ಪದ ದೌರ್ಜನ್ಯಗಳು ಸಮಾಜದ ಮುಂದಿರುವ ಗಂಭೀರ ಸಮಸ್ಯೆಗಳಾಗಿವೆ. ಇವುಗಳಿಗೆ ಅಂತ್ಯ ಹಾಡಲು ಸಮಾಜ, ಸಾಹಿತ್ಯ ಮತ್ತು ಸಮಾನ ಮನಸ್ಕರು ಒಟ್ಟಾಗಿ ಚಿಂತಿಸಬೇಕು. ಸುಸಂಸ್ಕೃತ ಸಮಾಜದಲ್ಲಿ ವೃದ್ಧಾಶ್ರಮಗಳು ಹೆಚ್ಚುತ್ತಿರುವುದು ವಿಪರ್ಯಾಸ. ಮನುಷ್ಯನ ಕ್ರೌರ್ಯಕ್ಕೆ ಕಡಿವಾಣ ಹಾಕುವ



ಮಾರ್ಗಗಳನ್ನು ಹುಡುಕಬೇಕಿದೆ. ಬೇರೆ ಭಾಷೆಗಳಲ್ಲಿನ ಉತ್ತಮ ಸಾಹಿತ್ಯ ಕೃತಿಗಳನ್ನು ಕನ್ನಡಕ್ಕೆ ಅನುವಾದಿಸುವುದು ಮಹತ್ವದ ಜವಾಬ್ದಾರಿಯಾಗಿದೆ ಎಂದರು.

ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ಶಾಂತಿ ಕೆ. ಅಪ್ಪಣ್ಣ, ಒಂದು ಭಾಷೆಯಿಂದ ಮತ್ತೊಂದು ಭಾಷೆಗೆ ಸಾಹಿತ್ಯವನ್ನು ಅನುವಾದಿಸುವುದು ತಾಳ್ಮೆ ಮತ್ತು ಶ್ರದ್ಧೆ ಬೇಡುವ ಕಠಿಣ ಕೆಲಸ. ಸಮಾಜಕ್ಕೆ ಒಳ್ಳೆಯ ಸಂದೇಶ ನೀಡುವ ಕೃತಿಗಳನ್ನು ಎಷ್ಟೇ ಕಷ್ಟವಾದರೂ ಅನುವಾದಿಸಿ ಓದುಗರಿಗೆ ತಲುಪಿಸಬೇಕು. ಸಮಾಜದಲ್ಲಿ ನಮ್ಮ ಅರಿವಿಗೆ ಬಾರದ ಅನೇಕ ಶೋಷಣೆಗಳು ನಡೆಯುತ್ತಿವೆ ಎಂಬುದನ್ನು ಸಾಹಿತ್ಯ ಗುರುತಿಸಬಲ್ಲದು. ಮಕ್ಕಳನ್ನು ವಸ್ತುಗಳಂತೆ ಮಾರಾಟ ಮಾಡಿ ಹಣ ಗಳಿಸುವ ಕ್ರೂರ ವ್ಯವಸ್ಥೆಯನ್ನು ಅನಾವರಣಗೊಳಿಸುವ ಕಾದಂಬ–ರಿಯನ್ನು ಕನ್ನಡಕ್ಕೆ ಅನುವಾದಿಸಿರುವ ತೃಪ್ತಿ ನನಗಿದೆ ಎಂದರು.

ಮುಖ್ಯ ಅತಿಥಿಗಳಾಗಿ ಸಾಹಿತಿಗಳಾದ ಲಿಂಗರಾಜ ಸೊಟ್ಟಪ್ಪನವರ ಹಾಗೂ ಮಾರುತಿ ಶಿಡ್ಲಾಪುರ ಮಾತನಾಡಿದರು. ಕಾವ್ಯಕ್ಕೆ ದೊಡ್ಡ ಶಕ್ತಿಯಿದೆ. ಸಾಹಿತ್ಯಕ್ಕೆ ಜವಾಬ್ದಾರಿಯುತ ಬರವಣಿಗೆ ಅಗತ್ಯ. ಮನಸ್ಸು ತೆರೆದು ಬರೆಯುವ ಕವಿತೆ ಓದುಗರ ಮನಮುಟ್ಟಬೇಕು. ಕೇವಲ ಭಾವನೆಗಳನ್ನು ಹೇಳುವುದಕ್ಕಿಂತ ಬದುಕಿಗೆ ಹತ್ತಿರವಾಗುವ ಕಾವ್ಯ ರಚನೆಯಾಗಬೇಕು ಎಂದು ಅಭಿಪ್ರಾಯಪಟ್ಟರು.

ಗಜಾನನ ಯುವಕ ಮಂಡಳದ ಅಧ್ಯಕ್ಷ ಪ್ರಭು ಗುರುಪಾದನವರ ಅಧ್ಯಕ್ಷತೆ ವಹಿಸಿದ್ದರು. ಸಾಹಿತಿ ಜಿ.ಆರ್. ರೇವಣಸಿದ್ಧಪ್ಪ, ಉಪನ್ಯಾಸಕ ನಾಗರಾಜ ಧಾರೇಶ್ವರ, ರಂಗ ನಿರ್ದೇಶಕ ಎಸ್.ಎಲ್. ಸಂತೋಷ ವೇದಿಕೆಯಲ್ಲಿದ್ದರು. ಸಿದ್ದಪ್ಪ ಕೊಂಡೋಜಿ ಸ್ವಾಗತಿಸಿದರು. ಸಂದೀಪ ಹೊನಗೊಂದರ ಕಾರ್ಯಕ್ರಮ ನಿರೂಪಿಸಿದರು. ಜಮೀರ್ ಪಠಾಣ ಹಾಗೂ ಸೋಮು ಗುರುಪಾದನವರ ಅತಿಥಿಗಳನ್ನು ಪರಿಚಯಿಸಿದರು.

ಕವಿಗೋಷ್ಠಿ : ಕನ್ನಡ ರಾಜ್ಯೋತ್ಸವ ಅಂಗವಾಗಿ ನಡೆದ ಕವಿಗೋಷ್ಠಿಯಲ್ಲಿ ಜಿ.ಆರ್. ರೇವಣಸಿದ್ಧಪ್ಪ, ಪ್ರವೀಣ ಬಾತನಾಳ, ಮಾರುತಿ ಕೊರಗರ, ಡಾ. ಕೃಷ್ಣಮೂರ್ತಿ ಉಡೇವು, ಪಾರ್ವತಿಬಾಯಿ ಕಾಶೀಕರ, ರಾಜೇಶ್ವರಿ ತಿರುಮಲೆ, ವೀರೇಂದ್ರ ನವಾತಿ, ಯೋಗೇಂದ್ರಾಚಾರ್ಯ ಗಣೇಶ ಜೋಗಿ ಹಾಗೂ ಚೆನ್ನಬಸಪ್ಪ ಚಕ್ರಸಾಲಿ ಸ್ವರಚಿತ ಕವನಗಳನ್ನು ವಾಚಿ